ಸಂಪುಟ: 06 ಸಂಚಿಕೆ: 73 ಪುಟಗಳು: 08 ಬುಧವಾರ 27 ಮೇ 2026
www.udayavahini.in epaper.udayavahini.in Udaya vahini news Udaya vahini news Udayavahini news youGÓ...qbe udayavahininews@gmail.

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

**ಮುಂಜಾನೆ ಮಾತು**
ಇತರರಿಗೆ ಒಳಿತನ್ನುಂಟು ಮಾಡಬಲ್ಲ ಸುಳ್ಳು, ತೊಡಕುಂಟು ಮಾಡಬಹುದಾದ ಸತ್ಯಕ್ಕಿಂತ ಶ್ರೇಷ್ಠ.
ಮಾತಿನಲ್ಲಿ ಒಳಿತು ಕೆಡುಕುಗಳ ವಿವೇಚನೆಯಿರಲಿ.

# ಉದಯ ವಾಹಿನಿ
ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಈ ಬಾರಿ ನನಗೆ ಮಂತ್ರಿ ಸ್ಥಾನ ಕೊಡಬೇಕು : ಪುಟ್ಟರಂಗಶೆಟ್ಟಿ ಬಿಗಿಪಟ್ಟು

• ಉದಯವಾಹಿನಿ, ಬೆಂಗಳೂರು



ಈ ಬಾರಿ ನನಗೆ ಮಂತ್ರಿ ಸ್ಥಾನ ಕೊಡಬೇಕು ಎಂದು ಚಾಮರಾಜನಗರ ಶಾಸಕ ಪುಟ್ಟರಂಗಶೆಟ್ಟಿ ಬಿಗಿಪಟ್ಟು ಹಿಡಿದಿದ್ದಾರೆ. ಮಾತನಾಡಿದ ಅವರು, ಹೈಕಮಾಂಡ್‌ಗೆ ಯಾರಿಗೆ ಪಟ್ಟಕಟ್ಟಿದರೆ ಉತ್ತಮ ಎಂದು ಗೊತ್ತಿದೆ. ಖರ್ಗೆ ಅವರು ಕರ್ನಾಟಕದವರೇ ಅವರಿಗೆ ಗೊತ್ತಿಲ್ವಾ? ರಾಹುಲ್ ಗಾಂಧಿ ಎಲ್ಲಾ ಮಾಹಿತಿ ತರಿಸಿಕೊಂಡಿದ್ದಾರೆ. ಯಾವ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಹೈಕಮಾಂಡ್‌ಗೆ ಗೊತ್ತಿದೆ. ಹೀಗಾಗಿ ನಾನು ಸಂಪುಟ ಪುನರ್ ರಚನೆಯ ನಿರೀಕ್ಷೆಯಲ್ಲಿದ್ದೇನೆ. ಕಳೆದ ಬಾರಿ ನನಗೆ ಕಡೆಯ ಕ್ಷಣದಲ್ಲಿ ಮಂತ್ರಿ ಸ್ಥಾನ ತಪ್ಪಿದೆ. ಈ ಬಾರಿ ಅವಕಾಶ ಕೊಡಬೇಕು ಎಂದು ಮನವಿ ಮಾಡಿದ್ದೇನೆ. ಇಂದು ಸಿಎಂ ಭೇಟಿ ಮಾಡುತ್ತೇನೆ, ಬಳಿಕ ಖರ್ಗೆ ಅವರನ್ನು ಭೇಟಿ ಮಾಡಿ ಮನವಿ ಮಾಡಲಿದ್ದೇನೆ ಎಂದು ತಿಳಿಸಿದ್ದಾರೆ.

## ಬಿಡದಿ ಟೌನ್‌ಶಿಪ್ ಭೂಸ್ವಾಧೀನ ವಿರೋಧಿಸಿ ನಿಖಿಲ್ ಕುಮಾರಸ್ವಾಮಿ ಸಂವಾದ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು,- ನಮ್ಮ ಭೂಮಿ ನಮ್ಮ ಹಕ್ಕು ಘೋಷಣೆಯೊಂದಿಗೆ ಬಿಡದಿ ಟೌನ್‌ಶಿಪ್ ಭೂಸ್ವಾಧೀನವನ್ನು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ತೀವ್ರವಾಗಿ ವಿರೋಧಿಸಿದ್ದಾರೆ.

ಇಲ್ಲಿ ರೈತರೇ ಇಲ್ಲ ಎಂದು ಹೇಳುವವರ ಕಣ್ಣು ತೆರೆಸಲು (27ರಂದು )ಬೆಳಿಗ್ಗೆ 10 ಗಂಟೆಯಿಂದ ಮಾಗಡಿ ಕ್ಷೇತ್ರದ 26 ಗ್ರಾಮಗಳಲ್ಲಿ ರೈತರೊಂದಿಗೆ ಸಂವಾದ ನಡೆಸುವುದಾಗಿ ಘೋಷಿಸಿದ್ದಾರೆ. ಬಿಡದಿ ಟೌನ್‌ಶಿಪ್ ಪ್ರಶ್ನೆ ಅಲ್ಲ, ಅದು ರೈತರ ಬದುಕಿನ ಪ್ರಶ್ನೆ. ಟೌನ್‌ಶಿಪ್ ಮಾಡುತ್ತಿರುವ ಜಾಗದಲ್ಲಿ ರೈತರೇ ಇಲ್ಲ ಎಂದು ಹೇಳುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಇದು ನನ್ನ ಸವಾಲು ಎಂದು ಹೇಳಿದ್ದಾರೆ.

ರೈತರ ಕಷ್ಟ-ಸುಖ ಆಲಿಸಿ ವಾಸ್ತವ ಸ್ಥಿತಿ ಏನೆಂದು ತೋರಿಸಲು ಈ ಗ್ರಾಮ ಭೇಟಿ ಹಮಿಕೊಂಡಿದ್ದು, ಇಡೀ ನಾಡಿಗೆ ಅನ್ನ ನೀಡುವ ಈ ಭೂಮಿ ನಮಗೆ ಬರಿ ಮಣ್ಣಲ್ಲ, ಅದು ನಮ ಹೆತ್ತ ತಾಯಿ. ಕೋಟ್ಯಂತರ ರೂಪಾಯಿ ತಂದುಕೊಟ್ಟರೂ ಹೆತ್ತ ತಾಯಿಯನ್ನು ಯಾರಾದರೂ ಮಾರಿಕೊಳ್ಳಲು ಸಾಧ್ಯವೇ? ಇದು ಅಭಿವೃದ್ಧಿಯಲ್ಲ, ವಿನಾಶ ಎಂದು ಆಕ್ರೋಶ ವ್ಯಕ್ತಪಡಿಸಿದರು.9,600 ಎಕರೆ ಫಲವತ್ತಾದ ಭೂಮಿ ಬಲಿ, 10 ಲಕ್ಷಕ್ಕೂ ಹೆಚ್ಚು ಮರಗಳ ಮಾರಣಹೋಮ, ತಿಂಗಳಿಗೆ 6 ಲಕ್ಷ ಲೀಟರ್ ಹಾಲು ಉತ್ಪಾದನೆಗೆ ಹೊಡೆತ, ರೇಷ್ಮೆ-ತೋಟಗಾರಿಕೆಗೆ ಕುತ್ತು ಬರಲಿದೆ. ಈ ಹಿನ್ನೆಲೆಯಲ್ಲಿ ಮಾಜಿ ಶಾಸಕ ಎ.ಮಂಜುನಾಥ್ ಅವರೊಂದಿಗೆ ಬೈರಮಂಗಲ, ಕಂಚಗಾರನಹಳ್ಳಿ, 3. ಅರಳಾಳುಸಂದ್ರ, ಹೊಸೂರು, ಬನ್ನಿಗಿರಿ ಸೇರಿದಂತೆ ಇತರ ಗ್ರಾಮಗಳಲ್ಲಿ ನಿಖಿಲ್ ಕುಮಾರಸ್ವಾಮಿಯವರು ಸಂವಾದ ನಡೆಸಲಿದ್ದಾರೆ.

## ಕರ್ನಾಟಕದಲ್ಲಿ ರಾಜ್ಯ ಸರ್ಕಾರವೇ ಇಲ್ಲ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಲ್ಲಿ ರಾಜ್ಯ ಸರ್ಕಾರವೇ ಇಲ್ಲ ಎಂದು ಮಾಜಿ ಸಚಿವ ಅರಗ ಜ್ಞಾನೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಸಿಎಂ-ಡಿಸಿಎಂ ಕುರ್ಚಿ ಕಿತ್ತಾಟ ದೆಹಲಿಗೆ ಶಿಫ್ಟ್ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕರ್ನಾಟಕದಲ್ಲಿ ರಾಜ್ಯ ಸರ್ಕಾರ ಇಲ್ಲ, ನಿನ್ನೆಯಿಂದ ದೆಹಲಿಗೆ ಕರ್ನಾಟಕ ಸರ್ಕಾರ ಸ್ಥಳಾಂತರ ಆಗಿದೆ. ಕರ್ನಾಟಕ ಸರ್ಕಾರ ದೆಹಲಿಯಿಂದ ಕಾರ್ಯ ನಿರ್ವಹಿಸುವ ದುಸ್ಥಿತಿಗೆ ಇಳಿದಿದೆ ಎಂದು ಕಿಡಿಕಾರಿದರು. ಅಧಿಕಾರಕ್ಕೆ ಬಂದು ಮೂರು ವರ್ಷ ಆಗಿದೆ. ಅಧಿಕಾರದ ಹಪಹಪಿಯಲ್ಲಿ ಕಚ್ಚಾಡುತ್ತಿದ್ದಾರೆ. ಯಾರು ಸಿಎಂ ಆಗಬೇಕು, ಯಾವಾಗ ಆಗಬೇಕು ಅಂತ ಚರ್ಚೆ ನಡೆಯುತ್ತಿದೆ. ಜನರಿಗೆ ತೆರಿಗೆ ಹೊರೆ ಹಾಕಿ ಜನರನ್ನ ಸುಲಿಗೆ ಮಾಡುತ್ತಿದ್ದಾರೆ ಎಂದು ಹರಿಹಾಯ್ದರು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಮಣ್ಣುಪಾಲು ಆಗಿದೆ. ಪೊಲೀಸರನ್ನ ಹೊಡೆದವರ ಕೇಸ್ ವಿತ್ ಡ್ರಾ ಮಾಡಿದ್ದಾರೆ.

## ಶಿಕ್ಷೆ ಅಮಾನತು ಕೋರಿದ್ದ ಅರ್ಜಿ ವಿಚಾರಣೆ ಮುಂದೂಡಿದ ಹೈಕೋರ್ಟ್

• ಉದಯವಾಹಿನಿ, ಬೆಂಗಳೂರು

ಧಾರವಾಡದ ಬಿಜೆಪಿ ಮುಖಂಡ ಯೋಗೀಶ್ ಗೌಡ ಕೊಲೆ ಪ್ರಕರಣದಲ್ಲಿ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ವಿಧಿಸಿರುವ ಜೀವಾವಧಿ ಶಿಕ್ಷೆ ರದ್ದುಪಡಿಸುವಂತೆ ಕೋರಿ ಮಾಜಿ ಶಾಸಕ ವಿನಯ್ ಕುಲಕರ್ಣಿ ಮತ್ತಿತರರು ಸಲ್ಲಿಸಿದ್ದ ಅರ್ಜಿಯ ವಿಚಾರಣೆಯನ್ನು ಹೈಕೋರ್ಟ್, ಬೇಸಿಗೆ ರಜೆ ನಂತರ ನಿಗದಿಪಡಿಸಲಾಗುವುದು ಎಂದು ತಿಳಿಸಿದೆ.


ವಿಚಾರಣಾ ನ್ಯಾಯಾಲಯ ವಿಧಿಸಿದ್ದ ಶಿಕ್ಷೆಯ ಪ್ರಮಾಣವನ್ನು ಅಮಾನತ್ತಿನಲ್ಲಿಡಬೇಕು ಎಂದು ಕೋರಿ ವಿನಯ್ ಕುಲಕರ್ಣಿ, ಚಂದ್ರಶೇಖರ್ ಇಂಡಿ ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಸುನೀಲ್ ದತ್ ಯಾದವ್ ಮತ್ತು ನ್ಯಾಯಮೂರ್ತಿ ಎಸ್. ರಾಚಯ್ಯ ಅವರಿದ್ದ ನ್ಯಾಯಪೀಠ ಈ ಸೂಚನೆ ನೀಡಿ ವಿಚಾರಣೆ ಮುಂದೂಡಿದೆ. ಇದಕ್ಕೂ ಮುನ್ನ ನಡೆದ ವಿಚಾರಣೆ ವೇಳೆ ಅರ್ಜಿದಾರರ ಪರ ವಕೀಲರು, ಅರ್ಜಿಗೆ ಸಂಬಂಧಿಸಿದಂತೆ ಈವರೆಗೂ ಪ್ರತಿವಾದಿ ಸಿಬಿಐ ಪರ ವಕೀಲರು ಆಕ್ಷೇಪಣೆ ಸಲ್ಲಿಸಿಲ್ಲ. ಅಲ್ಲದೆ, ಅರ್ಜಿದಾರರಲ್ಲಿ ಒಬ್ಬರಾದ ವಿನಯ್ ಕುಲಕರ್ಣಿಗೆ ಶಿಕ್ಷೆ ಆಗಿರುವುದರಿಂದ ಶಾಸಕ ಸ್ಥಾನ ಕಳೆದುಕೊಂಡಿದ್ದು, ಮಧ್ಯಂತರ ಚುನಾವಣೆ ನಡೆಸುವುದಕ್ಕೆ ತಡೆ ನೀಡಬೇಕು ಎಂದು ಕೋರಿದರು.

# ಕೈ ಕಟ್ ಬಾಯ್ ಮುಚ್!

## ಯತೀಂದ್ರಗೆ ರಾಜ್ಯಸಭೆ ಆಫರ್?



ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದ್ದು, ಕಾಂಗ್ರೆಸ ಹೈಕಮಾಂಡ್ ಅಂಗಳದಲ್ಲಿ ಮುಖ್ಯಮಂತ್ರಿ ಕುರ್ಚಿಯ 'ಫೈನಲ್ ಫೈಟ್' ಆರಂಭವಾಗಿದೆ.ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರು ರಾಜ್ಯದಲ್ಲಿ ನಾಯಕತ್ವ ಬದಲಾವಣೆಗೆ ಸಂಬಂಧಿಸಿದಂತೆ ಮಂಗಳವಾರ ಮ್ಯಾರಥಾನ್ ಸಭೆಗಳನ್ನು ನಡೆಸುತ್ತಿದ್ದಾರೆ. ದೆಹಲಿಯ ಇಂದಿರಾ ಭವನದಲ್ಲಿ ರಾಹುಲ್ ಗಾಂಧಿ ಹಾಗೂ ಸಿಎಂ ಸಿದ್ದರಾಮಯ್ಯ ನಡುವೆ ಪ್ರತ್ಯೇಕ ಸಭೆ ನಡೆದಿದೆ. ಸುಮಾರು 45 ನಿಮಿಷಗಳ ಕಾಲ ಉಭಯ ನಾಯಕರ ಸಭೆ ನಡೆದಿದ್ದು, ಈ ವೇಳೆ ನಾಯಕತ್ವ ಬದಲಾವಣೆ ಬಗ್ಗೆ ಗಂಭೀರ ಚರ್ಚೆಯಾಗಿದೆ. ಇನ್ನು ಸಾಧಕ-ಬಾಧಕಗಳ ಬಗ್ಗೆಯೂ ಸಹ ಸಿದ್ದರಾಮಯ್ಯನವರು, ರಾಹುಲ್ ಗಾಂಧಿಗೆ ಮಾಹಿತಿ ನೀಡಿದ್ದಾರೆ ಎಂದು ತಿಳಿದುಬಂದಿದೆ. ಈ ಹೈವೋಲ್ಟೇಜ್ ಸಭೆಯಲ್ಲಿ ರಾಹುಲ್ ಗಾಂಧಿ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮನವೊಲಿಕೆಗೆ ಯತ್ನಿಸಿದ್ದು, ಹಲವು ಆಫರ್ ಗಳನ್ನು ನೀಡಿದ್ದಾರೆ ಎಂದು ಉನ್ನತ ಮೂಲಗಳು ತಿಳಿಸಿವೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಸಿಎಂ ಸಿದ್ದರಾಮಯ್ಯ ಅವರಿಗೆ ರಾಷ್ಟ್ರ ರಾಜಕಾರಣಕ್ಕೆ ಆಹ್ವಾನಿಸಿದ್ದು, ಅವರನ್ನು ರಾಜ್ಯಸಭೆಗೆ ಆಯ್ಕೆ ಮಾಡುವ ಆಫರ್ ನೀಡಿದ್ದಾರೆ. ಆದರೆ ಈ ಆಫರ್ ಅನ್ನು ಸಿಎಂ ಸಿದ್ದರಾಮಯ್ಯ ಅವರು ನಿರಾಕರಿಸಿದ್ದಾರೆ ಎನ್ನಲಾಗಿದೆ.ಇನ್ನು ಸಿಎಂ ಬದಲಾವಣೆಗೆ ಸಿದ್ದರಾಮಯ್ಯ ಒಪ್ಪಿಕೊಂಡರೆ, ಡಿಕೆ ಶಿವಕುಮಾರ್ ಅವರ ಸಂಪುಟದಲ್ಲಿ ಪುತ್ರ ಯತೀಂದ್ರ ಸಿದ್ದರಾಮಯ್ಯ ಅವರನ್ನು ಉಪ ಮುಖ್ಯಮಂತ್ರಿ ಮಾಡುವ ಭರವಸೆಯನ್ನು ರಾಹುಲ್ ಗಾಂಧಿ ನೀಡಿದ್ದಾರೆ.



• ಉದಯವಾಹಿನಿ, ಬೆಂಗಳೂರು

ನಾಯಕತ್ವ ಬದಲಾವಣೆ ಹಾಗೂ ಪವರ್ ಫೈಟ್ ವಿಚಾರ ದೆಹಲಿ ಅಂಗಳ ತಲುಪಿತ್ತು. ಕಾಂಗ್ರೆಸ್ ಹೈಕಮಾಂಡ್ ಇವತ್ತು ಬೆಳಗಿನಿಂದ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿಕೆ ಶಿವಕುಮಾರ್ ಜೊತೆ ಸಾಲು ಸಾಲು ಸಭೆ ನಡೆಸಿದ್ದರು. ಇದೀಗ ಕೊನೆಗೂ ಉಭಯ ನಾಯಕರೊಂದಿಗೆ ಹೈಕಮಾಂಡ್ ನಾಯಕರ ಸಭೆ ಮುಕ್ತಾಯವಾಗಿದೆ. ಸಭೆ ಮುಗಿದ ಬೆನ್ನಲ್ಲೇ ಕಾಂಗ್ರೆಸ್ ಹೈಕಮಾಂಡ್ ಸಿದ್ದು- ಡಿಕೆಶಿ ಬೆಂಬಲಿಗರಿಗೆ ವಾರ್ನಿಂಗ್ ಕೊಟ್ಟಿದೆ.

**ಚರ್ಚೆಯ ಗುಟ್ಟು ಬಿಟ್ಟುಕೊಡದ ಹೈಕಮಾಂಡ್:** ಕೇವಲ ಕರ್ನಾಟಕ ಮಾತ್ರವಲ್ಲದೆ ಇಡೀ ದೇಶದ ಚಿತ್ತ ದೆಹಲಿಯತ್ತ ನೆಟ್ಟಿತ್ತು. ರಾಹುಲ್ ಗಾಂಧಿ ಸೇರಿದಂತೆ ಹೈಕಮಾಂಡ್ ನಾಯಕರು ಸಾಲು ಸಾಲು ಮ್ಯಾರಥಾನ್ ಸಭೆ ನಡೆಸಿದ್ದರು. ಆದರೆ, ಸಭೆ ಮುಕ್ತಾಯ ಬಳಿಕ ಕಾಂಗ್ರೆಸ್ ಹೈಕಮಾಂಡ್ ನಾಯಕತ್ವ ಬಿಕ್ಕಟ್ಟು ಚರ್ಚೆಯ ಯಾವುದೇ ಗುಟ್ಟು ಬಿಟ್ಟುಕೊಡದೆ ಸೈಲೆಂಟ್ ಆಗಿದೆ. ಇದರ ಜೊತೆ ಯಾರೂ ಬಹಿರಂಗ ಹೇಳಿಕೆ ಕೊಡದಂತೆ ತಾಕೀತು ಕೂಡ ಮಾಡಿದೆ. ಸಿಎಂ ಹಾಗೂ ಡಿಸಿಎಂಗೆ ತಮ್ಮ ಬೆಂಬಲಿಗರಿಗೆ ಖಡಕ್ ಆಗಿ ಸೂಚಿಸುವಂತೆ ಕಾಂಗ್ರೆಸ್ ಹೈಕಮಾಂಡ್ ತಿಳಿಸಿದೆ. ಇನ್ನು, ಸಿಎಂ ಡಿಸಿಎಂ ಜೊತೆ ಚರ್ಚೆ ಮುಕ್ತಾಯದ ಬಳಿಕ ಕೆ.ಸಿ. ವೇಣುಗೋಪಾಲ್ ಪ್ರತಿಕ್ರಿಯೆ ನೀಡಿದ್ದಾರೆ. ಸಭೆಯಲ್ಲಿ ರಾಜ್ಯಸಭೆ, ಎಂಎಲ್‌ಸಿ ಚುನಾವಣೆಗಳ ಚರ್ಚೆ ನಡೆಸಲಾಗಿದೆ. ಕುರ್ಚಿ ಕಚ್ಚಾಟದ ಬಗ್ಗೆ ಯಾವುದೇ ಚರ್ಚೆ ಆಗಿಲ್ಲ, ಕರ್ನಾಟಕ ಸೇರಿ ಇತರೆ ರಾಜ್ಯಗಳ ವಿಚಾರದ ಮಾತುಕತೆಯಾಗಿದೆ. ಯಾವುದೇ ಊಹಾಪೋಹಗಳು ಬೇಡ, ಹೈಕಮಾಂಡ್ ಮಟ್ಟದಲ್ಲಿ ಚರ್ಚೆ ಆಗಿಲ್ಲ ಎಂದು ಹೇಳುವ ಮೂಲಕ ಕೆ.ಸಿ. ವೇಣುಗೋಪಾಲ್ ಸಿಎಂ, ಡಿಸಿಎಂ ಕುರ್ಚಿ ಕಚ್ಚಾಟಕ್ಕೆ ಬ್ರೇಕ್ ಹಾಕಿದ್ದಾರೆ.

**ಕಾಂಗ್ರೆಸ್ ಕಚೇರಿಯಲ್ಲಿ ಸಿಎಂ-ಡಿಸಿಎಂ ಮುಖಾಮುಖಿ:** ಸಭೆಗೂ ಮುನ್ನ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ.ಶಿವಕುಮಾರ್ ಮಾತುಕತೆ ನಡೆಸಿದರು. ಜೊತೆಗೆ, ಪಕ್ಷದ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಮತ್ತು ರಣದೀಪ್ ಸುರ್ಜೇವಾಲ ಅವರನ್ನು ಸಿಎಂ ಸಿದ್ದರಾಮಯ್ಯ ಭೇಟಿ ಮಾಡಿದರು. ಇನ್ನು ದೆಹಲಿಯ ಕರ್ನಾಟಕ ಭವನದಲ್ಲಿ ಮಾತನಾಡಿದ ಸಚಿವ ಎಂ.ಬಿ.ಪಾಟೀಲ್, ಸಿಎಂ ಸಿದ್ದರಾಮಯ್ಯನವರು ಹೈಕಮಾಂಡ್ ಭೇಟಿ ಮಾಡಲಿದ್ದಾರೆ. ಮುಂದಿನ ರಾಜ್ಯಸಭೆ ಅಥವಾ ವಿಧಾನ ಪರಿಷತ್ ಚುನಾವಣೆಯ ಬಗ್ಗೆ ಚರ್ಚೆ ನಡೆಯಬಹುದು. ಜೊತೆಗೆ, ಸಂಪುಟ ಪುನರ್ ರಚನೆಯ ಬಗ್ಗೆಯೂ ಇರಬಹುದು. ಈ ಸಭೆಯ ಬಗ್ಗೆ ರಾಹುಲ್ ಗಾಂಧಿ ಅವರಿಗೆ ಮಾತ್ರ ಗೊತ್ತಿದೆ ಎಂದರು. ಸಿಎಂ ಸಿದ್ದರಾಮಯ್ಯ ದೆಹಲಿ ಭೇಟಿಯಿಂದ ರಾಜ್ಯ ರಾಜಕೀಯದಲ್ಲಿನ ಗೊಂದಲಕ್ಕೆ ತೆರೆ ಬೀಳಲಿದೆಯಾ ಎಂಬ ಕುತೂಹಲ ಮೂಡಿದೆ. ಹಿರಿಯ ಸಚಿವ ಕೆ.ಹೆಚ್.ಮುನಿಯಪ್ಪ ರಾಜ್ಯದಲ್ಲಿನ ಕಾಂಗ್ರೆಸ್ ಪವರ್ ಫೈಟ್ ಗೊಂದಲಕ್ಕೆ ಮೇ ಅಂತ್ಯಕ್ಕೆ ತೆರೆ ಎಳೆಯಲಿದೆ ಎಂದು ಹೇಳಿದ್ದರು. ಅದರಂತೆ ಇದೀಗ ಸಿಎಂ ಸಿದ್ದರಾಮಯ್ಯಗೆ ದೆಹಲಿಗೆ ಬುಲಾವ್ ನೀಡಿರುವುದು ರಾಜ್ಯದ ಪವರ್ ಫೈಟ್ ಗೊಂದಲಕ್ಕೆ ತೆರೆ ಬೀಳುವ ವಿಶ್ವಾಸ ಹಲವರದ್ದಾಗಿದೆ. ನಾಯಕತ್ವ ವಿವಾದ ಕುರಿತಂತೆ ದೆಹಲಿಯಲ್ಲಿ ಹೈ ವೋಲ್ಟೇಜ್ ಸಭೆಗೂ ಮುನ್ನ ಪ್ರತಿಕ್ರಿಯೆ ನೀಡಲು ನಿರಾಕರಿಸುವ ಮೂಲಕ ಕಾಂಗ್ರೆಸ್ ನಾಯಕರು ಮೌನ ಸಂಗ್ರಾಮ ನಡೆಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ದೆಹಲಿಗೆ ಅಗಮಿಸಿದ್ದಕ್ಕಾಗಿ ಕರ್ನಾಟಕ ಭವನದಲ್ಲಿ ಅವರಿಗೆ ಪೊಲೀಸರು ಗೌರವ ವಂದನೆ ಸಲ್ಲಿಸಿದರು. ಬಳಿಕ ಅಲ್ಲಿಂದ ಮುಂದೆ ಹೋಗಲು ಹೆಜ್ಜೆ ಹಾಕಿದ ಸಿದ್ದರಾಮಯ್ಯ ಅವರ ಸುತ್ತಲೂ ನೂರಾರು ಕ್ಯಾಮೆರಾ, ಮೈಕುಗಳು ಎದುರಾದವು. 5 ವರ್ಷ ಮುಖ್ಯಮಂತ್ರಿಯಾಗಿ ಅಧಿಕಾರ ಪೂರೈಸುತ್ತೀರಾ? ಇವತ್ತಿನ ಸಭೆಯಲ್ಲಿ ಯಾವ ನಿರ್ಣಯವಾಗಲಿವೆ ನಿಮ ನಿಲುವುಗಳೇನು? ಎಂಬೆಲ್ಲಾ ಪ್ರಶ್ನೆಗಳು ಎದುರಾಗುತ್ತಲೇ ಇದ್ದವು. ಯಾವುದಕ್ಕೂ ಪ್ರತಿಕ್ರಿಯಿಸದೇ ಸಿದ್ದರಾಮಯ್ಯ ಕಾರಿನತ್ತಾ ಹೆಜ್ಜೆ ಹಾಕಿದರು.ಅಲ್ಲಿಂದ ಕರ್ನಾಟಕ ಭವನದಲ್ಲೂ ಮಾಧ್ಯಮದವರು ಸುತ್ತುವರೆದರು. ಮಾತನಾಡುವ ಬದಲಾಗಿ ಸಿದ್ದರಾಮಯ್ಯ ಏಯ್ ದಾರಿ ಬಿಡಿ ಎಂದು ಗದರುವ ಮೂಲಕ ತಮ ಪಾಡಿಗೆ ತಾವು ಮುಂದೆ ಹೆಜ್ಜೆ ಹಾಕಿದರು. ಪೊಲೀಸ್ ಅಧಿಕಾರಿಗಳು ಅವರಿಗೆ ದಾರಿ ಮಾಡಿಕೊಡಲು ಹರಸಾಹಸ ಪಟ್ಟರು.ಇದಕ್ಕೂ ಮೊದಲು ದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಅವರು

**ದೆಹಲಿಯಲ್ಲಿ ಕುರ್ಚಿ ಕುತೂಹಲ**



**ಮೌನಕ್ಕೆ ಶರಣಾದ ಕಾಂಗ್ರೆಸ್ ನಾಯಕರು**

## 20ಕ್ಕೂ ಹೆಚ್ಚು ಕಾಂಗ್ರೆಸ್ ಶಾಸಕರು

ಸಂಪುಟ ಪುನರ್‌ರಚನೆಯಾಗಲಿದೆ ಎಂಬ ವದಂತಿ ಹಿನ್ನೆಲೆಯಲ್ಲಿ ಕೆಲವರು ಕುರ್ಚಿ ಗಿಟ್ಟಿಸಿಕೊಳ್ಳಲು ದೆಹಲಿಯತ್ತ ಮುಖ ಮಾಡಿದ್ದಾರೆ. ಇನ್ನೂ ಕೆಲವು ಸಚಿವರು ಅಧಿಕಾರ ಉಳಿಸಿಕೊಳ್ಳಲು ಹರಸಾಹಸ ನಡೆಸುತ್ತಿದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯ ಹೈಕಮಾಂಡ್ ಬುಲಾವ್ ಮೇರೆಗೆ ತಮೊಂದಿಗೆ ಕೆಲವು ಸಚಿವರನ್ನು ಕರೆದುಕೊಂಡು ದೆಹಲಿಗೆ ತೆರಳಿದ್ದರು. ಅವರ ಬೆನ್ನ ಹಿಂದೆಯೇ ಇನ್ನೂ ಕೆಲವು ಸಚಿವರು ವಿಮಾನ ಹೇರಿ ದೆಹಲಿ ತಲುಪಿದ್ದು, ಭೌಗೋಳಿಕ ಆದ್ಯತೆ, ಸಾಮಾಜಿಕ ನ್ಯಾಯ, ಜಾತಿವಾರು ಆದ್ಯತೆ ಮೇಲೆ ತಮನ್ನು ಸಂಪುಟದಲ್ಲಿ ಉಳಿಸಿಕೊಳ್ಳುವಂತೆ ಮನವಿ ಮಾಡುತ್ತಿದ್ದಾರೆ. ಇನ್ನೂ ಹಿರಿಯ ಶಾಸಕರು ಸಂಪುಟ ಪುನರ್ ರಚನೆಯಾಗಬೇಕು. ತಮಗೆ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ಒತ್ತಡ ಹೇರುತ್ತಿದ್ದಾರೆ. ಶಾಸಕರಾದ ಟಿ.ಬಿ.ಜಯಚಂದ್ರ, ಪಿ.ಎಮ್. ಅಶೋಕ್, ಪುಟ್ಟರಂಗ ಶೆಟ್ಟಿ, ನಾರಾಯಣಸ್ವಾಮಿ ಸೇರಿದಂತೆ 20ಕ್ಕೂ ಹೆಚ್ಚು ಶಾಸಕರು ದೆಹಲಿಯಲ್ಲಿ ಬೀಡುಬಿಟ್ಟಿದ್ದಾರೆ.

## ಸಭೆಯಲ್ಲಿ ತ್ರಿಶೂಲ ವ್ಯೂಹ

ದೆಹಲಿಯ ಎಐಸಿಸಿ ಕಚೇರಿಯಲ್ಲಿ ನಡೆಯುತ್ತಿರುವ ಹೈವೋಲ್ಟೇಜ್ ಸಭೆ ಈಗ ಕ್ಲೈಮ್ಯಾಕ್ಸ್ ಹಂತಕ್ಕೆ ತಲುಪಿದೆ. ಹೈಕಮಾಂಡ್ ನಾಯಕರ ಸಮ್ಮುಖದಲ್ಲೇ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕೊಟ್ಟ ಮಾತು ಉಳಿಸಿಕೊಳ್ಳಿ ಎಂದು ಸಿಂಹಗರ್ಜನೆ ಮಾಡಿದ್ದಾರೆ. ಅಧಿಕಾರ ಹಂಚಿಕೆಯ ಸೂತ್ರವನ್ನು ಮುಂದಿಟ್ಟುಕೊಂಡು ಡಿಕೆಶಿ ಹೈಕಮಾಂಡ್ ಅಂಗಳದಲ್ಲಿ ಮೂರು ಸ್ಫೋಟಕ ಷರತ್ತುಗಳನ್ನು ವಿಧಿಸಿ ಬಿಗಿಪಟ್ಟು ಹಿಡಿದಿದ್ದಾರೆ ಎಂದು ಮೂಲಗಳು ತಿಳಿಸಿವೆ. ಡಿಕೆಶಿ ಅವರ ಈ ಖಡಕ್ ನಿಲುವು ಈಗ ಹೈಕಮಾಂಡ್ ನಾಯಕರನ್ನೂ ಧರ್ಮಸಂಕಟಕ್ಕೆ ಸಿಲುಕಿಸಿದೆ. ಕರ್ನಾಟಕದಲ್ಲಿ ಸರ್ಕಾರ ರಚನೆಯಾಗುವಾಗ ಅಧಿಕಾರ ಹಂಚಿಕೆ ವಿಚಾರದಲ್ಲಿ ಏನು ಮಾತುಕತೆಯಾಗಿತ್ತೋ, ಆ ಮಾತನ್ನು ಸಿಎಂ ಸಿದ್ದರಾಮಯ್ಯ ಹಾಗೂ ಹೈಕಮಾಂಡ್ ಇಬ್ಬರೂ ಉಳಿಸಿಕೊಳ್ಳಬೇಕು. ಕಾಲಮಿತಿ ಮುಗಿದಿದ್ದು, ಈಗ ನಾಯಕತ್ವ ಬದಲಾವಣೆ ಆಗಲೇಬೇಕು.

**ಸಿದ್ದು-ಡಿಕೆಶಿ ಬೆಂಬಲಿಗರಿಗೆ ಹೈಕಮಾಂಡ್ ವಾರ್ನಿಂಗ್**

**ಮೂರು ಖಡಕ್ ಷರತ್ತು ವಿಧಿಸಿ ಬಿಗಿಪಟ್ಟು!**

**ಸಿದ್ದರಾಮಯ್ಯ ಹೈಕಮಾಂಡ್ ಜತೆ 40 ನಿಮಿಷಗಳ ಕಾಲ ಕ್ಲೋಸ್ ಡೋರ್ ಮೀಟಿಂಗ್!**

## ರಾಜ್ಯಾದ್ಯಂತ ನೂತನ 150 ನಾಡ ಕಚೇರಿಗಳ ನಿರ್ಮಾಣಕ್ಕೆ ತೀರ್ಮಾನ: ಕೃಷಿ ಸಚಿವ ಭೈರೆಗೌಡ


• ಉದಯವಾಹಿನಿ, ಬೆಂಗಳೂರು

ಹಾಲಿ ಸ್ವಂತ ಕಟ್ಟಡಗಳು ಇಲ್ಲದೇ ಇರುವಂತಹ ಮತ್ತು ಬಹಳ ಹಳೇಯ ಕಟ್ಟಡಗಳನ್ನು ಹೊಂದಿರುವ ನಾಡ ಕಚೇರಿಗಳನ್ನು ಗುರುತಿಸಿ ಮೊದಲ ಹಂತದಲ್ಲಿ 94 ನಾಡ ಕಚೇರಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ.

ಮುಂದುವರೆದು ಇನ್ನೂ 56 ನಾಡ ಕಚೇರಿಗಳನ್ನು ನಿರ್ಮಿಸಲು ನಡೆದ ಸಭೆಯಲ್ಲಿ ತೀರ್ಮಾನಿಸಲಾಯಿತು. ಈ ಮೂಲಕ ಒಟ್ಟು 150 ನಾಡ ಕಚೇರಿಗಳಿಗೆ ಸುಸಜ್ಜಿತ ನೂತನ ಕಟ್ಟಡ ನಿರ್ಮಿಸಲು ತೀರ್ಮಾನಿಸಲಾಗಿದೆ.

ಈ ಬಗ್ಗೆ ಮಾಧ್ಯಮ ಪ್ರಕಟಣೆ ಹೊರಡಿಸಿರುವ ಸಚಿವ ಕೃಷ್ಣ ಬೈರೇಗೌಡ, ರಾಜ್ಯಾದ್ಯಂತ 771 ಹೋಬಳಿ ಮಟ್ಟದ ನಾಡ ಕಚೇರಿಗಳು ಕಾರ್ಯನಿರ್ವಹಿಸುತ್ತಿವೆ. ಸಾರ್ವಜನಿಕರು 54 ಸೇವೆಗಳನ್ನು ಪಡೆಯಲು ಪ್ರತಿನಿತ್ಯ ಹೆಚ್ಚಿನ ಸಂಖ್ಯೆಯಲ್ಲಿ ನಾಡ ಕಚೇರಿಗಳಿಗೆ ಭೇಟಿ ನೀಡುತ್ತಾರೆ. ಅನೇಕ ಪ್ರಮಾಣ ಪತ್ರಗಳು, ದಾಖಲೆಗಳು ಮಾತ್ರವಲ್ಲದೆ ಕಂದಾಯ ಇಲಾಖೆಗೆ ಸಂಬಂಧಿಸಿದ ಕೆಲಸಗಳಿಗಾಗಿಯೂ ಭೇಟಿ ನೀಡುತ್ತಿರುತ್ತಾರೆ. ಇದಲ್ಲದೆ, ಉಪ ತಹಶಿಲ್ದಾರ್, ಕಂದಾಯ ನಿರೀಕ್ಷಕರು (ಆರ್‌ಐ) ಗ್ರಾಮ ಆಡಳಿತ ಅಧಿಕಾರಿಗಳ (ವಿಎ) ಬಳಿಯೂ ಕೆಲಸಕ್ಕಾಗಿ ಪ್ರತಿದಿನ ಸಾರ್ವಜನಿಕರು ಭೇಟಿ ನೀಡುತ್ತಾರೆ. ಸರ್ಕಾರ ಮತ್ತು ಸಾರ್ವಜನಿಕರ ನಡುವೆ ಕೊಂಡಿಯಾಗಿ ನಾಡಕಚೇರಿಗಳು ಕಾರ್ಯನಿರ್ವಹಿಸುತ್ತಿವೆ ಎಂದು ವಿವರಿಸಿದ್ದಾರೆ.

ಇಂತಹ ಜನ ಸಂಪರ್ಕ ವಿರುವ ಕಚೇರಿಗಳಿಗೆ ಅನೇಕ ಕಡೆಗಳಲ್ಲಿ ಸ್ವಂತ ಕಟ್ಟಡಗಳಿಗಲ್ಲ. ಮತ್ತಷ್ಟು ಕಡೆ ಅಧಿಕಾರಿಗಳು ಹಳೇ ಕಟ್ಟಡಗಳಲ್ಲಿ ಅಥವಾ ಶಿಥಿಲಾವಸ್ಥೆಯ ಕಟ್ಟಡಗಳಲ್ಲಿ ಕುಳಿತು ಕಾರ್ಯನಿರ್ವಹಿಸುವಂತಹ ಸ್ಥಿತಿ ಇದೆ. ಸಾರ್ವಜನಿಕರ ಅನಾನುಕೂಲದ ಜತೆಗೆ ಉಪ ತಹಶಿಲ್ದಾರ್, ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಆಡಳಿತ ಅಧಿಕಾರಿಗಳಿಗೆ ಕೆಲಸ ಮಾಡಲು ಸುಸಜ್ಜಿತ ಕಚೇರಿ ಕಟ್ಟಡದ ಕೊರತೆ ಎದುರಿಸುತ್ತಿದ್ದಾರೆ. ಇದನ್ನು ಮನಗಂಡು ಸರ್ಕಾರ ಸಾರ್ವಜನಿಕರಿಗೆ



ಉತ್ತಮ ಸೌಲಭ್ಯ ಹಾಗೂ ಸಿಬ್ಬಂದಿಗೆ ಸುಸಜ್ಜಿತ ಕಚೇರಿ ಕಟ್ಟಡ ಒದಗಿಸಲು ತೀರ್ಮಾನಿಸಲಾಯಿತು ಎಂದು ತಿಳಿಸಿದ್ದಾರೆ.

ಈ ಹಿಂದೆ ನಾಡ ಕಚೇರಿ ಕಟ್ಟಡ ನಿರ್ಮಿಸಲು ಕೇವಲ ರೂ.18 ಲಕ್ಷಗಳನ್ನು ಮಾತ್ರ ಒದಗಿಸಲಾಗುತ್ತಿತ್ತು. ಇದರಿಂದ ಸೂಕ್ತ ಮತ್ತು ಸಮರ್ಪಕ ಕಟ್ಟಡ ನಿರ್ಮಾಣ ಅಸಾಧ್ಯವಾಗಿತ್ತು. ಪರಿಣಾಮ ಸಾರ್ವಜನಿಕರಿಗೆ ಮತ್ತು ಸಿಬ್ಬಂದಿಗಳಿಗೆ ಅವಶ್ಯಕ ಸೌಲಭ್ಯ ನೀಡುವುದು ಅಸಾಧ್ಯವಾಗಿತ್ತು. ಹಾಗಾಗಿ ಜನರ ಅವಶ್ಯಕತೆಯನ್ನು ಪರಿಗಣಿಸಿ ಪ್ರಸ್ತುತ ಕಟ್ಟಡದ ವಿನ್ಯಾಸವನ್ನೇ ಬದಲಿಸಿ, ಸುಸಜ್ಜಿತವಾತ ಹೊಸ ವಿನ್ಯಾಸವನ್ನು ರೂಪಿಸಲಾಗಿದೆನ ಎಂದಿದ್ದಾರೆ.

ನಗರ ಪ್ರದೇಶಗಳಲ್ಲಿ ರೂ.75 ಲಕ್ಷ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ರೂ.55 ಲಕ್ಷಗಳ ವೆಚ್ಚದಲ್ಲಿ ನಾಡ ಕಚೇರಿಗಳನ್ನು ನಿರ್ಮಿಸಲು ಮಂಜೂರಾತಿ ನೀಡಲಾಗಿದೆ. ಇವುಗಳಿಂದ ಸಾರ್ವಜನಿಕರಿಗೆ ಉತ್ತಮ ಸೇವೆ ಹಾಗೂ ಸಿಬ್ಬಂದಿಗಳಿಗೆ ಸುಸಜ್ಜಿತ ಕಚೇರಿ ಒದಗಿಸುವ ನಮ್ಮ ಉದ್ದೇಶ ಈಡೇರಲಿದೆ ಎಂದು ಕಂದಾಯ ಸಚಿವರು ತಿಳಿಸಿದ್ದಾರೆ.

## 2028ಕ್ಕೆ ಡಿಕೆಶಿ ಬೆಂಗಳೂರು ಸೆಂಟ್ರಲ್ ನಲ್ಲಿರ್ತಾರೊ ಅಥವಾ ತಿಹಾರ್ ಜೈಲಿನಲ್ಲಿ ಇರ್ತಾರೋ': ಬಸನಗೌಡ ಯತ್ನಾಳ್ ವ್ಯಂಗ್ಯ

• ಉದಯವಾಹಿನಿ, ಬೆಂಗಳೂರು:

2028ಕ್ಕೆ ಡಿಕೆಶಿ ಬೆಂಗಳೂರು ಸೆಂಟ್ರಲ್ ನಲ್ಲಿರ್ತಾರೊ ಅಥವಾ ತಿಹಾರ್ ಜೈಲಿನಲ್ಲಿ ಇರ್ತಾರೋ ಎಂದು ಬಸನಗೌಡ ಯತ್ನಾಳ್ ವ್ಯಂಗ್ಯವಾಡಿದ್ದಾರೆ. 2028ಕ್ಕೆ ನಮ್ಮದೇ ಸರ್ಕಾರ ಎಂದ ಡಿಕೆಶಿ ಹೇಳಿಕೆಗೆ ಪ್ರತಿಕ್ರಿಯಿಸಿರುವ ವಿಜಯಪುರ ಶಾಸಕರು, 2028ಕ್ಕೆ ಡಿಕೆಶಿ ಬೆಂಗಳೂರು ಸೆಂಟ್ರಲ್ ನಲ್ಲಿರ್ತಾರೊ ಅಥವಾ ತಿಹಾರ್ ಜೈಲಿನಲ್ಲಿ ಇರ್ತಾರೋ?. ನಮ್ಮ ಪಕ್ಷ ಅಧಿಕಾರಕ್ಕೆ ಬಂದ್ರೆ ಕಾಂಗ್ರೆಸ್‌ನ ಕೆಲವರು ತಿಹಾರ್ ನಲ್ಲಿರ್ತಾರೆ ಎಂದು ತಿರುಗೇಟು ನೀಡಿದ್ದಾರೆ.

ವಿಧಾನಸೌಧಲ್ಲಿ ಮಾತನಾಡಿದ ಅವರು, ಬಿಜೆಪಿ ರಾಜ್ಯಾಧ್ಯಕ್ಷರ ಆಯ್ಕೆ ವಿಚಾರವಾಗಿ ಪ್ರತಿಕ್ರಿಯಿಸಿ, ಅಭಿಪ್ರಾಯ ಸಂಗ್ರಹ ಕೇವಲ ತೋರಿಕೆಗೆ. ಯಡಿಯೂರಪ್ಪ ಕುಟುಂಬದ ಜೊತೆ ನಿತಿನ್ ನಬಿನ್ ಫೋಟೋ ತೆಗೆಸಿಕೊಂಡಿರುವುದು ಯಡಿಯೂರಪ್ಪ ಕುಟುಂಬದಿಂದ ಬಿಜೆಪಿ ಮುಕ್ತ ಎಂಬ ಸಂದೇಶ. ಪ್ರಾಮಾಣಿಕರಿಗೆ ಅವಕಾಶ ನೀಡಿದ್ರೆ ಬಿಜೆಪಿ ಅಧಿಕಾರಕ್ಕೆ ಬರಲಿದೆ. ಹೈಕಮಾಂಡ್‌ಗೆ ಬ್ಲ್ಯಾಕ್ ಮೇಲ್ ಮಾಡಿದವರಿಗೆ ಅವಕಾಶ ನೀಡಿದ್ರೆ ಪಕ್ಷ ಗೆಲ್ಲಲ್ಲ. ನಾನು ವಾಪಸ್ ಬಿಜೆಪಿಗೆ ಬರುತ್ತೇನೆ ಇಲ್ವೋ ಗೊತ್ತಿಲ್ಲ. ಪರ್ಯಾಯ ಶಕ್ತಿ ರಾಜ್ಯಕ್ಕೆ ಬೇಕು. ಆ ಬಗ್ಗೆ ನಾನು ಚಿಂತನೆ ಮಾಡುತ್ತಿದ್ದೇನೆ. ಮುಲಾಜಿಲ್ಲದೇ ಹೊಸ ಪಕ್ಷ ಕಟ್ಟುತ್ತೇನೆ. ಮುಂದಿನ ಸರ್ಕಾರದಲ್ಲಿ ನಾನು ಪ್ರಮುಖ ಪಾತ್ರ ವಹಿಸುತ್ತೇನೆ ಎಂದರು.ಯಡಿಯೂರಪ್ಪ, ವಿಜಯೇಂದ್ರ ವಿರುದ್ಧ ವಾಗ್ದಾಳಿ: ವಿ.ಸದಾನಂದ ಗೌಡ ಯಡಿಯೂರಪ್ಪ ಅವರಿಗೆ ಬೈತಿದ್ರು. ಈಗ ರಾಜ್ಯಸಭಾ ಸ್ಥಾನಕ್ಕಾಗಿ ಅವರ ಬೆನ್ನ ಹಿಂದೆ ಬಿದ್ದಿದ್ದಾರೆ. ಅವಕಾಶ ತಪ್ಪಿದರೆ ಡಿವಿಎಸ್ ಹೇಗೆ ತಿರುಗಿ ಬೀಳ್ತಾರೆ ನೋಡಿ ಎಂದು ಇದೇ ವೇಳೆ ತಿಳಿಸಿದರು. ವಿಜಯೇಂದ್ರ ಅಪ್ಪನ ಸೈನ್ ಮಾಡಿ ದುಡ್ಡು ಮಾಡ್ತಿದ್ದ. ವಿಜಯೇಂದ್ರಗೆ ಅವಕಾಶ ಸಿಕ್ಕಿದರೆ ಇವನೇ ಸೈನ್ ಮಾಡಿ ದುಡ್ಡು ಮಾಡ್ತಾನೆ. ಪಕ್ಷದಲ್ಲಿ ವ್ಯವಸ್ಥಿತವಾಗಿ ಕೆಲಸ ಆಗ್ತಿಲ್ಲ. ಪಕ್ಷಕಿಂತ ವ್ಯಕ್ತಿ



ವೈಭವೀಕರಣ ಬಿಜೆಪಿಯಲ್ಲಿ ಆಗ್ತಿದೆ. ಇದು ಬಿಜೆಪಿಯಲ್ಲಿ ನಡೆಯುತ್ತಿರುವ ಕಾರ್ಯತಂತ್ರ. ನಮ್ಮ ಹಿಂದೆ ಮಠಾಧೀಶರು, ಸ್ವಾಮೀಜಿಯವರು ಇದಾರೆ ಅಂತ ಪೂಜ್ಯ ತಂದೆಯವರು ತೋರಿಸಿಕೊಳ್ತಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರ ಜೊತೆಗೆ ಯಡಿಯೂರಪ್ಪ ಕುಟುಂಬ ಫೋಟೋ ತೆಗೆಸಿಕೊಳ್ತಿದೆ. ಯಾಕೆಂದರೆ ಯಡಿಯೂರಪ್ಪ ಕುಟುಂಬದಿಂದ ಬಿಜೆಪಿ ಮುಕ್ತ ಎಂಬ ಕಾರಣಕ್ಕೆ ರಾಷ್ಟ್ರೀಯ ಅಧ್ಯಕ್ಷರ ಜೊತೆಗೆ ಫೋಟೋ ತೆಗೆಸಿಕೊಳ್ತಿದ್ದಾರೆ ಎಂದು ಟೀಕಿಸಿದರು.

**ಕಳೆದ ಆರು ತಿಂಗಳಿಂದ ರಾಜ್ಯದಲ್ಲಿ ಆಡಳಿತ ಅನ್ನೋದೇ ಇಲ್ಲ:** ಕಾಂಗ್ರೆಸ್ ನಾಯಕರ ದೆಹಲಿ ಭೇಟಿ ವಿಚಾರವಾಗಿ ಮಾತನಾಡಿ, ಕಳೆದ 6 ತಿಂಗಳಿನಿಂದ ಆಡಳಿತ ಅನ್ನೋದು ಇಲ್ಲ. ಸಿಎಂ ಆಗಬೇಕು ಸಿಎಂ





ಬದಲಾವಣೆ ಆಗಬೇಕು ಅನ್ನೋದು ಅಷ್ಟೇ ಚರ್ಚೆ ಆಗ್ತಿದೆ. ಅಭಿವೃದ್ಧಿ ಕೆಲಸ ನಡೀತಿಲ್ಲ ಸಂಪೂರ್ಣ ನಿಷ್ಕ್ರೀಯ ಆಗಿದೆ. ಕರ್ನಾಟಕದಲ್ಲಿ ಸರಿಯಾದ ರೀತಿಯಲ್ಲಿ ಆಡಳಿತ ನಡೀತಿಲ್ಲ. ಆಡಳಿತ ವ್ಯವಸ್ಥೆ ಸಂಪೂರ್ಣವಾಗಿ ರಾಜ್ಯದಲ್ಲಿ ಕುಸಿದಿದೆ ಎಂದು ಆರೋಪಿಸಿದರು.

## 175ನೇ ರಾಜ್ಯ ಮಟ್ಟದ ಬ್ಯಾಂಕರ್‌ಗಳ ಸಮಿತಿ ಸಭೆ: 13,52,987 ಕೋಟಿ ಮೊತ್ತದ ರಾಜ್ಯ ವಾರ್ಷಿಕ ಸಾಲ ಯೋಜನೆ ಸಿದ್ಧ

• ಉದಯವಾಹಿನಿ,ಬೆಂಗಳೂರು

ರಾಜ್ಯದಲ್ಲಿ ಕೃಷಿ ಮತ್ತು ಸಂಬಂಧಿತ ಚಟುವಟಿಕೆಗಳಿಗೆ ನೀಡಲಾದ ಸಾಲದಲ್ಲಿ ಶೇ.14% ಬೆಳವಣಿಗೆ ದಾಖಲಾಗಿದ್ದು, ಒಟ್ಟು ಮುಂಗಡಗಳಲ್ಲಿ ಕೃಷಿ ಸಾಲದ ಪಾಲು ಶೇ.20% ಆಗಿದೆ. ಬೆಂಗಳೂರಿನ ವಿಧಾನಸೌಧದ ಕೊಠಡಿ ಸಂಖ್ಯೆ 334ರಲ್ಲಿ ಮಂಗಳವಾರ 175ನೇ ರಾಜ್ಯ ಮಟ್ಟದ ಬ್ಯಾಂಕರ್‌ಗಳ ಸಮಿತಿ ಸಭೆಯು ಯಶಸ್ವಿಯಾಗಿ ಜರುಗಿತು. ಸಭೆಯಲ್ಲಿ ರಾಜ್ಯದ ಬ್ಯಾಂಕಿಂಗ್ ಕ್ಷೇತ್ರದ ಪ್ರಮುಖ ಸಾಧನೆಗಳು, ಸವಾಲುಗಳು ಮತ್ತು ಮುಂಬರುವ ಸಾಲಿನ ಮಹತ್ವದ ಸಾಲ ಯೋಜನೆಗಳ ಕುರಿತು ಚರ್ಚಿಸಲಾಯಿತು. ಮಾರ್ಚ್ 2026ರ ಅಂತ್ಯಕ್ಕೆ ರಾಜ್ಯದಲ್ಲಿ ಬ್ಯಾಂಕ್ ಠೇವಣಿಗಳ ಬೆಳವಣಿಗೆ ದರವು ಶೇ.13.31 ರಷ್ಟಿದ್ದು, ರಾಷ್ಟ್ರೀಯ ಸರಾಸರಿಗಿಂತ (ಶೇ. 13.47) ಸ್ವಲ್ಪ ಕಡಿಮೆಯಾಗಿದೆ. ಸಾಲದ ಬೆಳವಣಿಗೆ ದರವು ಶೇ. 12.77 ರಷ್ಟು ದಾಖಲಾಗಿದ್ದು, ರಾಷ್ಟ್ರೀಯ ಸರಾಸರಿ ಶೇ.16.08ಕ್ಕೆ ಹೋಲಿಸಿದರೆ ಕಡಿಮೆಯಾಗಿದೆ. 2026ರ ಮಾರ್ಚ್ ವೇಳೆಗೆ ಸಿಡಿ ಅನುಪಾತ 79% ರಿಂದ 77%ಕ್ಕೆ 2% ಇಳಿಕೆಯಾಗಿದೆ. ದೇಶದ ಬ್ಯಾಂಕುಗಳ ಸರಾಸರಿ ಅಅ ಖಚಿಣಠ 81.40% ಆಗಿದೆ.ಆದ್ಯತಾ ವಲಯ ಮತ್ತು ಕೃಷಿ



ಸಾಲ: ರಾಜ್ಯದಲ್ಲಿ ಕೃಷಿ ಮತ್ತು ಸಂಬಂಧಿತ ಚಟುವಟಿಕೆಗಳಿಗೆ ನೀಡಲಾದ ಸಾಲದಲ್ಲಿ 14% ಬೆಳವಣಿಗೆ ದಾಖಲಾಗಿದ್ದು, ಒಟ್ಟು ಮುಂಗಡಗಳಲ್ಲಿ ಕೃಷಿ ಸಾಲದ ಪಾಲು 20% ಆಗಿದೆ. ಇದು ಕಡ್ಡಾಯ ಮಾನದಂಡವಾದ 18% ಗಿಂತ ಹೆಚ್ಚಾಗಿದೆ. ಪ್ರಾಥಮಿಕ ವಲಯ ಸಾಲ ಕೂಡ 20% ಬೆಳವಣಿಗೆ ದಾಖಲಿಸಿದ್ದು, ಒಟ್ಟು ಮುಂಗಡಗಳಲ್ಲಿ ಇದರ ಪಾಲು 42% ಆಗಿದೆ. ಇದು ಕಡ್ಡಾಯ ಮಾನದಂಡವಾದ 40% ಕ್ಕಿಂತ ಹೆಚ್ಚಿದೆ.

**ರಾಷ್ಟ್ರೀಯ ಮಟ್ಟದಲ್ಲಿ ಕರ್ನಾಟಕದ ಸ್ಥಾನ:** ಯೋಜನೆಯಡಿ ಸಾಲ ಮಂಜೂರಾತಿಯಲ್ಲಿ 6ನೇ ಸ್ಥಾನ ಮತ್ತು ಸಾಲ ವಿತರಣೆಯಲ್ಲಿ ಕರ್ನಾಟಕ 2ನೇ ಸ್ಥಾನ ಪಡೆದಿದೆ. ಯೋಜನೆಯಡಿ ಸಾಲ ವಿತರಣೆಯಲ್ಲಿ ದೇಶದಲ್ಲೇ 7ನೇ ಸ್ಥಾನದಲ್ಲಿದೆ. ಯೋಜನೆಯಡಿ ದೇಶದಲ್ಲೇ 6ನೇ ಸ್ಥಾನವನ್ನು ಕಾಯ್ದುಕೊಂಡಿದೆ. **ವಾರ್ಷಿಕ ಸಾಲ ಯೋಜನೆ 2025-26ರ ಸಾಧನೆ:** ಕಳೆದ ಆರ್ಥಿಕ ವರ್ಷದಲ್ಲಿ (2025-26) ಕರ್ನಾಟಕದ ಬ್ಯಾಂಕುಗಳು ಒಟ್ಟಾರೆ ಅತ್ಯುತ್ತಮ ಸಾಧನೆ ಮಾಡಿವೆ. ಒಟ್ಟು ವಾರ್ಷಿಕ ಗುರಿ ರೂ. 11,88,986 ಕೋಟಿಗಳಿಗೆ ಪ್ರತಿಯಾಗಿ ರೂ. 12,71,386 ಕೋಟಿ ಸಾಧನೆ ಮಾಡಲಾಗಿದೆ. (ಶೇ. 107 ಪ್ರಗತಿ). ಆದ್ಯತಾ ವಲಯದಲ್ಲಿ ರೂ. 4,38,015 ಕೋಟಿಗಳ ಗುರಿಯಲ್ಲಿ ರೂ. 4,73,659 ಕೋಟಿ ತಲುಪಲಾಗಿದೆ (ಶೇ. 108 ಪ್ರಗತಿ). ಇನ್ನು ಕೃಷಿ ವಲಯದಲ್ಲಿ ರೂ. 2,22,203 ಕೋಟಿ ಗುರಿಯ ಎದುರು ರೂ. 2,47,754 ಕೋಟಿ ಸಾಧಿಸಲಾಗಿದೆ (ಶೇ. 111 ಪ್ರಗತಿ). ವಲಯದಲ್ಲಿ ರೂ. 1,90,890 ಕೋಟಿ ಗುರಿಗೆ ಪ್ರತಿಯಾಗಿ ರೂ. 2,02,585 ಕೋಟಿ ತಲುಪಿದೆ (ಶೇ. 106 ಪ್ರಗತಿ).

**ಹಿನ್ನಡೆ ಕಂಡುಬಂದ ವಲಯಗಳು:** ವಸತಿ ವಲಯದಲ್ಲಿ ಶೇ. 70 ರಷ್ಟು (ರೂ. 8,191 ಕೋಟಿ) ಮತ್ತು ಶಿಕ್ಷಣ ವಲಯದಲ್ಲಿ ಶೇ. 89 ರಷ್ಟು (ರೂ. 1,987 ಕೋಟಿ) ಮಾತ್ರ ಪ್ರಗತಿಯಾಗಿದ್ದು, ಇವುಗಳನ್ನು ಸುಧಾರಿಸಬೇಕಾದ ದುರ್ಬಲ ವಲಯಗಳೆಂದು ಗುರುತಿಸಲಾಗಿದೆ.

### ಸಾಲ ಯೋಜನೆ 2026-27ರ ಬಿಡುಗಡೆ

ಮತ್ತು ಸಹಯೋಗದೊಂದಿಗೆ ಸಿದ್ಧಪಡಿಸಿರುವ ರೂ. 13,52,987 ಕೋಟಿಗಳ ಬೃಹತ್ ರಾಜ್ಯ ವಾರ್ಷಿಕ ಸಾಲ ಯೋಜನೆ 2026-27 ಅನ್ನು ಸಭೆಯಲ್ಲಿ ಅನಾವರಣಗೊಳಿಸಲಾಯಿತು.

ಶಿಕ್ಷಣ ಮತ್ತು ವಸತಿ ವಲಯಗಳಲ್ಲಿ ನಬಾರ್ಡ್ ನಿಗದಿಪಡಿಸಿರುವ ಗುರಿಗಳು ಕಳೆದ ವರ್ಷದ ಸಾಧನೆಗೆ ಹೋಲಿಸಿದರೆ ಗಣನೀಯವಾಗಿ ಹೆಚ್ಚಿರುತ್ತವೆ. ಆರ್‌ಬಿಐ ವಸತಿ ವಲಯದ ನಿಯಮಾವಳಿಗಳನ್ನು ಪರಿಷ್ಕರಿಸಿರುವುದು ಕಳೆದ ವರ್ಷ ಈ ವಲಯದಲ್ಲಿ ಉತ್ತಮ ಬೆಳವಣಿಗೆ ದಾಖಲಾಗಲು ಕಾರಣವಾಗಿದೆ. ಸಭೆಯಲ್ಲಿ ಸಂಚಾಲಕರು ಹಾಗೂ ಎಲ್ಲಾ ಪಾಲುದಾರ ಬ್ಯಾಂಕುಗಳ ಅತ್ಯುತ್ತಮ ಕಾರ್ಯಕ್ಷಮತೆಗೆ ಹೃತ್ಪೂರ್ವಕ ಅಭಿನಂದನೆಗಳನ್ನು ಸಲ್ಲಿಸಲಾಯಿತು.

ಮುಂಬರುವ ವರ್ಷದಲ್ಲಿ ಕೃಷಿ ಉಪವಲಯಗಳ ಅಸಮತೋಲಿತ ಗುರಿಗಳನ್ನು ಸರಿಪಡಿಸಿ, ಹೆಚ್ಚು ವಾಸ್ತವಿಕವಾಗಿ ಗುರಿ ತಲುಪಲು ಬ್ಯಾಂಕುಗಳಿಗೆ ಸೂಚಿಸಲಾಯಿತು.

**ಈ ದಿನದ ದರ** ಪೆಟ್ರೋಲ್: 110.93 ₹/L ಡೀಸೆಲ್ : 98.89₹/L ಬಂಗಾರ: ₹ 15,889/Gram 24ct ₹14,565/Gram 22ct ಬೆಳ್ಳಿ: ₹284.00/Gram

# ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ: ರಾಜಕೀಯ ಮಾಡ್ಬೇಡಿ

• ಉದಯವಾಹಿನಿ, ಬೆಂಗಳೂರು

ಇಂಧನ ಬೆಲೆ ಏರಿಕೆಯನ್ನು ಕಾಂಗ್ರೆಸ್ ನಾಯಕರು ರಾಜಕೀಯಗೊಳಿಸುತ್ತಿದ್ದಾರೆ ಎಂದು ವಿರೋಧ ಪಕ್ಷ ಬಿಜೆಪಿ ಆರೋಪಿಸಿದೆ. ಪೆಟ್ರೋಲ್ ಮತ್ತು ಡೀಸೆಲ್ ಮೇಲಿನ ಮೌಲ್ಯವರ್ಧಿತ ತೆರಿಗೆ (ವ್ಯಾಟ್) ಕಡಿಮೆ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಒತ್ತಾಯಿಸಿದೆ.

ರಾಜ್ಯ ಸರ್ಕಾರ ವಿಧಿಸಿರುವ ಹೆಚ್ಚಿನ ವ್ಯಾಟ್‌ನಿಂದಾಗಿ ಕರ್ನಾಟಕದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಬೆಲೆಗಳು ದೆಹಲಿ ಸೇರಿದಂತೆ ಇತರ ಹಲವು ರಾಜ್ಯಗಳಲ್ಲಿನ ಇಂಧನ ಬೆಲೆಗಳಿಗಿಂತ ಹೆಚ್ಚಾಗಿದೆ ಎಂದು ವಿರೋಧ ಪಕ್ಷದ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅಶೋಕ್, ಕಾಂಗ್ರೆಸ್ ಸರ್ಕಾರ ಪೆಟ್ರೋಲ್ ಬೆಲೆ ಏರಿಕೆಯಿಂದ ಹೆಚ್ಚುವರಿ ಆದಾಯ ಗಳಿಸುತ್ತಿದೆ. ವ್ಯಾಟ್ ಕಡಿಮೆ ಮಾಡುವ ಬದಲು ಅದು ಕೇಂದ್ರದ ಮೇಲೆ ಆರೋಪ ಮಾಡುತ್ತಿದೆ ಎಂದು ಅವರು ಟೀಕಿಸಿದರು. ಬೆಲೆ

☛ ಉದಯವಾಹಿನಿ ಚಿತ್ರ



ಏರಿಕೆಯೂ ಕೇಂದ್ರಕ್ಕೆ ಯಾವುದೇ ಆದಾಯ ತರುವುದಿಲ್ಲ ಮತ್ತು ರಾಜ್ಯ ಸರ್ಕಾರ ವಾರ್ಷಿಕವಾಗಿ 6,000 ಕೋಟಿ ರೂ.ಗಳನ್ನು ಹೆಚ್ಚುವರಿ ಆದಾಯ ಪಡೆಯುತ್ತಿದೆ. ಇಂಧನ ಬೆಲೆ ಏರಿಕೆಯಿಂದ ಗಳಿಸಿದ ಆದಾಯವನ್ನು ಗ್ಯಾರಂಟಿ ಯೋಜನೆಗಳಿಗಾಗಿ ಬಳಸಿಕೊಳ್ಳುತ್ತಿದೆ ಎಂದು ಕಿಡಿಕಾರಿದರು.

ಸರ್ಕಾರವು ನಿಜವಾಗಿಯೂ ಜನರಿಗೆ ಸಹಾಯ ಮಾಡಲು ಬಯಸಿದರೆ, ಅದು ತನ್ನ ತೆರಿಗೆಗಳನ್ನು ಕಡಿಮೆ ಮಾಡಬೇಕು. ಇಲ್ಲದಿದ್ದರೆ, ಅದು ಗಳಿಸುತ್ತಿರುವ ಹೆಚ್ಚುವರಿ ಆದಾಯವನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಬೇಕು. ಬೆಲೆ ಏರಿಕೆಯ ವಿರುದ್ಧ ಕಾಂಗ್ರೆಸ್ ಮಾಡುತ್ತಿರುವ ಪ್ರತಿಭಟನೆ ಜನರನ್ನು ವಂಚಿಸುವಂತಹದ್ದು, ಯುದ್ಧದ ಕಾರಣದಿಂದಾಗಿ ಹಲವಾರು ದೇಶಗಳು ಪೆಟ್ರೋಲ್ ಬಳಕೆಯನ್ನು ಕಡಿಮೆ ಮಾಡಲು ನಿರ್ಬಂಧ ವಿಧಿಸಿದ್ದರೂ, ಭಾರತವು ಅಂತಹ ಯಾವುದೇ ನಿರ್ಬಂಧಗಳನ್ನು ವಿಧಿಸಿಲ್ಲ ಎಂದು ಬಿಜೆಪಿ ನಾಯಕ ಹೇಳಿದರು.

ಕೆಲವು ಮುಸ್ಲಿಂ ಮತಾಂಧರು ಭಟ್ಕಳದಲ್ಲಿ ಹಿಂದೂಗಳು ನಿರ್ಮಿಸಿದ್ದ ವೇದಿಕೆಯನ್ನು (ಮೂರಿನಕಟ್ಟೆ) ಕೆಡವಿದ್ದಾರೆ. ಆದರೆ ಪೊಲೀಸರು ಅವರ ವಿರುದ್ಧ ಯಾವುದೇ ಕ್ರಮ ಕೈಗೊಂಡಿಲ್ಲ. ಕಲಬುರ್ಗಿ ಜಿಲ್ಲೆಯ ಆಳಂದದಲ್ಲಿ ಕೋಮು ಹಿಂಸಾಚಾರದಲ್ಲಿ ಭಾಗಿಯಾಗಿರುವವರ ವಿರುದ್ಧದ ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂತೆಗೆದುಕೊಂಡ ನಂತರ ಭಟ್ಕಳದಲ್ಲಿ ಈ ಘಟನೆ ನಡೆದಿದೆ ಮತ್ತು ಇದೆಲ್ಲವೂ ಮತಬ್ಯಾಂಕ್ ರಾಜಕೀಯದಿಂದಾಗಿ ನಡೆಯುತ್ತಿದೆ.

### ಆರ್. ಅಶೋಕ ಆರೋಪ

**ಕಾಕ್ರೋಚ್ ಜನತಾ ಪಾರ್ಟಿ ಮೂಲಕ ದೇಶ ವಿರೋಧಿ ಅಂಶಗಳು ದೇಶವನ್ನು ಒಡೆಯಲು ಪ್ರಯತ್ನಿಸುತ್ತಿವೆ.ಇದರಲ್ಲಿ ಪಾಕಿಸ್ತಾನಿಗಳು ಮತ್ತು ಬಾಂಗ್ಲಾದೇಶಿಯರು ಕೂಡ ಭಾಗಿಯಾಗಿದ್ದಾರೆ. ಜನರು ಇಂತಹ ಟೂಲ್‌ಕಿಟ್‌ಗಳನ್ನು ನಂಬಬಾರದು. ಕಾಂಗ್ರೆಸ್ ಜಿರಳೆ ಪಕ್ಷವಾಗಿ ಮಾರ್ಪಟ್ಟಿದೆ. ರಾಹುಲ್ ಗಾಂಧಿ ಮತ್ತು ಅರವಿಂದ್ ಕೇಜ್ರಿವಾಲ್ ಜಿರಳೆ ಜನತಾ ಪಕ್ಷದ ಹಿಂದೆ ಇದ್ದಾರೆ ಎಂದು ಅವರು ಆರೋಪಿಸಿದರು.**

> **“ ಕಾಂಗ್ರೆಸ್‌ನಲ್ಲಿ ಸಿಎಂ ಹುದ್ದೆಗಾಗಿ ಆಂತರಿಕ ಸಂಘರ್ಷ ಕುರಿತು ಪ್ರತಿಕ್ರಿಯಿಸಿದ ಅಶೋಕ್, ಮುಖ್ಯಮಂತ್ರಿ ಹುದ್ದೆಗೆ ಅಧಿಕಾರಕ್ಕಾಗಿ ಹೋರಾಟ ನಡೆಯುತ್ತಿದೆ. ಡಿಸಿಎಂ ಡಿ.ಕೆ. ಶಿವಕುಮಾರ್ ತಮ್ಮ ಭವಿಷ್ಯವನ್ನು ಭದ್ರಪಡಿಸಿಕೊಳ್ಳುತ್ತಿದ್ದಾರೆಯೇ ಅಥವಾ ಬೇರೆ ಪಕ್ಷಕ್ಕೆ ಸೇರಲು ಯೋಜಿಸುತ್ತಿದ್ದಾರೆಯೇ ಎಂಬುದು ಸ್ಪಷ್ಟವಾಗಿಲ್ಲ. ಸಿದ್ದರಾಮಯ್ಯ ತಮ್ಮ ಸಚಿವರ ತಂಡದೊಂದಿಗೆ ನವದೆಹಲಿಗೆ ಹೋಗುತ್ತಿದ್ದಾರೆ ಮತ್ತು ಅವರು ಸಿಎಂ ಕುರ್ಚಿಯನ್ನು ಖಾಲಿ ಮಾಡುವುದಿಲ್ಲ.**
>
> **ವಿ ಪಕ್ಷದ ನಾಯಕ ಆರ್ ಅಶೋಕ**

---

## ಜೂ.1 ರಿಂದ ಶಾಲಾ-ಕಾಲೇಜುಗಳ ಆರಂಭ ಹಿನ್ನೆಲೆಯಲ್ಲಿ ತುಂಬಿ ತುಳುಕುತ್ತಿವೆ

☛ ಉದಯವಾಹಿನಿ ಚಿತ್ರ



• ಉದಯವಾಹಿನಿ, ಬೆಂಗಳೂರು

ಶಾಲಾ-ಕಾಲೇಜುಗಳಿಗೆ ಬೇಸಿಗೆ ರಜೆ ಮುಗಿಯುತ್ತಾ ಬಂದಿದ್ದು, ಜೂ.1 ರಿಂದ ಮರುಪ್ರಾರಂಭವಾಗಲಿರುವ ಹಿನ್ನೆಲೆಯಲ್ಲಿ ರಾಜ್ಯದ ದೇವಾಲಯಗಳ ಭಕ್ತರ ಭೇಟಿ ಸಂಖ್ಯೆ ಹೆಚ್ಚಿದೆ. ವಿಶೇಷವಾಗಿ ಶೃಂಗೇರಿ, ಹೊರನಾಡು, ಧರ್ಮಸ್ಥಳ, ಸೌತಡ್ಕ, ಕುಕ್ಕೆ ಸುಬ್ರಹ್ಮಣ್ಯ, ಮುರುಡೇಶ್ವರ ಸೇರಿದಂತೆ ಮತ್ತಿತರ ದೇವಾಲಯಗಳಿಗೆ ಭಕ್ತರ ದಂಡೇ ಹರಿದುಬರುತ್ತಿದೆ. ನಿನ್ನೆ ವೀಕೆಂಡ್ ಹಿನ್ನೆಲೆಯಲ್ಲಿ ದೇವಾಲಯಗಳು ತುಂಬಿ ತುಳುಕುತ್ತಿದ್ದವು. ಧರ್ಮಸ್ಥಳ, ಕುಕ್ಕೆ ಸುಬ್ರಹ್ಮಣ್ಯಕ್ಕೆ ಅಪಾರ ಸಂಖ್ಯೆಯಲ್ಲಿ ಭಕ್ತರು ಭೇಟಿ ನೀಡುತ್ತಿದ್ದಾರೆ. ನಿನ್ನೆ ಒಂದೇ ದಿನ ಸುಬ್ರಹ್ಮಣ್ಯಕ್ಕೆ 40 ಸಾವಿರಕ್ಕೂ ಹೆಚ್ಚು ಭಕ್ತರು ಭೇಟಿ ನೀಡಿದ್ದರು.

ಹೊಸದಾಗಿ ಶಾಲೆಗೆ ಸೇರುವ ಮಕ್ಕಳಿಗಾಗಿ ಶೃಂಗೇರಿಯಲ್ಲಿ ಅಕ್ಷರಾಭ್ಯಾಸಕ್ಕಾಗಿ ರಾಜ್ಯದ ವಿವಿಧ ಮೂಲೆಗಳಿಂದ ಭಕ್ತರು ಆಗಮಿಸಿದ್ದ ದೃಶ್ಯಗಳು ಕಂಡುಬಂದವು. ಮಕ್ಕಳ ವಿದ್ಯಾಭ್ಯಾಸ ಯಾವುದೇ ತೊಂದರೆಗಳಾಗದಂತೆ ನಿರ್ವಿಘ್ನವಾಗಿ ಮುಂದುವರೆಯಲಿ, ಉತ್ತಮ ಅಂಕ ಗಳಿಸಲೆಂದು ವಿಘ್ನ ನಿವಾರಕ ಸೌತಡ್ಕ ಗಣಪತಿಗೆ ಹರಕೆ ಹೊತ್ತು ಪೂಜೆ ಸಲ್ಲಿಸಿದರು. ದೇವಾಲಯದ ವಸತಿನಿಲಯಗಳು, ಖಾಸಗಿ ಹೋಟೆಲ್‌ಗಳು, ರೂಂಗಳು ಭರ್ತಿಯಾಗಿದ್ದು, ಜೂನ್ 1 ರವರೆಗೂ ದೇವಾಲಯಗಳಿಗೆ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ತೆರಳುವ ನಿರೀಕ್ಷೆಯಿದೆ. ಜೊತೆಗೆ ಪ್ರವಾಸಿತಾಣಗಳಿಗೂ ಸಹ ಭೇಟಿ ನೀಡುತ್ತಿದ್ದು, ಚಿಕ್ಕಮಗಳೂರು, ಮಡಕೇರಿ, ಕುಶಾಲನಗರ, ಊಟಿ ಸೇರಿದಂತೆ ಮತ್ತಿತರ ಪ್ರವಾಸಿತಾಣಗಳಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚಾಗಿ ಕಂಡಬಂದಿತು.ಶಾಲಾ-ಕಾಲೇಜುಗಳು ಪ್ರಾರಂಭವಾದರೆ ದೇವಾಲಯಳಿಗಾಗಿ ಪ್ರವಾಸಕ್ಕೆ ತೆರಳಲು ಆಗುವುದಿಲ್ಲ ಎಂದು ಜನರು ಈ ತಿಂಗಳ ವಾರಾಂತ್ಯದಲ್ಲಿ ಪ್ಲ್ಯಾನ್ ಮಾಡಿಕೊಂಡಿದ್ದು ದೇವಾಲಯಗಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸುತ್ತಿದ್ದಾರೆ.

---

## ಗ್ರಾಹಕರಿಗೆ ಶೀಘ್ರ ಮತ್ತೊಂದು ದರ ಏರಿಕೆ ಬರೆ: ಸರಕು ಸಾಗಾಟ ವಾಹನಗಳ ಬಾಡಿಗೆ ದರ ಶೇ.10ರಷ್ಟು ಹೆಚ್ಚಳ ಸಾಧ್ಯತೆ

• ಉದಯವಾಹಿನಿಬೆಂಗಳೂರು:

ಇಂಧನಗಳ ಬೆಲೆ ಸತತ ಏರಿಕೆಯಿಂದ ಈಗಾಗಲೇ ಗ್ರಾಹಕರ ಜೇಬಿಗೆ ಕತ್ತರಿ ಬಿದ್ದುರುವ ನಡುವೆ ಶೀಘ್ರವೇ ಅಗತ್ಯ ವಸ್ತುಗಳ ಬೆಲೆಯೂ ಹೆಚ್ಚಾಗುವ ಮುನ್ಸೂಚನೆ ಸಿಕ್ಕಿದೆ. ಕಳೆದ 10 ದಿನಗಳಲ್ಲಿ ಡೀಸೆಲ್ ದರವು ಒಟ್ಟು 7.81 ರೂ. ಏರಿಕೆಯಾಗಿರುವ ಹಿನ್ನೆಲೆಯಲ್ಲಿ ಕರ್ನಾಟಕದ ಲಾರಿ ಮಾಲೀಕರು ಹಾಗೂ ಸಾರಿಗೆ ಸಂಸ್ಥೆಗಳು ಸರಕು ಸಾಗಣೆ ದರವನ್ನು ಕನಿಷ್ಠ ಶೇ. 10ರಷ್ಟು ಹೆಚ್ಚಿಸುವ ಸಾಧ್ಯತೆ ಇದೆ ಎನ್ನಲಾಗಿದೆ.

ಒಂದೊಮ್ಮೆ ಸರಕು ಸಾಗಣೆ ವಾಹನಗಳ ಬಾಡಿಗೆ ದರ ಏರಿಕೆ ಆಗಿದ್ದೇ ಆದಲ್ಲಿ ಇದರ ಪರಿಣಾಮವಾಗಿ ತರಕಾರಿ, ಪ್ಲೈವುಡ್, ಕಬ್ಬಿಣ ಸೇರಿದಂತೆ ವಿವಿಧ ವಸ್ತುಗಳ ಬೆಲೆ ಏರಿಕೆಯಾಗುವ ಆತಂಕ ವ್ಯಕ್ತವಾಗಿದೆ. ಈ ಕುರಿತು ಮಾಹಿತಿ ನೀಡಿರುವ ಕರ್ನಾಟಕ ಲಾರಿ ಮಾಲಕರು ಮತ್ತು ಏಜೆಂಟ್ ಅಸೋಸಿಯೇಷನ್ ಅಧ್ಯಕ್ಷ ಜಿ.ಆರ್. ಶಣ್ಮುಗಪ್ಪ, ಇಂಧನ ದರ ಏರಿಕೆಯಾಗುತ್ತಿರುವ ಸಂದರ್ಭದಲ್ಲಿ ಸರಕು ಸಾಗಣೆ ದರ ಹೆಚ್ಚಿಸುವುದನ್ನು ಬಿಟ್ಟು ನಮಗೆ ಬೇರೆ ಆಯ್ಕೆಯೇ ಇಲ್ಲ ಎಂದಿದ್ದಾರೆ. ಡೀಸೆಲ್ ದರ ಏರಿದಾಗ ಸಾರಿಗೆ ವೆಚ್ಚವೂ ಸ್ವಯಂಚಾಲಿತವಾಗಿ ಹೆಚ್ಚುತ್ತದೆ. ಅದನ್ನು ತಪ್ಪಿಸಲು ಸಾಧ್ಯವಿಲ್ಲ'' ಎಂದು ಅವರು ತಿಳಿಸಿದ್ದಾರೆ. ಡೀಸೆಲ್ ದರ ಏರಿಕೆಗೆ ಅನುಗುಣವಾಗಿ ಸರಕು ಸಾಗಣೆ ದರವನ್ನು ಶೇ.10ರಷ್ಟು ಹೆಚ್ಚಿಸುವ ಕುರಿತು ಚರ್ಚಿಸಲು ಬುಧವಾರ (ಮೇ 27) ಸಾರಿಗೆ ಸಂಸ್ಥೆಗಳ ಸಭೆ ಕರೆಯಲಾಗಿದೆ ಎಂದು ಶಣ್ಮುಗಪ್ಪ ಹೇಳಿದ್ದಾರೆ.

---

## ದ್ವೇಷ ಭಾಷಣ ಮಸೂದೆಗೆ ಕೇಂದ್ರ ಗೃಹಸಚಿವಾಲಯದಿಂದ ಬ್ರೇಕ್

• ಉದಯವಾಹಿನಿ,ಬೆಂಗಳೂರು

ಕರ್ನಾಟಕದ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧ ತಡೆ ಮಸೂದೆಗೆ ಅಮಿತ್ ಶಾ ನೇತೃತ್ವದ ಗೃಹ ಸಚಿವಾಲಯವು ಬ್ರೇಕ್‌ಹಾಕಿದ್ದು, ಈಗಿರುವ ಕಾನೂನು ವ್ಯವಸ್ಥೆಯೇ ಸಾಕಷ್ಟು ಸಮರ್ಪಕವಾಗಿದೆ. ಆ ಕಾರಣಕ್ಕೆ ಹೊಸ ಕಾನೂನು ಅಗತ್ಯವಿಲ್ಲದಿರಬಹುದು ಎಂದು ಹೇಳಿದೆ. ಈ ಕುರಿತ ತನ್ನ ಅಭಿಪ್ರಾಯವನ್ನು ಕೇಂದ್ರ ಗೃಹ ಸಚಿವಾಲಯ ರಾಜ್ಯ ಸರ್ಕಾರಕ್ಕೆ ತಿಳಿಸಿದೆ. ಇದೇ ವರ್ಷ ಫೆಬ್ರವರಿಯಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಮಸೂದೆಗೆ ಅನುಮೋದನೆ ನೀಡಲು ನಿರಾಕರಿಸಿದ ನಂತರ, ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಅನುಮೋದನೆಗಾಗಿ ಮಸೂದೆಯನ್ನು ಗೃಹ ಸಚಿವಾಲಯಕ್ಕೆ ಕಳುಹಿಸಲಾಗಿತ್ತು. ಕಠಿಣ ನಿಯಮಗಳನ್ನು ಒಳಗೊಂಡಿದ್ದ ಈ ಮಸೂದೆ ಪ್ರಕಾರ, ದ್ವೇಷ ಅಪರಾಧ ಅಥವಾ ದ್ವೇಷ ಭಾಷಣ ಮಾಡಿದರೆ ಒಂದು ವರ್ಷದಿಂದ ಏಳು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ 50 ಸಾವಿರ ದಂಡ ವಿಧಿಸುವ ಅವಕಾಶವಿತ್ತು.

---

## 4ನೇ ವಾರ್ಷಿಕೋತ್ಸವದಲ್ಲಿ ವಿಶೇಷ ಸನ್ಮಾನ

• ಉದಯವಾಹಿನಿ, ಬೆಂಗಳೂರು

ನಂದಿನಿ ಲೇಔಟ್‌ನಲ್ಲಿ ಜೈ ಭೀಮ್ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘದ 4ನೇ ವರ್ಷದ ವಾರ್ಷಿಕೋತ್ಸವವನ್ನು ಅತ್ಯಂತ ಯಶಸ್ವಿಯಾಗಿ ಆಚರಿಸಲಾಯಿತು. ವಾರ್ಷಿಕೋತ್ಸವದ ಅಂಗವಾಗಿ ನೂತನ ಬಸ್‌ಸ್ಟ್ಯಾಂಡ್ ಹಾಗೂ ಸಂಘಟನೆಯ ನಾಮಫಲಕವನ್ನು ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ರಾಷ್ಟ್ರೀಯ ಅಧ್ಯಕ್ಷರಾದ ಸೀನಾ ರಾಮ್, ರಾಜರಾಜೇಶ್ವರಿ ನಗರ ಕ್ಷೇತ್ರದ ಯುವ ನಾಯಕಿ ಕುಸುಮಾ ಹಾಗೂ ಮಾಜಿ ಬಿಬಿಎಂಪಿ ಸದಸ್ಯರಾದ ವೇಲು ನಾಯಕ್ ಅವರು ಜಂಟಿಯಾಗಿ ಉದ್ಘಾಟಿಸಿದರು. ನಾಮಫಲಕ ಉದ್ಘಾಟನೆ ಬಳಿಕ ನಡೆದ ಸಭಾ ಕಾರ್ಯಕ್ರಮದಲ್ಲಿ ಸಮಾಜದ ವಿವಿಧ ಕ್ಷೇತ್ರಗಳಲ್ಲಿ ಅಪಾರ ಸೇವೆ ಸಲ್ಲಿಸುತ್ತಿರುವ ಹಿರಿಯ ಕಾರ್ಮಿಕರು, ಪೌರ ಕಾರ್ಮಿಕರು, ಆಶಾ ಕಾರ್ಯಕರ್ತೆಯರು ಹಾಗೂ ಸರ್ಕಾರಿ ಶಾಲಾ ಶಿಕ್ಷಕರನ್ನು ಗುರುತಿಸಿ ಗೌರವಪೂರ್ವಕವಾಗಿ ಸನ್ಮಾನಿಸಲಾಯಿತು. ಪ್ರಧಾನ ಕಾರ್ಯದರ್ಶಿ ರವಿಚಂದ್ರನ್ ಸೇರಿದಂತೆ ಸಂಘದ ಪ್ರಮುಖ ಪದಾಧಿಕಾರಿಗಳು ಹಾಗೂ ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

---

# ಸಿಲಿಕಾನ್ ಸಿಟಿಗೆ 3ನೇ ಸ್ಥಾನ!

**ದೇಶದಲ್ಲಿ ಇತ್ತೀಚಿನ ಕೆಲ ವರ್ಷಗಳಲ್ಲಿ ಆರ್ಥಿಕ ಅಪರಾಧಗಳ ಪ್ರಮಾಣ ಗಣನೀಯವಾಗಿ ಏರಿಕೆಯಾಗುತ್ತಿದ್ದು, ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಕಳೆದ 3 ವರ್ಷಗಳಲ್ಲಿ 10,580 ಅಪರಾಧ ಪ್ರಕರಣಗಳು ದಾಖಲಾಗಿದ್ದು, ಪ್ರತಿ ಎರಡೂವರೆ ತಾಸಿಗೊಮ್ಮೆ ಒಂದು ಆರ್ಥಿಕ ಅಪರಾಧ ನಡೆಯುತ್ತಿದೆ ಎಂದು ವರದಿ ತಿಳಿಸಿದೆ.**

**ಬೆಂಗಳೂರಲ್ಲಿ ಪ್ರತಿ 2.5 ಗಂಟೆಗೊಂದು ಆರ್ಥಿಕ ವಂಚನೆ ಪ್ರಕರಣ: ದೇಶದ ಟಾಪ್**



**ಎರಡೂವರೆ ಗಂಟೆಗೊಂದು ಪ್ರಕರಣ ದಾಖಲು!**

• ಉದಯವಾಹಿನಿ ,ಬೆಂಗಳೂರು

ದೇಶದ ತಂತ್ರಜ್ಞಾನ ರಾಜಧಾನಿ ಎಂದೇ ಹೆಸರಾಗಿರುವ ಬೆಂಗಳೂರಿನಲ್ಲಿ ಪ್ರತಿ ಎರಡೂವರೆ ತಾಸಿಗೊಮ್ಮೆ ಒಂದು ಆರ್ಥಿಕ ಅಪರಾಧ ಘಟಿಸುತ್ತಿದ್ದು, ಸಾರ್ವಜನಿಕರ ಹಣ ವಂಚಕರ ಪಾಲಾಗುತ್ತಿದೆ. ಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ 10,580 ಅಪರಾಧ ಪ್ರಕರಣಗಳು ವರದಿಯಾಗಿದ್ದು, ನಕಲಿ ದಾಖಲೆಗಳ ಸೃಷ್ಟಿ, ವಂಚನೆ, ಹಣಕಾಸು ಅಕ್ರಮಗಳು ಹಾಗೂ ವೈಟ್ ಕಾಲರ್ ಅಪರಾಧಗಳು ಇದರಲ್ಲಿ ಸೇರಿವೆ. 2024ರಲ್ಲಿ ಬೆಂಗಳೂರಿನಲ್ಲಿ 3,477 ಆರ್ಥಿಕ ಅಪರಾಧ ಪ್ರಕರಣಗಳು ದಾಖಲಾಗಿದ್ದು, ಅತಿ ಹೆಚ್ಚು ಆರ್ಥಿಕ ಅಪರಾಧಗಳು ವರದಿಯಾದ ದೇಶದ ಐದು ಮಹಾನಗರಗಳ ಪಟ್ಟಿಯಲ್ಲಿ ಬೆಂಗಳೂರು ಸಹ ಸೇರಿದೆ ಎಂದು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೋ ವರದಿ ಹೇಳಿದೆ.

2024ಕ್ಕೆ ಹೋಲಿಸಿದರೆ 2023ರಲ್ಲಿ ನಗರದಲ್ಲಿ 3,858 ಹಾಗೂ 2022ರಲ್ಲಿ 3,245 ಆರ್ಥಿಕ ಅಪರಾಧ ಪ್ರಕರಣಗಳು ದಾಖಲಾಗಿವೆ. ಆದರೂ ಪ್ರತಿನಿತ್ಯ ಸರಾಸರಿ 10 ಪ್ರಕರಣಗಳು ನಡೆಯುತ್ತಿವೆ. ಹಿಂದಿನ ವರ್ಷಗಳ ದತ್ತಾಂಶವನ್ನು ಅವಲೋಕಿಸಿದರೆ ಆರ್ಥಿಕ ಅಪರಾಧಗಳಲ್ಲಿ ಏರಿಳಿತವಾಗಿರುವುದು ಕಂಡು ಬಂದಿದೆ. 2024ರಲ್ಲಿ ಮುಂಬಯಿ, ಹೈದರಾಬಾದ್, ಜೈಪುರ ಮತ್ತು ಹೊಸದಿಲ್ಲಿಯಲ್ಲಿ ಮಾತ್ರ ಹೆಚ್ಚಿನ ಆರ್ಥಿಕ ಅಪರಾಧ ಪ್ರಕರಣಗಳು ದಾಖಲಾಗಿದ್ದವು.

ಇತ್ತೀಚಿನ ವರ್ಷಗಳಲ್ಲಿ ಆರ್ಥಿಕ ಅಪರಾಧಗಳ ಸ್ವರೂಪ ಸಂಪೂರ್ಣ ಬದಲಾಗಿದೆ. ಅತಿ ದೊಡ್ಡ ಅಪರಾಧ ಕೃತ್ಯಗಳು ಕಳ್ಳತನ ಅಥವಾ ದೈಹಿಕ ಹಿಂಸೆಗೆ ಸೀಮಿತವಾಗಿಲ್ಲ. ಬೆಂಗಳೂರಿನಲ್ಲಿ ದಾಖಲಾದ 3,477 ಆರ್ಥಿಕ ಅಪರಾಧ ಪ್ರಕರಣಗಳಲ್ಲಿ 3,249 (ಶೇ.93) ನಕಲಿ ದಾಖಲೆಗಳ ಸೃಷ್ಟಿ ಮತ್ತು ವಂಚನೆಯಡಿ ಬಂದಿವೆ. ಕಳ್ಳತನ, ಬೀದಿ ಬದಿಯ ಅಪರಾಧ ಕೃತ್ಯಗಳಿಂದ ಡಿಜಿಟಲ್ ವಂಚನೆವರೆಗೆ ಈ ಪ್ರವೃತ್ತಿ ವಿಸ್ತರಿಸಿದೆ. ಕರ್ನಾಟಕದಲ್ಲಿ 2024ರಲ್ಲಿ ಒಟ್ಟಾರೆ 7,814 ಆರ್ಥಿಕ ಅಪರಾಧಗಳು ನಡೆದಿವೆ ಎಂದು ಎನ್‌ಸಿಆರ್‌ಬಿ ವರದಿ ತಿಳಿಸಿದೆ.

ಕರ್ನಾಟಕದಲ್ಲಿ ಆರ್ಥಿಕ ಅಪರಾಧಗಳ ಸರಾಸರಿಯು ಪ್ರತಿ ಲಕ್ಷ ಜನಸಂಖ್ಯೆಗೆ 11.4 ಪ್ರಕರಣಗಳಷ್ಟಿದೆ. ರಾಜ್ಯದ ಇತರೆ ಭಾಗಗಳಿಗೆ ಹೋಲಿಸಿದರೆ ಬೆಂಗಳೂರಿನಲ್ಲಿ ಅತಿ ಹೆಚ್ಚು (ಪ್ರತಿ ಲಕ್ಷ ಜನಸಂಖ್ಯೆಗೆ 40.9 ಪ್ರಕರಣ) ಆರ್ಥಿಕ ಅಪರಾಧಗಳು ನಡೆಯುತ್ತಿವೆ.

ನಗರದ ದೊಡ್ಡ ಡಿಜಿಟಲ್ ಆರ್ಥಿಕತೆ, ಭಾರಿ ಆನ್‌ಲೈನ್ ಬ್ಯಾಂಕಿಂಗ್ ಬಳಕೆ ಮತ್ತು ಸಕ್ರಿಯ ಹೂಡಿಕೆ, ಕ್ರಿಪ್ಟೋ ಕರೆನ್ಸಿ ಹಗರಣ , ವಾಣಿಜ್ಯ ಅಪ್ಲಿಕೇಶನ್‌ಗಳ ವಂಚನೆ, ಸಾಲದ ಅಪ್ಲಿಕೇಶನ್‌ಗಳ ಸುಲಿಗೆಯು ಇದಕ್ಕೆ ಕಾರಣ. ಅಪರಾಧದ ಸರಾಸರಿ ಲೆಕ್ಕಾಚಾರವು 2011ರ ಜನಗಣತಿಯ ದತ್ತಾಂಶವನ್ನು ಆಧರಿಸಿದೆ ಎಂದು ಹಿರಿಯ ಪೊಲೀಸ್ ಅಧಿಕಾರಿಗಳು ಹೇಳಿದ್ದಾರೆ.

**3 ವರ್ಷಗಳಲ್ಲಿ ಬೆಂಗಳೂರಲ್ಲಿ 10,580 ಅಪರಾಧ ಪ್ರಕರಣಗಳು ದಾಖಲು**

### ಲಖನೌಗೆ ಮೊದಲ ಸ್ಥಾನ

**ಆರ್ಥಿಕ ಅಪರಾಧಗಳಲ್ಲಿ ಉತ್ತರ ಪ್ರದೇಶದ ರಾಜಧಾನಿ ಲಖನೌ ನಗರವು ದೇಶದ ಅಗ್ರ ಮೆಟ್ರೊಪಾಲಿಟನ್ ನಗರವಾಗಿ ಹೊರಹೊಮ್ಮಿದೆ. ಎನ್‌ಸಿಆರ್‌ಬಿ ವರದಿ ಪ್ರಕಾರ ಲಖನೌ ನಗರವು ಒಂದು ಲಕ್ಷ ರೂ.ಗಿಂತ ಕಡಿಮೆ ಮೊತ್ತದ ಆರ್ಥಿಕ ಅಪರಾಧಗಳ ವಿಭಾಗದಲ್ಲಿ ದೇಶದ 53 ಮಹಾನಗರಗಳಲ್ಲಿ ಮೊದಲ ಸ್ಥಾನದಲ್ಲಿದೆ. 2024ರಲ್ಲಿ ಲಖನೌದಲ್ಲಿ 251 ಪ್ರಕರಣಗಳು ದಾಖಲಾಗಿದ್ದು, ಇದು ದೇಶದಲ್ಲೇ ಅತಿ ಹೆಚ್ಚು. ಮುಂಬಯಿ ನಗರವು 248 ಆರ್ಥಿಕ ಅಪರಾಧ ಪ್ರಕರಣಗಳೊಂದಿಗೆ ಎರಡನೇ ಸ್ಥಾನದಲ್ಲಿದೆ. ಬೆಂಗಳೂರು ನಗರದಲ್ಲಿ 95 ಪ್ರಕರಣ ದಾಖಲಾಗುವುದರೊಂದಿಗೆ ಮೂರನೇ ಸ್ಥಾನದಲ್ಲಿದೆ. ಸೂರತ್‌ನಲ್ಲಿ 63, ಜೈಪುರದಲ್ಲಿ40 ಮತ್ತು ನಾಗಪುರದಲ್ಲಿ 32 ಪ್ರಕರಣಗಳು ದಾಖಲಾಗಿವೆ. ಲಖನೌನಲ್ಲಿ 2024ರಲ್ಲಿ ಒಟ್ಟಾರೆ 1,732 ಆರ್ಥಿಕ ಅಪರಾಧಗಳು ದಾಖಲಾಗಿದ್ದು, ಈ ಪೈಕಿ 312 ನಂಬಿಕೆ ದ್ರೋಹ ಪ್ರಕರಣಗಳು ಸೇರಿವೆ. ಲಖನೌನಲ್ಲಿ 2023ರಲ್ಲಿ 2,446 ಮತ್ತು 2022ರಲ್ಲಿ 3,702 ಪ್ರಕರಣಗಳು ದಾಖಲಾಗಿದ್ದವು. ಕಳೆದ ಮೂರು ವರ್ಷಗಳ ಅಂಕೆ ಸಂಖ್ಯೆಯನ್ನು ವಿಶ್ಲೇಷಿಸಿದರೆ ಆರ್ಥಿಕ ಅಪರಾಧಗಳ ಪ್ರಮಾಣ ಇಳಿಕೆಯಾಗಿದೆ. ಆದರೂ ಲಖನೌನಲ್ಲಿ ಆರ್ಥಿಕ ಅಪರಾಧಗಳ ಸರಾಸರಿಯು ಪ್ರತಿ ಒಂದು ಲಕ್ಷ ಜನಸಂಖ್ಯೆಗೆ 59.7ರಷ್ಟಿದೆ. ಇದು ಮಹಾನಗರಗಳಲ್ಲಿ ದಾಖಲಾದ ಸರಾಸರಿ ದರ 37.5ಕ್ಕಿಂತ ಗಮನಾರ್ಹವಾಗಿ ಹೆಚ್ಚಾಗಿದೆ. ಲಖನೌನಲ್ಲಿ ಆರ್ಥಿಕ ಅಪರಾಧಗಳಿಗೆ ಸಂಬಂಧಿಸಿದಂತೆ ಆರೋಪ ಪಟ್ಟಿ ಸಲ್ಲಿಕೆ ದರವು ಶೇ.50.8ರಷ್ಟಿದೆ.**

### ಶಿಕ್ಷೆ ಪ್ರಮಾಣ ಕೇವಲ ಶೇ.5ರಷ್ಟು

**ಎನ್‌ಸಿಆರ್‌ಬಿ ಅಂಕಿ ಅಂಶಗಳು ಕಾನೂನು ವ್ಯವಸ್ಥೆಯ ಮೇಲೆ ಹೆಚ್ಚುತ್ತಿರುವ ಒತ್ತಡವನ್ನು ತೋರಿಸುತ್ತವೆ. 2024ರ ಅಂತ್ಯಕ್ಕೆ ಬೆಂಗಳೂರಿನಲ್ಲಿ 13,616 ಆರ್ಥಿಕ ಅಪರಾಧ ಪ್ರಕರಣಗಳು ವಿಚಾರಣೆಗೆ ಬಾಕಿ ಉಳಿದಿವೆ. ಇಂತಹ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣ ಕೇವಲ ಶೇ.5ರಷ್ಟಿದ್ದರೆ, ವಿಚಾರಣೆಗೆ ಬಾಕಿಯಿರುವ ಪ್ರಕರಣಗಳ ಪ್ರಮಾಣವು ಶೇ.95 ದಾಟಿದೆ.ಆರ್ಥಿಕ ಅಪರಾಧ ಪ್ರಕರಣಗಳಲ್ಲಿ ಪೊಲೀಸರು ಆರೋಪಪಟ್ಟಿ ಸಲ್ಲಿಸುತ್ತಿರುವ ಪ್ರಮಾಣವು ಶೇ.49.1ರಷ್ಟಿದೆ. ವಂಚಕರು ಹಣಕಾಸು ಅಪರಾಧ ಜಾಲಗಳು, ಮ್ಯೂಲ್ ಬ್ಯಾಂಕ್ ಖಾತೆಗಳು, ತಾತ್ಕಾಲಿಕ ಸಿಮ್ ಕಾರ್ಡ್ ಮತ್ತು ಎನ್‌ಕ್ರಿಪ್ಟ್ ಸಂವಹನ ಮಾರ್ಗಗಳನ್ನು ಬಳಸಿಕೊಂಡು ದುಷ್ಕೃತ್ಯ ಎಸಗುತ್ತಿದ್ದಾರೆ. ಹೀಗಾಗಿ, ಆರೋಪಿಗಳ ಪತ್ತೆ, ವಿಚಾರಣೆ, ತನಿಖೆ ಮತ್ತು ಹಣದ ಜಪ್ತಿ ಪ್ರಕ್ರಿಯೆಯು ಕಷ್ಟಸಾಧ್ಯವಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.**

---

# ಆಟೋ ಚಾಲಕನ ಹತ್ಯೆಗೈದು ಹೂತುಹಾಕಿದ ಸ್ನೇಹಿತರು

• ಉದಯವಾಹಿನಿ, ಬೆಂಗಳೂರು

ಹಣಕಾಸಿನ ವಿಚಾರಕ್ಕೆ ಆಟೋ ಚಾಲಕನನ್ನು ಸ್ನೇಹಿತರೇ ಬರ್ಬರವಾಗಿ ಹತ್ಯೆಗೈದು ನಿರ್ಜನ ಪ್ರದೇಶದಲ್ಲಿ ಹೂತುಹಾಕಿದ ಆತಂಕಕಾರಿ ಘಟನೆ ಬೆಂಗಳೂರಿನಲ್ಲಿ ನಡೆದಿದೆ. ಕುಂಬಳಗೋಡಿನ ರಾಮಸಂದ್ರ ಕೆರೆ ಬಳಿ ಘಟನೆ ನಡೆದಿದೆ. ತಾವರೆಕೆರೆಯ ಉದಯ ಲೇಔಟ್ ನಿವಾಸಿಯಾಗಿದ್ದ ರಕ್ಷಿತ್.ಎನ್ (25) ಹತ್ಯೆಯಾದವರು. ಆರೋಪಿಗಳ ಪೈಕಿ ಮೊಹಿನ್ ಪಾಶಾ ಎಂಬಾತನನ್ನು ಬಂಧಿಸಲಾಗಿದ್ದು, ಹಸನ್ ಎಂಬಾತನಿಗಾಗಿ ಹುಡುಕಾಟ ಮುಂದುವರೆಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ಯಾಸೆಂಜರ್ ಆಟೋ ಚಾಲಕನಾಗಿದ್ದ ರಕ್ಷಿತ್.ಎನ್ ತನ್ನ ಸ್ನೇಹಿತ ಕಂಬೀಪುರದ ವಾಸಿ ಮೋಹಿನ್ ಪಾಶಾಗೆ ಹಣ ನೀಡಿದ್ದ. ಹಣ ವಾಪಸ್ ಪಡೆದುಕೊಂಡು ಬರುವುದಾಗಿ ಮೇ 24ರಂದು ಸಂಜೆ 6 ಗಂಟೆಗೆ ಮನೆಯಿಂದ ತೆರಳಿದ್ದವನು ಮರಳಿರಲಿಲ್ಲ. ನಂತರ ಮೇ 25ರಂದು ರಕ್ಷಿತ್ ತಾಯಿ ಕಂಬೀಪುರಕ್ಕೆ ತೆರಳಿ ಮೋಹಿನ್ ಪಾಶಾನ ಬಳಿ ಮಗನ ಬಗ್ಗೆ ವಿಚಾರಿಸಿದ್ದರು.

ಆಗ ಆರೋಪಿಗಳು ಹಣಕಾಸಿನ ವಿಚಾರಕ್ಕೆ ರಕ್ಷಿತ್ ಜೊತೆ ಗಲಾಟೆ ಮಾಡಿಕೊಂಡು ಆತನ ತಲೆ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆಗೈದು, ರಾಮಸಂದ್ರದ ಕೆರೆಯ ಬಳಿ ಹೂತಿರುವುದಾಗಿ ಹಾಗೂ ಆತನ ಆಟೋವನ್ನು ಜ್ಞಾನಭಾರತಿ ಬಳಿ ಬಿಟ್ಟಿರುವುದಾಗಿ ಮೋಹಿನ್ ಪಾಶಾ ಬಾಯಿಬಿಟ್ಟಿದ್ದ.

ರಕ್ಷಿತ್ ತಾಯಿ ನೀಡಿರುವ ದೂರಿನನ್ವಯ ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮೋಹಿನ್ ಪಾಶಾನನ್ನು ಬಂಧಿಸಿದ್ದಾರೆ. ಸದ್ಯ ಮೃತದೇಹವನ್ನು ಹೊರತೆಗೆಯಲಾಗಿದ್ದು, ಮರಣೋತ್ತರ ಪರೀಕ್ಷೆಗಾಗಿ ರವಾನಿಸಲಾಗಿದೆ. ಮತ್ತೋರ್ವ ಆರೋಪಿಗಾಗಿ ಹುಡುಕಾಟ ಮುಂದುವರೆದಿದೆ ಎಂದು ಕುಂಬಳಗೋಡು ಠಾಣೆ ಪೊಲೀಸರು ತಿಳಿಸಿದ್ದಾರೆ.

---

## ಮೇಕೆದಾಟು ವಿವಾದ : ತಮಿಳುನಾಡು ಮೇಲ್ಮನವಿ ಅರ್ಜಿ ತಿರಸ್ಕರಿಸಿರುವುದು

• ಉದಯವಾಹಿನಿ, ಬೆಂಗಳೂರು




☛ ಉದಯವಾಹಿನಿ ಚಿತ್ರ

ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟು ಅಣೆಕಟ್ಟು ನಿರ್ಮಿಸಿರುವ ಯೋಜನೆ ಕುರಿತಂತೆ ತಮಿಳುನಾಡು ಸರ್ಕಾರ ಸಲ್ಲಿಸಿದ ಮೇಲ್ಮನವಿ ಅರ್ಜಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿದೆ. ಇದು ಕರ್ನಾಟಕ್ಕೆ ಸಿಹಿ ಸುದ್ದಿ ಎಂದು ಜಲಸಂಪನೂಲ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈಗಷ್ಟೇ ಸುಪ್ರೀಂಕೋರ್ಟಿನ ಆದೇಶದ ಮಾಹಿತಿ ತಮಗೆ ಸಿಕ್ಕಿದೆ. ಕರ್ನಾಟಕದ ಪರವಾಗಿ ಸುಪ್ರೀಂಗೆ ಧನ್ಯವಾದ ಹೇಳುತ್ತೇನೆ ಎಂದರು.

ಈ ಮೊದಲು ಮೇಕೆದಾಟು ಯೋಜನೆ ಕುರಿತು ಚರ್ಚೆಯಾದಾಗ, ತಮಿಳುನಾಡಿಗೆ 177 ಟಿಎಂಸಿ



ನೀರನ್ನು, ಕಾವೇರಿ ನ್ಯಾಯಾಧೀಕರಣ ತೀರ್ಪಿನಂತೆ ಹರಿಸುವುದು ಕರ್ನಾಟಕದ ಹೊಣೆಗಾರಿಕೆ ಎಂದು ಷರತ್ತು ವಿಧಿಸಲಾಗಿತ್ತು. ಅದರ ಹೊರತಾಗಿ ಮೇಕೆದಾಟು ಯೋಜನೆಗೆ ಅಡ್ಡಿಪಡಿಸುವುದು ಅನಗತ್ಯ ಎಂದು ಸುಪ್ರೀಂಕೋರ್ಟ್ ಅಭಿಪ್ರಾಯ ಪಟ್ಟಿತ್ತು.

ಈ ತೀರ್ಪು ಪುನರ್ ಪರಿಶೀಲನೆಯಾಗಬೇಕೆಂದು ತಮಿಳುನಾಡು ಸರ್ಕಾರ ಸುಪ್ರೀಂಕೋರ್ಟ್‌ಗೆ ಮೇಲನವಿ ಸಲ್ಲಿಸಿತ್ತು. ಅದರ ಆಧಾರದ ಮೇಲೆ ಮೂವರು ನ್ಯಾಯಮೂರ್ತಿಗಳನ್ನೊಳಗೊಂಡ ವಿಭಾಗೀಯ ಪೀಠವನ್ನು ಸುಪ್ರೀಂಕೋರ್ಟ್‌ನಲ್ಲಿ ರಚಿಸಲಾಗಿತ್ತು. ಇಂದು ವಿಚಾರಣೆ ನಡೆಸಿದ ಪೀಠ, ತಮಿಳುನಾಡಿನ ಮೇಲನವಿಯನ್ನು ತಿರಸ್ಕರಿಸಿದೆ ಎಂದು ವಿವರಿಸಿದರು.

ಈ ತೀರ್ಪು ಕರ್ನಾಟಕದ ಪರವಾಗಿದೆ. ಮೇಕೆದಾಟು ಅಣೆಕಟ್ಟು ನಿರ್ಮಾಣ ಯೋಜನೆ ಕೈಗೊಳ್ಳಲು ಅಗತ್ಯವಾದ ಅನುಮತಿಗಳನ್ನು ನೀಡುವುದು ಕೇಂದ್ರ ಸರ್ಕಾರದ ಕರ್ತವ್ಯವಾಗಿದೆ. ಈಗಾಗಲೇ ಹಳೆಯ ವಿಸ್ತೃತ ಯೋಜನಾ ವರದಿ ಕೇಂದ್ರದ ಬಳಿ ಇದೆ. ಪರಿಷ್ಕೃತ ಯೋಜನಾ ವರದಿ ಸಿದ್ಧಪಡಿಸುವ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ತಿಳಿಸಿದರು.

---

## ಇಡ್ಲಿಗೆ 90, ಮಸಾಲೆ ದೋಸೆಗೆ 150 ಆಗಬಹುದು: ರಾಜ್ಯ ಹೋಟೆಲ್‌ಗಳ ಸಂಘ ಎಚ್ಚರಿಕೆ

• ಉದಯವಾಹಿನಿ,ಬೆಂಗಳೂರು

ಕಾರ್ಮಿಕರ ಕನಿಷ್ಠ ವೇತನವನ್ನು ಶೇ.60ರಷ್ಟು ಹೆಚ್ಚಿಸಿ ಕರ್ನಾಟಕ ಸರ್ಕಾರ ಅಧಿಸೂಚನೆ ಹೊರಡಿಸಿದೆ. ರಾಜ್ಯ ಸರ್ಕಾರದ ಈ ನಿರ್ಧಾರದಿಂದ ರಾಜ್ಯಾದ್ಯಂತ ಹೋಟೆಲ್‌ಗಳು ಮತ್ತು ರೆಸ್ಟೋರೆಂಟ್‌ಗಳಲ್ಲಿ ಆಹಾರ ದರ ತೀವ್ರವಾಗಿ ಏರಿಕೆಯಾಗಲಿದೆ ಎಂದು ಕರ್ನಾಟಕ ರಾಜ್ಯ ಹೋಟೆಲ್‌ಗಳ ಸಂಘ ಎಚ್ಚರಿಸಿದೆ.

ಕಾರ್ಮಿಕರ ಸರಾಸರಿ ಕನಿಷ್ಠ ವೇತನ ಹೆಚ್ಚಳವು ಸದ್ಯದ ವೇತನಕ್ಕಿಂತ ಸುಮಾರು ಶೇ.60ರಷ್ಟಿದೆ. ಇದು ಹೋಟೆಲ್ ಉದ್ಯಮದ ಮೇಲೆ, ವಿಶೇಷವಾಗಿ ಸಣ್ಣ ಮತ್ತು ಕುಟುಂಬ ನಡೆಸುವ ಹೋಟೆಲ್‌ಗಳ ಮೇಲೆ ತೀವ್ರ ಪರಿಣಾಮ ಬೀರಬಹುದು ಎಂದು ಅಧ್ಯಕ್ಷ ಜಿ.ಕೆ.ಶೆಟ್ಟಿ ಹೇಳಿದ್ದಾರೆ.

**ಹೋಟೆಲ್ ಆಹಾರ ದುಪ್ಪಟ್ಟು ಸಾಧ್ಯತೆ:** ಪ್ರಸ್ತುತ ಸುಮಾರು 50 ರೂ. ಇರುವ ಒಂದು ಪ್ಲೇಟ್ ಇಡ್ಲಿಯ ಬೆಲೆ ಸುಮಾರು 80-90 ರೂ.ಗೆ ಏರಿಕೆಯಾಗಬಹುದು.

ಹಾಗೆಯೇ ಮಸಾಲೆ ದೋಸೆಯ ಬೆಲೆ ಸುಮಾರು 80-90 ರೂ.ನಿಂದ ಸುಮಾರು 150ರೂ.ಗೆ ಹೆಚ್ಚಳವಾಗಬಹುದು. 150-200 ರೂ. ಸಸ್ಯಾಹಾರಿ ಊಟ 250-300 ರೂ. ವರೆಗೆ, ಬೆಂಗಳೂರಿನಲ್ಲಿ ಪ್ರಸ್ತುತ 300-350 ರೂ. ನ ಬಿರಿಯಾನಿ ಭಕ್ಷ್ಯಗಳು ಸುಮಾರು 500 ರೂ.ವರೆಗೆ ತಲುಪಬಹುದು ಎಂದು ಸಂಘ ತಿಳಿಸಿದೆ.

ಪರಿಷ್ಕೃತ ವೇತನ ರಚನೆಯ ಪ್ರಕಾರ ವಲಯ 3 ತಾಲ್ಲೂಕುಗಳಲ್ಲಿ ಕೌಶಲ್ಯರಹಿತ ಕೆಲಸಗಾರನಿಗೆ ಸುಮಾರು 19,300 ರೂ. ಮತ್ತು ವಲಯ 1 ಪ್ರದೇಶಗಳಲ್ಲಿ ಕೌಶಲ್ಯಪೂರ್ಣ ಕೆಲಸಗಾರನಿಗೆ ಸುಮಾರು 31,100 ರೂ. ವರೆಗೆ ಇರಲಿದೆ. ಕಾರ್ಯಾಚರಣೆಯ ವೆಚ್ಚದಲ್ಲಿನ ತೀವ್ರ ಏರಿಕೆಯಿಂದಾಗಿ ಈಗಾಗಲೇ ಆರ್ಥಿಕ ಒತ್ತಡದಲ್ಲಿದೆ. ವಾಣಿಜ್ಯ ಎಲ್‌ಪಿಜಿ ಸಿಲಿಂಡರ್ ಬೆಲೆ ಕೆಲವೇ ತಿಂಗಳಲ್ಲಿ 1,884 ರೂ.ನಿಂದ 3,152 ರೂ.ಗೆ ಏರಿದೆ. ಹಾಗೆಯೆ ದಿನಸಿ ಬೆಲೆಗಳು, ವಿದ್ಯುತ್ ಸುಂಕಗಳು ಮತ್ತು ಕಸದ ಸೆಸ್ ಶುಲ್ಕಗಳ ಹೆಚ್ಚಳವೂ ಆಗಿದೆ ಎಂದು ಶೆಟ್ಟಿ ಉಲ್ಲೇಖಿಸಿದರು.

ಹೋಟೆಲ್‌ಗಳು ಇತರ ವಲಯಗಳಂತೆ ಅಲ್ಲ. ನಾವು ಉದ್ಯೋಗಿಗಳಿಗೆ ಆಹಾರ, ವಸತಿ ಮತ್ತು ಇತರ ಸೌಲಭ್ಯಗಳನ್ನು ಒದಗಿಸುತ್ತೇವೆ. ಇಷ್ಟು ದೊಡ್ಡ ವೇತನ ಹೆಚ್ಚಳ ವಿಧಿಸುವ ಮೊದಲು ಸರ್ಕಾರವು ಹೋಟೆಲ್ ಉದ್ಯಮದ ಸ್ವರೂಪವನ್ನು ಪರಿಗಣಿಸಬೇಕಾಗಿತ್ತು ಎಂದು ಶೆಟ್ಟಿ ಅಭಿಪ್ರಾಯಪಟ್ಟರು.

---

## ಜೂ.18ಕ್ಕೆ ಏಳು ವಿಧಾನ ಪರಿಷತ್ ಸ್ಥಾನಗಳಿಗೆ ಚುನಾವಣೆ

• ಉದಯವಾಹಿನಿ, ಬೆಂಗಳೂರು

ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯಲಿರುವ 7 ಸ್ಥಾನಗಳ ಚುನಾವಣೆಗೆ ಭಾರತೀಯ ಚುನಾವಣಾ ಆಯೋಗ ಅಧಿಸೂಚನೆ ಹೊರಡಿಸಿದ್ದು, ಜೂ.18ರಂದು ಮತದಾನ ನಡೆಯಲಿದೆ. ವಿಧಾನಪರಿಷತ್‌ನ 7 ಸದಸ್ಯರ ಅಧಿಕಾರಾವಧಿ ಜೂ.30ಕ್ಕೆ ಕೊನೆಗೊಳ್ಳಲಿದ್ದು, ತೆರವಾಗಲಿರುವ ಈ ಸ್ಥಾನಕ್ಕೆ ಜೂ.18ರಂದು ಮತದಾನ ನಡೆದು ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ.

ಜೂ.1ರಂದು ಅಧಿಸೂಚನೆ ಹೊರಡಲಿದ್ದು, ಜೂ.8 ನಾಮಪತ್ರ ಸಲ್ಲಿಸಲು ಕೊನೆಯ ದಿನವಾಗಿದೆ. ಜೂ.9 ನಾಮಪತ್ರಗಳ ಪರಿಶೀಲನೆ ನಡೆದು, ನಾಮಪತ್ರ ಹಿಂಪಡೆಯಲು ಜೂ.11 ಕಡೆಯ ದಿನವಾಗಿದೆ.

ಜೂ.18ರಂದು ಬೆಳಗ್ಗೆ 9 ಗಂಟೆಯಿಂದ ಸಂಜೆ 4 ಗಂಟೆವರೆಗೆ ಮತದಾನ, 5 ಗಂಟೆ ನಂತರ ಮತ ಎಣಿಕೆ ನಡೆದು ಫಲಿತಾಂಶ ಪ್ರಕಟವಾಗಲಿದೆ.

**ಯಾರ್ಯಾರು ನಿವೃತ್ತಿ:** ವಿಧಾನಸಭೆಯಿಂದ ವಿಧಾನಪರಿಷತ್‌ಗೆ ನಡೆಯುವ ದ್ವೈವಾರ್ಷಿಕ ಚುನಾವಣೆಯಲ್ಲಿ ಮೇಲನೆಯ ಒಟ್ಟು 7 ಸದಸ್ಯರ ಅವಧಿ ಜೂ.30ಕ್ಕೆ ಕೊನೆಗೊಳ್ಳಲಿದೆ. ಗೋವಿಂದರಾಜ್(ಕಾಂಗ್ರೆಸ್), ನಾಸೀರ್ ಅಹಮದ್ (ಕಾಂಗ್ರೆಸ್), ಬಿ.ಕೆ.ಹರಿಪ್ರಸಾದ್(ಕಾಂಗ್ರೆಸ್), ಎಂ.ಟಿ.ಬಿ.ನಾಗರಾಜ್(ಬಿಜೆಪಿ), ಪ್ರತಾಪ್ ಸಿಂಹ ನಾಯಕ್ (ಬಿಜೆಪಿ), ತಿಪ್ಪಣ್ಣಪ್ಪ (ಬಿಜೆಪಿ), ಸುನಿಲ್ ವಲ್ಯಾಪುರೆ(ಬಿಜೆಪಿ) ಅವರು ನಿವೃತ್ತಿಯಾಗಲಿದ್ದಾರೆ. ಬಿಜೆಪಿಯಿಂದ ನಾಲ್ವರು ಹಾಗೂ ಕಾಂಗ್ರೆಸ್‌ನಿಂದ ಮೂವರು ಸದಸ್ಯರ ಅಧಿಕಾರಾವಧಿ ಮುಕ್ತಾಯವಾಗಲಿದ್ದು, ಈ ಬಾರಿ ಚುನಾವಣೆಯಲ್ಲಿ ಕಾಂಗ್ರೆಸ್‌ಗೆ 4 ಸ್ಥಾನ ಹಾಗೂ ಬಿಜೆಪಿ-ಜೆಡಿಎಸ್ ಮೈತ್ರಿಕೂಟಕ್ಕೆ 3 ಸ್ಥಾನ ಲಭಿಸುವ ಸಾಧ್ಯತೆ ಇದೆ.

---

# ಸರ್ಕಾರಿ ಶಾಲೆಗಳಲ್ಲಿ ಡಿಜಿಟಲ್ ಹಾಜರಾತಿ ವ್ಯವಸ್ಥೆ ಹಾಗೂ ದ್ವಿಭಾಷಾ ಬೋಧನ ಪದ್ಧತಿ ಜಾರಿ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಶಿಕ್ಷಣ ವ್ಯವಸ್ಥೆಯಲ್ಲಿ ಪಾರದರ್ಶಕತೆ, ನಿಖರತೆ ಮತ್ತು ಆಡಳಿತಾತಕ ದಕ್ಷತೆಯನ್ನು ಹೆಚ್ಚಿಸುವ ಉದ್ದೇಶದಿಂದ ಶಿಕ್ಷಣ ಇಲಾಖೆಯು, ಸರ್ಕಾರಿ ಶಾಲೆಗಳಲ್ಲಿ ಡಿಜಿಟಲ್ ಹಾಜರಾತಿ ವ್ಯವಸ್ಥೆಯನ್ನು ಕಡ್ಡಾಯಗೊಳಿಸಿದೆ. ಅಲ್ಲದೆ ಈ ಬಾರಿ ಪ್ರಸಕ್ತ ಶೈಕ್ಷಣಿಕ ವರ್ಷದಿಂದಲೇ ದ್ವಿಭಾಷಾ ಬೋಧನಾ ಪದ್ಧತಿಯನ್ನು ಅನುಷ್ಠಾನಕ್ಕೆ ತರಲು ಸೂಚನೆ ನೀಡಿದೆ.

ಈ ಸಂಬಂಧ ಶಿಕ್ಷಣ ಇಲಾಖೆ ಮಾರ್ಗಸೂಚಿ ಪ್ರಕಟ ಮಾಡಿದ್ದು, ವಿದ್ಯಾರ್ಥಿಗಳು ಶಿಕ್ಷಕರಿಗೂ ಡಿಜಿಟಲ್ ಹಾಜರಿ ಕಡ್ಡಾಯಗೊಳಿಸಿದೆ. ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಿಗೆ ಮಾರ್ಗಸೂಚಿ ಪ್ರಕಟವಾಗಿದೆ. ಇನ್ನು ಮುಂದೆ ದೆ ಶಿಕ್ಷಕರು ಮತ್ತು ವಿದ್ಯಾರ್ಥಿಗಳ ಹಾಜರಾತಿಯನ್ನು ಹಳೆಯ ಕಾಗದದ ದಾಖಲೆಗಳ ಬದಲಾಗಿ, ಡಿಜಿಟಲ್ ಪೋರ್ಟಲ್ ಅಥವಾ ಆ್ಯಪ್‌ಗಳ ಮೂಲಕ ನೈಜ ಸಮಯವನ್ನು ದಾಖಲಿಸುವುದು ಕಡ್ಡಾಯವಾಗಿದೆ.

☛ ಉದಯವಾಹಿನಿ ಚಿತ್ರ




ಶಿಕ್ಷಣ ಇಲಾಖೆಯು ಈ ಕಠಿಣ ಕ್ರಮವನ್ನು ಕೈಗೊಳ್ಳಲು ಪ್ರಮುಖವಾಗಿ ಈ ಕೆಳಗಿನ ಕಾರಣಗಳನ್ನು ಗುರುತಿಸಿದೆ. ಪ್ರತಿ ಶಾಲೆಯಲ್ಲಿ ಎಷ್ಟು ಮಂದಿ ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಹಾಜರಿದ್ದಾರೆ ಎಂಬ ನಿಖರ ಮಾಹಿತಿ ಮೇಲಧಿಕಾರಿಗಳಿಗೆ ತಕ್ಷಣ ಲಭ್ಯವಾಗುತ್ತದೆ.

**ಪಾರದರ್ಶಕತೆ ಮತ್ತು ಜವಾಬ್ದಾರಿ:** ಶಿಕ್ಷಕರ ಶಾಲೆಗೆ ಬರುವ ಸಮಯ, ವಿಳಂಬ ಮತ್ತು ಅನಧಿಕೃತ ರಜೆಗಳನ್ನು ತಡೆಯಲು ಇದು ಸಹಕಾರಿಯಾಗಿದೆ. ವಿದ್ಯಾರ್ಥಿಗಳ ನಿಖರ ಹಾಜರಾತಿಯ ಆಧಾರದ ಮೇಲೆ, ಅಂದಿನ ಬಿಸಿಯೂಟದ ಪ್ರಮಾಣವನ್ನು ನಿಗದಿಪಡಿಸಲು ಮತ್ತು ಸಂಪನೂಲಗಳ ದುರುಪಯೋಗವನ್ನು ತಡೆಯಲು ಸಹಾಯವಾಗುತ್ತದೆ. ಕೈಯಾರೆ ದಾಖಲೆಗಳನ್ನು ನಿರ್ವಹಿಸುವ ಸಮಯ ಉಳಿತಾಯವಾಗುತ್ತದೆ ಮತ್ತು ಮಾಹಿತಿಯ ಸಂಗ್ರಹಣೆಯಲ್ಲಿ ತಪ್ಪುಗಳು ಕಡಿಮೆಯಾಗುತ್ತವೆ.ಶಿಕ್ಷಕರು ತಮ ವೈಯಕ್ತಿಕ ಲಾಗಿನ್ ಐಡಿ ಬಳಸಿಕೊಂಡು ನಿಗದಿತ ಆ್ಯಪ್‌ಗಳ ಮೂಲಕ ಬೆಳಗ್ಗೆ ಮತ್ತು ಸಂಜೆ ತಮ ಹಾಜರಾತಿಯನ್ನು ದಾಖಲಿಸಬೇಕು. ವಿದ್ಯಾರ್ಥಿಗಳ ಹಾಜರಾತಿಯನ್ನು ಸಹ ಅದೇ ಪೋರ್ಟಲ್‌ನಲ್ಲಿ ಅಪ್‌ಡೇಟ್ ಮಾಡಬೇಕು. ಶಿಕ್ಷಕರು ಸಮಯಕ್ಕೆ ಸರಿಯಾಗಿ ಶಾಲೆಗೆ ಬರುವುದನ್ನು ಖಚಿತಪಡಿಸಿಕೊಳ್ಳಲು ಜಿಪಿಎಸ್ ಆಧಾರಿತ ಹಾಜರಾತಿ ವ್ಯವಸ್ಥೆಯನ್ನು ಕೆಲವು ಕಡೆ ಜಾರಿಗೊಳಿಸಲಾಗಿದೆ. ನಿಗದಿತ ಸಮಯದ ನಂತರ ಬರುವ ಶಿಕ್ಷಕರನ್ನು ತಡವಾಗಿ ಬಂದವರು ಅಥವಾ ಗೈರು ಎಂದು ಪರಿಗಣಿಸಲಾಗುತ್ತದೆ.

ತಾಂತ್ರಿಕ ದೋಷಗಳು ಅಥವಾ ನೆಟ್‌ವರ್ಕ್ ಸಮಸ್ಯೆಗಳಿದ್ದಾಗ ಮಾತ್ರ ಆಫ್‌ಲೈನ್ ದಾಖಲೆಗಳಿಗೆ ಅವಕಾಶ ನೀಡಲಾಗುತ್ತದೆ. ಉಳಿದ ಸಮಯಗಳಲ್ಲಿ ಡಿಜಿಟಲ್ ಹಾಜರಾತಿಯೇ ಅಂತಿಮ.

**ಮೇಲ್ವಿಚಾರಣೆ:** ಕ್ಷೇತ್ರ ಶಿಕ್ಷಣಾಧಿಕಾರಿಗಳು ಮತ್ತು ಇತರ ಮೇಲ್ವಿಚಾರಕರು ತಮ ವ್ಯಾಪ್ತಿಯ ಶಾಲೆಗಳ ಡಿಜಿಟಲ್ ಹಾಜರಾತಿಯನ್ನು ನಿರಂತರವಾಗಿ ಪರಿಶೀಲಿಸಬೇಕೆಂದು ಸೂಚಿಸಲಾಗಿದೆ. ದ್ವಿಭಾಷಾ ನೀತಿ ಜಾರಿ ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಮಾತೃಭಾಷೆಯ (ಕನ್ನಡ) ಜೊತೆಗೆ ಇಂಗ್ಲಿಷ್ ಭಾಷಾ ಕೌಶಲ್ಯವನ್ನು ಕಲಿಸಿ, ಜಾಗತಿಕ ಸ್ಪರ್ಧೆಗೆ ಸಿದ್ಧಗೊಳಿಸುವುದು. 2026-27ನೇ ಸಾಲಿನಿಂದ ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ದ್ವಿಭಾಷಾ ಬೋಧನಾ ಪದ್ಧತಿಯನ್ನು ಪೂರ್ಣ ಪ್ರಮಾಣದಲ್ಲಿ ವಿಸ್ತರಿಸಲಾಗುತ್ತಿದೆ.

### ದ್ವಿಭಾಷಾ ಶಿಕ್ಷಣಕ್ಕೆ ಪೂರ್ವಾನುಮತಿ

**6ರಿಂದ 14 ವರ್ಷದ ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು. ಉರ್ದು-ಇಂಗ್ಲೀಷ್ ದ್ವಿಭಾಷಾ ಮಾಧ್ಯಮವೂ ಸಹ ಈ ವರ್ಷವೇ ಆರಂಭವಾಗಬೇಕು. ದ್ವಿಭಾಷಾ ಶಿಕ್ಷಣಕ್ಕೆ ಇಲಾಖೆಯಿಂದ ಪೂರ್ವಾನುಮತಿ ಪಡೆದಿರುವ ಶಾಲೆಗಳಲ್ಲಿ ದ್ವಿಭಾಷಾ ಬೋಧನಾ ಪದ್ಧತಿಯನ್ನು ಅನುಷ್ಠಾನಕ್ಕೆ ತರಲು ಸೂಚನೆ ನೀಡಲಾಗಿದೆ.**

### ದ್ವಿಭಾಷಾ ನೀತಿ ಜಾರಿ

**ಸರ್ಕಾರಿ ಶಾಲೆಯ ವಿದ್ಯಾರ್ಥಿಗಳಿಗೆ ಮಾತೃಭಾಷೆಯ (ಕನ್ನಡ) ಜೊತೆಗೆ ಇಂಗ್ಲಿಷ್ ಭಾಷಾ ಕೌಶಲ್ಯವನ್ನು ಕಲಿಸಿ, ಜಾಗತಿಕ ಸ್ಪರ್ಧೆಗೆ ಸಿದ್ಧಗೊಳಿಸುವುದು. ದ್ವಿಭಾಷಾ ಬೋಧನಾ ಪದ್ಧತಿಯನ್ನು ಪೂರ್ಣ ಪ್ರಮಾಣದಲ್ಲಿ ವಿಸ್ತರಿಸಲಾಗುತ್ತಿದೆ. ಡಿಎಸ್‌ಇಆರ್‌ಟಿ ವತಿಯಿಂದ 1.55 ಲಕ್ಷಕ್ಕೂ ಹೆಚ್ಚು ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಇಂಗ್ಲಿಷ್ ಮೀಡಿಯಂ ಟೀಚರ್ಸ್ ಟ್ರೈನಿಂಗ್ ನೀಡಲಾಗಿದೆ.**

ಉದಯ ವಾಹಿನಿ
ಪ್ರಾದೇಶಿಕ
ಬುಧವಾರ
27 ಮೇ 2026


# ಎಫ್ ಐ ಡಿ ನಿಯಮಕ್ಕೆ ರೈತ ಸಂಘ ವಿರೋಧ : ರಸ್ತೆ ತಡೆ ನಡೆಸಿ ತೀವ್ರ ಆಕ್ರೋಶ

• **ಉದಯವಾಹಿನಿ, ಗುಂಡ್ಲುಪೇಟೆ**


ಕೃಷಿ ಇಲಾಖೆಯಲ್ಲಿ ಜಾರಿಗೊಳಿಸಿರುವ ರೈತರ ಪೂರ್ಣ ವಿವರ ನೋಂದಣಿ ಹಾಗೂ ಫಲಾನುಭವಿ ರೈತನ ಮಾಹಿತಿ ಕಡ್ಡಾಯಗೊಳಿಸಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದ ಸಾಮೂಹಿಕ ನಾಯಕತ್ವ ರೈತ ಸಂಘ ಕಾರ್ಯಕರ್ತರು ಮಂಗಳವಾರ ಪಟ್ಟಣದಲ್ಲಿ ರಸ್ತೆ ತಡೆ ನಡೆಸಿ ಆಕ್ರೋಶ ಹೊರಹಾಕಿದರು.

ಪಟ್ಟಣದ ಪ್ರವಾಸಿ ಮಂದಿರದಿಂದ ಹೊರಟ ಪ್ರತಿಭಟನಕಾರರು ಸಾರಿಗೆ ಬಸ್ ನಿಲ್ದಾಣದಿಂದ ಸಾಗಿ ಬಸವೇಶ್ವರ ವೃತ್ತದ ಬಳಿ ಮಾನವ ಸರಪಳಿ ನಿರ್ಮಿಸಿ ರಸ್ತೆ ತಡೆ ನಡೆಸುವ ಮೂಲಕ ಸರ್ಕಾರ ಹಾಗೂ ತಾಲ್ಲೂಕು ಆಡಳಿತದ ವಿರುದ್ಧ ಧಿಕ್ಕಾರದ ಘೋಷಣೆಗಳನ್ನ ಕೂಗಿದರು.

ಮಳೆಯಿಂದ ಬೆಳೆಗಳನ್ನ ಕಳೆದುಕೊಂಡ ರೈತರಿಗೆ ನಷ್ಟ ಭರಿಸಲು ಅಧಿಕಾರಿಗಳು ಮೀನಾಮೇಷ ಎಣಿಸುತ್ತಿದ್ದಾರೆ, ಅತಿವೃಷ್ಟಿ ಅನಾವೃಷ್ಟಿಯಂತಹ ಸಂದರ್ಭದಲ್ಲಿ ಅನ್ನದಾತನ ಬೆನ್ನಲುಬಾಗಿ ನಿಲ್ಲಬೇಕಿರುವ ಅಧಿಕಾರಿಗಳು ರೈತ ವಿರೋದಿತನ ಪ್ರದರ್ಶನ ಮಾಡುತ್ತಿದ್ದಾರೆ ಎಂದು ಮುಖಂಡ ಮಹೇಶ್ ಕಿಡಿಕಾರಿದರು.

ಈಗಾಗಲೇ ಸಂಕಷ್ಟದಲ್ಲಿರುವ ರೈತರ ಪರಿಪೂರ್ಣ ಮಾಹಿತಿ ಸಂಗ್ರಹಣೆಗೆ ಮುಂದಾಗಿರುವ ಕೃಷಿ ಇಲಾಖೆ ನಡೆ ಅವೈಜ್ಞಾನಿಕವಾಗಿದೆ ತಂತ್ರಾಂಶದ ಮೂಲಕ ಚಾಲ್ತಿಯಲ್ಲಿಡಲು ಹೊರಟಿರುವ ನಿಯಮದಿಂದ ಡಿಜಿಟಲ್ ಮಾಹಿತಿಗೆ ಹೊಂದಿಕೊಳ್ಳಲು ರೈತರಿಗೆ ಕಷ್ಟವಾಗುತ್ತದೆ , ಸರ್ಕಾರದಿಂದ ಬರುವ ಸವಲತ್ತುಗಳು ಹಾಗೂ ಯೋಜನೆಗಳನ್ನ ಪಡೆಯಲು ಸಹ ಎಫ್ ಐಡಿ ಜಾರಿಗೊಳಿಸಿರುವುದು ಕಳವಳಕಾರಿಯಾಗಿದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಈ ವೇಳೆ ಸಾಮೂಹಿಕ ನಾಯಕತ್ವ ರೈತ ಸಂಘದ ಪಾಪಣ್ಣ, ರಾಜು ಭೀಮನಭೀಡು, ಶಶಿ ಬೇರಂಬಾಡಿ, ಪಾಲಾಕ್ಷ, ಮಹದೇವಪ್ರಸಾದ್, ಸ್ವಾಮಿ ಕೋಡಹಳ್ಳಿ, ವೀರಭದ್ರಪ್ಪ, ಮಲ್ಲರಾದ್ಯ ಸೇರಿದಂತೆ ಹಲವರು ಹಾಜರಿದ್ದರು.


ಉದಯವಾಹಿನಿ ಚಿತ್ರ

## ಪ್ರಮುಖ ಒತ್ತಾಯಗಳು

ಬಂಡೀಪುರ ಹುಲಿ ಸಂರಕ್ಷಿತಾ ಪ್ರದೇಶದಲ್ಲಿ ಕಳೆದ ಐದಾರು ವರ್ಷಗಳಿಂದ ಠಿಕಾಣಿ ಹೂಡಿರುವ ಅಧಿಕಾರಿಗಳು ಹಾಗೂ ನೌಕರರನ್ನ ಬೇರೆಡೆ ವರ್ಗಾವಣೆ ಮಾಡಬೇಕು ಹಾಗೂ ರಸಗೊಬ್ಬರ ಪೂರೈಕೆ ಜತೆಗೆ ಎಫ್ ಐ ಡಿ ಗೊಂದಲ ನಿವಾರಣೆಗೆ ಸರ್ಕಾರ ಮುಂದಾಗಬೇಕು, ಮಡಹಳ್ಳಿ ಸಮೀಪದ ಗುಮ್ಮಕಲ್ಲು ಗುಡ್ಡದಲ್ಲಿ ನಡೆಯುತ್ತಿರುವ ಗಣಿಗಾರಿಕೆಯಿಂದ ಸರಣಿ ಸಾವು ನೋವುಗಳು ಸಂಭವಿಸುತ್ತಿದ್ದು ಗಣಿಗಾರಿಕೆ ಸ್ಥಗಿತಗೊಳಿಸಿ ಸುರಕ್ಷಿತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ತಹಶೀಲ್ದಾರ್ ಎಂ.ಎಸ್.ತನ್ಮಯ್ ಅವರಿಗೆ ಮನವಿ ಸಲ್ಲಿಸಿದರು.



**ಅಧಿಕಾರಿಗಳು ರೈತ ವಿರೋದಿತನ ಪ್ರದರ್ಶನ**

# ಕೆರೆಗಳಿಗೆ ನೀರು ತುಂಬಿಸುವಂತೆ ಒತ್ತಾಯ

• **ಉದಯವಾಹಿನಿ ,ಗುಂಡ್ಲುಪೇಟೆ**

ಗಾಂಧಿ ಗ್ರಾಮ ಏತ ನೀರಾವರಿ ಯೋಜನೆಯಡಿ ತಾಲ್ಲೂಕಿನ ಗರಗನಹಳ್ಳಿ , ಮಳವಳ್ಳಿ ಕೆರೆಗಳಿಗೆ ನೀರು ತುಂಬಿಸುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ ಎಂದು ಆರೋಪಿಸಿದ ಕರ್ನಾಟಕ ರಾಜ್ಯ ರೈತ ಸಂಘದ ಕಾರ್ಯಕರ್ತರು ಗರಗನಹಳ್ಳಿ ಗೇಟ್ ಬಳಿ ಮಂಗಳವಾರ ಪ್ರತಿಭಟನೆ ನಡೆಸಿದರು.

ರೈತ ಸಂಘ ತಾಲ್ಲೂಕು ಅದ್ಯಕ್ಷ ವೀರನಪುರ ನಾಗಪ್ಪ ಮಾತನಾಡಿ ಗಾಂಧಿಗ್ರಾಮ ಏತ ನೀರಾವರಿ ಯೋಜನೆಯಡಿ ಸಕಾಲಕ್ಕೆ ಕೆರೆಗಳಿಗೆ ನೀರು ತುಂಬಿಸುವ ಮಹತ್ವದ ಜವಾಬ್ದಾರಿ ಹೊತ್ತಿದ್ದ ಇಲಾಖೆ ಅಧಿಕಾರಿಗಳ ಹೊಣೆಗೇಡಿತನಕ್ಕೆ ರೈತಾಪಿ ವರ್ಗ ಸಂಕಷ್ಟಕ್ಕೆ ಸಿಲುಕಿದೆ ಸೂಕ್ತ ಸಂಧರ್ಭದಲ್ಲಿ ಕೆರೆಗಳಿಗೆ ಜೀವಕಳೆ ತರುವಲ್ಲಿ ವಿಫಲವಾಗಿರುವ ಅಧಿಕಾರಿಗಳ ನಡೆ ಖಂಡನೀಯ ಹಾಗೂ ರೈತ ವಿರೋಧಿತನವಾಗಿದೆ, ಬರಗಾಲದ ವೈಪ್ಯರೀತ್ಯಕ್ಕೆ ಸಿಲುಕಿದಲ್ಲದೆ ಅಂತರ್ಜಲ ಮಟ್ಟ ಕುಸಿತಗೊಂಡಿದ್ದು ರೈತರು ಬೆಳೆದ ಬೆಳೆಗಳು ಸಹ ಕೈ ಸೇರದೆ ನಿರ್ಲಿಪ್ತವಾಗುತ್ತಿವೆ ಆದುದರಿಂದ ಕೂಡಲೇ ಸಂಬಂಧಪಟ್ಟ ಇಲಾಖೆ ಮೇಲಾಧಿಕಾರಿಗಳು ಕೆರೆಗಳಿಗೆ ನೀರು ತುಂಬಿಸಲು ವಿಶೇಷ ಆಸಕ್ತಿ ತೋರಬೇಕು ಇಲ್ಲವಾದಲ್ಲಿವಿಫಲವಾಗಿರುವ ಅಧಿಕಾರಿಗಳ ನಡೆ ಚಳುವಳಿಗೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

## ರೈತ ಸಂಘ ಪ್ರತಿಭಟನೆ


ಉದಯವಾಹಿನಿ ಚಿತ್ರ

**ಅಧಿಕಾರಿಗಳ ಹೊಣೆಗೇಡಿತನಕ್ಕೆ ರೈತಾಪಿ ವರ್ಗ ಸಂಕಷ್ಟ**

## ನೀರಾವರಿ ಇಲಾಖೆ ಅಧಿಕಾರಿಗಳ ಭೇಟಿ

ಪ್ರತಿಭಟನೆ ಸ್ಥಳಕ್ಕೆ ಭೇಟಿ ನೀಡಿದ ನೀರಾವರಿ ಇಲಾಖೆಯ ಎಇಇ ಮಹೇಶ್ ಬೇಗೂರು ವ್ಯಾಪ್ತಿಯ ಬೆಳಚಲವಾಡಿ ಕೆರೆಗೆ ನೀರು ಹರಿದುಬರುತ್ತಿದ್ದು ಭರ್ತಿಯಾದ ಬಳಿಕ ಹಂತಹಂತವಾಗಿ ಉಳಿದ ಕೆರೆಗಳಿಗೂ ನೀರು ತುಂಬಿಸಲು ಕ್ರಮ ಕೈಗೊಳ್ಳುತ್ತೇವೆ ಹಾಗಾಗಿ ಇಪ್ಪತ್ತು ದಿನಗಳೊಳಗಾಗಿ ಕ್ರಮ ಕೈಗೊಳ್ಳುವ ಭರವಸೆ ಬಳಿಕ ಪ್ರತಿಭಟನೆಗೆ ವಿರಾಮ ಹೇಳಲಾಯಿತು. ಈ ಸಂಧರ್ಭದಲ್ಲಿ ಉಮೇಶ್, ಪುಟ್ಟೇಗೌಡ, ಲೋಕೇಶ್, ಶಿವಕುಮಾರ್, ಸುಂದ್ರಪ್ಪ, ಜಗದೀಶ್, ಕೆಂಪಮ್ಮ, ಸಿದ್ಧಮ್ಮ ಗಣೇಶ್ , ಸ್ವಾಮಿ, ಮಹೇಶ್ ಸೇರಿದಂತೆ ಅನೇಕರು ಹಾಜರಿದ್ದರು.

## ರಸ್ತೆ ಕಾಮಗಾರಿ ಪೂರ್ಣಗೊಳಿಸಿ

ಅಗಲೀಕರಣ ನೆಪದಲ್ಲಿ ಮೈಸೂರು ಊಟಿ ರಸ್ತೆಯ ಎರಡೂ ಬದಿಗಳನ್ನ ಅಗೆದು ಅದ್ವಾನಗೊಳಿಸಿರುವ ಗುತ್ತಿಗೆದಾರ ಕಂಪನಿ ಸಾರ್ವಜನಿಕರ ಜೀವದ ಜೊತೆ ಚೆಲ್ಲಾಟವಾಡುತ್ತಿದೆ, ರಸ್ತೆಯ ಎರಡೂ ಬದಿಯ ಇಕ್ಕೆಲೆಗಳು ಸಾವಿನ ಮಾರ್ಗವಾಗಿ ಬದಲಾಗಿವೆ. ಬರಗಾಲದ ವೈಪ್ಯರೀತ್ಯಕ್ಕೆ ಸಿಲುಕಿದಲ್ಲದೆ ಅಂತರ್ಜಲ ಮಟ್ಟ ಕುಸಿತ ತಮಿಳುನಾಡು ಮೂಲದ ಗುತ್ತಿಗೆದಾರ ಸಂಸ್ಥೆಯ ಅವೈಜ್ಞಾನಿಕ ಕಾಮಗಾರಿಯಿಂದ ದ್ವಿಚಕ್ರ ವಾಹನ ಸವಾರರಿಗೆ ತೊಂದರೆಯಾಗುತ್ತಿದೆ ರಾಘವಾಪುರ ಗೇಟ್‌ನಿಂದ ಆರಂಭವಾದ ಅದ್ವಾನದ ಕಾಮಗಾರಿ ಗುಂಡ್ಲುಪೇಟೆ ಪಟ್ಟಣದ ಸ್ವಾಗತ ಕಮಾನಿನವರೆಗೂ ಜೀವ ಕೈಯಲ್ಲಿಡಿದು ಸಾಗುವಂತಹ ವಾತಾವರಣ ಸೃಷ್ಟಿಸಿದ್ದರೂ ಸಹ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ತಮ್ಮದಲ್ಲದ ಜವಾಬ್ದಾರಿ ಎಂಬಂತೆ ವರ್ತಿಸುತ್ತಿದ್ದಾರೆ, ಕೂಡಲೇ ಹೆದ್ದಾರಿ ಕಾಮಗಾರಿಯನ್ನ ಪೂರ್ಣಗೊಳಿಸಿ ಸುಗಮ ಸಂಚಾರಕ್ಕೆ ಅವಕಾಶ ಮಾಡಿಕೊಡಬೇಕು ಇಲ್ಲವಾದಲ್ಲಿ ಪ್ರಾಧಿಕಾರದ ವಿರುದ್ಧ ಉಗ್ರ ಹೋರಾಟ ನಡೆಸಬೇಕಾಗುತ್ತದೆ ಎಂದು ಆಕ್ರೋಶ ಹೊರಹಾಕಿದರು.

**ಕಾಮಗಾರಿಯನ್ನ ಪೂರ್ಣಗೊಳಿಸಿ**



# ನಾನೂ ಆಕಾಂಕ್ಷಿ ರಾಜ್ಯಸಭೆ ಚುನಾವಣೆಗೆ ಸ್ಪರ್ಧಿಸಲು ಡಿ.ವಿ ಸದಾನಂದ ಗೌಡ ಇಂಗಿತ!

• **ಉದಯವಾಹಿನಿ, ಮೈಸೂರು**

ಮುಂಬರುವ ರಾಜ್ಯಸಭೆ ಚುನಾವಣೆಗೆ ತಾನೂ ಆಕಾಂಕ್ಷಿಯಾಗಿದ್ದು, ಈ ಕುರಿತು ಪಕ್ಷದ ಹೈಕಮಾಂಡ್‌ಗೆ ಈಗಾಗಲೇ ತಿಳಿಸಿರುವುದಾಗಿ ಮಾಜಿ ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಡಿವಿ ಸದಾನಂದ ಗೌಡ ಅವರು ಹೇಳಿದ್ದಾರೆ.

ಮೈಸೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಚುನಾವಣಾ ರಾಜಕಾರಣದಿಂದ ನಿವೃತ್ತಿಯಾಗಿದ್ದರೂ ಪಕ್ಷ ವಹಿಸುವ ಯಾವುದೇ ಜವಾಬ್ದಾರಿಯನ್ನು ನಿರ್ವಹಿಸಲು ಸಿದ್ಧನಿದ್ದೇನೆ ಎಂದು ಹೇಳಿದರು. ರಾಜ್ಯಸಭೆಗೆ ನನ್ನನ್ನೂ ಪರಿಗಣಿಸಬೇಕೆಂದು ಪಕ್ಷದ ಹೈಕಮಾಂಡ್‌ಗೆ ತಿಳಿಸಿದ್ದೇನೆ.

ಆದರೆ, ಅಂತಿಮವಾಗಿ ಹೈಕಮಾಂಡ್ ಯಾವ ತೀರ್ಮಾನ ಕೈಗೊಳ್ಳುತ್ತದೆಯೋ ಅದನ್ನು ಗೌರವಿಸಿ ಪಾಲಿಸುತ್ತೇನೆ ಎಂದು ತಿಳಿಸಿದರು. ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಕುರಿತ ಊಹಾಪೋಹಗಳ ಬಗ್ಗೆ ಪ್ರತಿಕ್ರಿಯಿಸಿ, ಈ ವಿಚಾರ ಸಂಪೂರ್ಣವಾಗಿ ಪಕ್ಷದ ಹೈಕಮಾಂಡ್ ವ್ಯಾಪ್ತಿಗೆ ಸೇರಿದ್ದು, ಅದರ ಬಗ್ಗೆ ವೈಯಕ್ತಿಕ ಅಭಿಪ್ರಾಯ ವ್ಯಕ್ತಪಡಿಸುವುದಿಲ್ಲ ಎಂದು ತಿಳಿಸಿದರು. ಪ್ರಸ್ತುತ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಅವರು ಪಕ್ಷ ಸಂಘಟನೆಯನ್ನು ಬಲಪಡಿಸಲು ಸಕ್ರಿಯವಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರ ಅವಧಿಗೂ ಇನ್ನೂ ಒಂದು ವರ್ಷ ಬಾಕಿಯಿದೆ. ಪಕ್ಷದಲ್ಲಿ ಬದಲಾವಣೆ ಅಗತ್ಯವಿದ್ದರೆ ಹೈಕಮಾಂಡ್ ಆಂತರಿಕವಾಗಿ ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳುತ್ತಾರೆ ಎಂದರು.


ಉದಯವಾಹಿನಿ ಚಿತ್ರ

## ಮಿತಿಮೀರಿದ ಅಕ್ರಮ ಕಸಾಯಿ ಖಾನೆಗಳ ದಂಧೆ

• **ಉದಯವಾಹಿನಿ, ಚಿಂತಾಮಣಿ**

ರಾಜ್ಯದಲ್ಲಿ ಕಟ್ಟುನಿಟ್ಟಿನ ಗೋಹತ್ಯೆ ನಿಷೇಧ ಕಾಯ್ದೆ ಜಾರಿಯಲ್ಲಿದ್ದರೂ ಸಹ,ಇಲ್ಲಿನ ಅಧಿಕಾರಿಗಳ ಮೌನವನ್ನೇ ಬಂಡವಾಳ ಮಾಡಿಕೊಂಡಿರುವ ಜಾಲವು ರಾಜಾ ರೋಷವಾಗಿ ಹಸು ಹಾಗೂ ಒಂಟೆಗಳ ಮಾರಣಹೋಮಕ್ಕೆ ಸಿದ್ಧತೆ ನಡೆಸುತ್ತಿರುವುದು ಸಾರ್ವಜನಿಕರ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಈ ಅಕ್ರಮ ಜಾಲವನ್ನು ಬೇರುಸಹಿತ ಕಿತ್ತೆಸೆಯುವಂತೆ ಆಗ್ರಹಿಸಿ ಸುನಿಲ್.ಪಿ.ವಿ ನೇತೃತ್ವದ ನಿಯೋಗವು ತಹಶೀಲ್ದಾರ್‌ನಗರಸಭೆ ಪೌರಾಯುಕ್ತರು ಹಾಗೂ ಪೊಲೀಸ್ ಇಲಾಖೆಗೆ ಏಕಕಾಲದಲ್ಲಿ ಧಾವಿಸಿ, ಲಿಖಿತ ದೂರು ಸಲ್ಲಿಸಿದ್ದಾರೆ.

ಶಾಂತಿ ಮತ್ತು ಸೌಹಾರ್ದತೆಗೆ ಹೆಸರಾದ ಚಿಂತಾಮಣಿಯಲ್ಲಿ ಇತ್ತೀಚಿನ ದಿನಗಳಲ್ಲಿ ಕಾನೂನುಬಾಹಿರ ಚಟುವಟಿಕೆಗಳು ಮಿತಿಮೀರಿದ್ದು, ಅಕ್ರಮ ಜಾನುವಾರು ಸಾಗಾಟಗಾರರು ಹಾಗೂ ಕಸಾಯಿಖಾನೆಗಳ ದಂಧೆಕೋರರು ಕಾನೂನಿಗೆ ಬಹಿರಂಗ ಸವಾಲು ಹಾಕುತ್ತಿದ್ದಾರೆ.

# ಸಕ್ಕರೆ ಕಾಯಿಲೆ ನಿಯಂತ್ರಿಸದಿದ್ದರೆ ಅಂಧತ್ವ ಹೆಚ್ಚುತ್ತದೆ: ಡಾ.ವಿವೇಚನ

• **ಉದಯವಾಹಿನಿ, ತಿಪಟೂರು**

ನಾನಾ ಕಾರಣಗಳಿಂದ ಬರುವ ಕಣ್ಣಿನ ಕಾಯಿಲೆಗಳಿಂದ ಜನರು ಹೊರ ಬರಲು ಸರ್ಕಾರ ಅಂಧತ್ವ ನಿವಾರಣಾ ಕಾರ್ಯಕ್ರಮ ಹಾಕಿಕೊಂಡಿದ್ದು ಅದರ ಉಪಯೋಗ ಎಲ್ಲರೂ ಪಡೆದುಕೊಳ್ಳಬೇಕು ಎಂದು ವೈದ್ಯ ಡಾ. ಜಿ ಬಿ ವಿವೇಚನ ಹೇಳಿದರು.

ಅವರು ಹೊನ್ನವಳ್ಳಿಯ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಲಯನ್ಸ್ ಕ್ಲಬ್ ತಿಪಟೂರು, ಶ್ರದ್ಧಾ ನೇತ್ರಧಾಮ ಬೆಂಗಳೂರು, ಕುಟುಂಬ ಮತ್ತು ಕಲ್ಯಾಣ ಇಲಾಖೆ ಹಾಗೂ ಅಂಧತ್ವ ನಿಯಂತ್ರಣ ವಿಭಾಗ, ತುಮಕೂರು ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಉಚಿತ ಕಣ್ಣಿನ ತಪಾಸಣೆ, ಶಸ್ತ್ರಚಿಕಿತ್ಸೆ, ಲೆನ್ಸ್ ಅಳವಡಿಕೆ ಮತ್ತು ಕನ್ನಡ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು. ಬದಲಾದ ವಾತಾವರಣದಲ್ಲಿ ಜನರು ನಾನಾ ಕಾಯಿಲೆಗಳಿಗೆ ತುತ್ತಾಗುತ್ತಿದ್ದಾರೆ. ಗ್ರಾಮೀಣ ಪ್ರದೇಶದ ಜನರು ಸಕಾಲದಲ್ಲಿ ಆರೋಗ್ಯ ಪರೀಕ್ಷೆ ಮತ್ತು ಚಿಕಿತ್ಸೆ ದೊರೆಯದ ಕಾರಣ ಬಿಪಿ ಮತ್ತು ಶುಗರ್ ಹೆಚ್ಚಲು ಕಾರಣವಾಗಿದೆ. ಇದರಿಂದ ಕಣ್ಣಿನ ದೃಷ್ಟಿ ದೋಷ ಸಹಜವಾಗಿ ಹೆಚ್ಚಾಗುತ್ತದೆ. ಸಮಯಕ್ಕೆ ಸರಿಯಾಗಿ ಚಿಕಿತ್ಸೆ ದೊರೆಯದೇ ಇದ್ದರೆ, ಅಂಧತ್ವ ಬರುವ ಅಪಾಯವಿದ್ದು ಸಕಾಲದಲ್ಲಿ ಪರೀಕ್ಷೆ ಮಾಡಿಸಿಕೊಳ್ಳುವುದು ಹೆಚ್ಚು ಸೂಕ್ತ ಎಂದರು. ಲಯನ್ಸ್ ಕ್ಲಬ್ ಇತರೆ ಸಂಸ್ಥೆಯ ಸಹಯೋಗದಲ್ಲಿ ತಿಪಟೂರು ತಾಲ್ಲೂಕಿನ ನಾನಾ ಭಾಗಗಳಲ್ಲಿ ನಿಗಧಿತ ಸಮಯದಲ್ಲಿ ನಿರಂತರವಾಗಿ ಕಣ್ಣಿನ ಪರೀಕ್ಷೆ, ಚಿಕಿತ್ಸೆ, ಶಸ್ತ್ರಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಕಾರ್ಯಕ್ರಮ ಹಮ್ಮಿಕೊಂಡಿದ್ದು ಇದರ ಉಪಯೋಗ ಪಡೆದು ಕೊಳ್ಳಲು ಮನವಿ ಮಾಡಿದರು. ಲಯನ್ ಎಸ್ ಎಸ್ ಗಂಗಾಧರ್ ಮಾತನಾಡಿ ಪ್ರತಿ ತಿಂಗಳ ಮೊದಲ ಗುರುವಾರ ತಿಪಟೂರು ಶ್ರೀ ರಂಗ ಆಸ್ಪತ್ರೆ, ಎರಡನೇ ಗುರುವಾರ ಹಾಲ್ಕುರಿಕೆ ಮತ್ತು ಬಿಳಿಗೆರೆಯ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ನಾಲ್ಕನೇ ಸೋಮವಾರ ಹೊನ್ನವಳ್ಳಿಯ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಣ್ಣಿನ ತಪಾಸಣೆ ಶಿಬಿರಗಳು ವರ್ಷ ಪೂರ್ತಿ ನಿರಂತರವಾಗಿ ನಡೆಯಲಿದೆ.

ಹೆಚ್ಚು ಹೆಚ್ಚು ಪ್ರಚಾರ ಮಾಡುವ ಮೂಲಕ ಇದರ ಸದುಪಯೋಗ ಜನರಿಗೆ ಆಗಬೇಕೆಂದರು. ಶ್ರದ್ಧಾ ನೇತ್ರ ಧಾಮ ತಜ್ಞವೈದ್ಯರಾದ ಡಾ.ಸೃಷ್ಟಿ, ಹೊನ್ನವಳ್ಳಿಯ ಪ್ರಾ. ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ರಾಜು, ಲಯನ್ಸ್ ಕ್ಲಬ್ ಖಜಾಂಚಿ ಲಯನ್ ತಿಪಟೂರು ಕೃಷ್ಣ, ಜಂಟಿ ಕಾರ್ಯದರ್ಶಿ ಲಯನ್ ಎ.ಎಸ್.ಚಂದ್ರಶೇಖರ್ (ವಡೋ ಫೋನ್), ಜಂಟಿ ಖಜಾಂಚಿ ಲಯನ್ ನಾಗರತ್ನ, ನಿರ್ದೇಶಕರಾದ ಲಯನ್ ವೇದಾವತಿ, ಲಯನ್ ತೋಂಟಾರಾಧ್ಯ ( ಬೆಸ್ಕಾಂ) ಉಪಸ್ಥಿತರಿದ್ದರು.

# ತೈಲ ಬೆಲೆ ಏರಿಕೆ, ನೀಟ್ ಅಕ್ರಮದ ವಿರುದ್ಧ ಆಕ್ರೋಶ

## ಅಮೆರಿಕ-ಇರಾನ್ ಯುದ್ಧದ ನೆಪವೊಡ್ಡಿ ತೈಲ ದರವನ್ನು ಪದೇಪದೇ ಏರಿಕೆ ಮಾಡುತ್ತಿರುವುದು ಖಂಡನೀಯ ಎಂದು ಆಕ್ರೋಶ

• **ಉದಯವಾಹಿನಿ, ಚಾಮರಾಜನಗರ**

ಕೇಂದ್ರ ಸರ್ಕಾರ ಪೆಟ್ರೋಲ್- ಡೀಸೆಲ್, ಅಡುಗೆ ಅನಿಲ ದರವನ್ನು ಪದೇ ಪದೇ ಏರಿಸುವ ಮೂಲಕ ಬಡ ಹಾಗೂ ಮಧ್ಯಮ ವರ್ಗದವರ ಜೀವನದ ಜೊತೆ ಚೆಲ್ಲಾಟವಾಡುತ್ತಿದೆ ಎಂದು ಆರೋಪಿಸಿ ನಗರದಲ್ಲಿ ಸೋಮವಾರ ಚಾಮರಾಜನಗರ ಕ್ಷೇತ್ರದ ಯುವ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ನಗರದ ಚಾಮರಾಜೇಶ್ವರ ದೇವಸ್ಥಾನದ ಮುಂಭಾಗ ಜಮಾಯಿಸಿದ ಕಾರ್ಯಕರ್ತರು ಹಾಗೂ ಮುಖಂಡರು ಕೇಂದ್ರ ಸರ್ಕಾರ, ಪ್ರಧಾನಿ ನರೇಂದ್ರ ಮೋದಿ, ಗೃಹ ಸಚಿವ ಅಮಿತ್ ಶಾ ಹಾಗೂ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಯುವ ಕಾಂಗ್ರೆಸ್ ಅಧ್ಯಕ್ಷ ಅಕ್ಷಯ್ ಮಾತನಾಡಿ, ಅಗತ್ಯ ವಸ್ತುಗಳ ಬೆಲೆ ಏರಿಕೆ ತಡೆಯುವುದಾಗಿ ಅಧಿಕಾರಕ್ಕೆ ಬಂದ ಬಿಜೆಪಿ ಪೆಟ್ರೋಲ್, ಡೀಸೆಲ್ ಹಾಗೂ ಸಿಲಿಂಡರ್ ದರ ಏರಿಕೆ ಮಾಡುವ ಮೂಲಕ ಜನರನ್ನು ಸುಲಿಗೆ ಮಾಡುತ್ತಿದೆ. ಅಮೆರಿಕ-ಇರಾನ್ ಯುದ್ಧದ ನೆಪವೊಡ್ಡಿ ತೈಲ ದರವನ್ನು ಪದೇಪದೇ ಏರಿಕೆ ಮಾಡುತ್ತಿರುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮಾಂತರ ಬ್ಲಾಕ್ ಯುವ ಕಾಂಗ್ರೆಸ್ ಅಧ್ಯಕ್ಷ ಶ್ರೀನಿವಾಸಶೆಟ್ಟಿ ಮಾತನಾಡಿ. 'ನೀಟ್ ಪರೀಕ್ಷೆಯ ಪ್ರಶ್ನೆಪತ್ರಿಕೆ ಸೋರಿಕೆಯಾಗಿದ್ದು ಬಡ ವಿದ್ಯಾರ್ಥಿಗಳ ಜೀವನದಲ್ಲಿ ಕೇಂದ್ರ ಸರ್ಕಾರ ಚೆಲ್ಲಾಟವಾಡುತ್ತಿದೆ. ನೀಟ್ ಪರೀಕ್ಷೆ ಬರೆದು ವೈದ್ಯಕೀಯ ಶಿಕ್ಷಣ ಪಡೆಯಬೇಕು ಎಂಬ ಮಹದಾಸೆ ಹೊತ್ತಿದ್ದ ವಿದ್ಯಾರ್ಥಿಗಳು ಜೀವನ ಅತಂತ್ರವಾಗಿದೆ. ಮನನೊಂದ ಹಲವು ವಿದ್ಯಾರ್ಥಿಗಳು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ನೈತಿಕ ಹೊಣೆ ಹೊತ್ತು ಉನ್ನತ ಶಿಕ್ಷಣ ಸಚಿವರು ರಾಜೀನಾಮೆ ನೀಡಬೇಕು. ನೀಟ್ ಮರು ಪರೀಕ್ಷೆಯನ್ನು ವ್ಯವಸ್ಥಿತವಾಗಿ ನಡೆಸಿ, ಪ್ರತಿಭಾವಂತ ಬಡ ವಿದ್ಯಾರ್ಥಿಗಳಿಗೆ ಅವಕಾಶ ಮಾಡಿಕೊಡಬೇಕು ಎಂದು ಒತ್ತಾಯಿಸಿದರು. ಪ್ರತಿಭಟನೆಯಲ್ಲಿ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನಾಗರತ್ನ ಕೆಂಗಾಕಿ, ಯುವ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಕಿರಣ್ ಗಿಡ್ಡಯ್ಯ, ಜಿಲ್ಲಾ ಉಪಾಧ್ಯಕ್ಷ ಸೈಯದ್ ಇಸ್ಮಾಯಿಲ್, ಸಂಜಯ್, ಪದಾಧಿಕಾರಿಗಳಾದ ಅನಂತ್ ಕುಮಾರ್, ನಲ್ಲೂರು ಮನು, ನಲ್ಲೂರು ಮೋಳೆ ಚಂದ್ರು ಶಶಾಂಕ್, ಮುತ್ತುರಾಮು ಇದ್ದರು.


ಉದಯವಾಹಿನಿ ಚಿತ್ರ

# ನಾಯಿ ಮತ್ತು ಹಾವು ಕಡಿತದಿಂದಾಗುವ ಸಾವನ್ನು ಕಡಿಮೆ ಮಾಡಲು ಕ್ರಮ ವಹಿಸಿ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಬೀದಿನಾಯಿಗಳ ಹಾವಳಿಯನ್ನು ನಿಯಂತ್ರಿಸುವ ಭಾಗವಾಗಿ ನಗರದಲ್ಲಿ ಮಾಂಸ ಮಾರಾಟ ಮಾಡುವ ಅಂಗಡಿಗಳಲ್ಲಿ ಉತ್ಪತ್ತಿಯಾಗುವ ತ್ಯಾಜ್ಯವನ್ನು ಸೂಕ್ತ ರೀತಿಯಲ್ಲಿ ವಿಲೆ ಆಗುವಂತೆ ನಿಗಾ ವಹಿಸುವಂತೆ ಅಪರ ಜಿಲ್ಲಾಧಿಕಾರಿ ಡಾ.ಎನ್.ಭಾಸ್ಕರ್ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದರು.

ನಗರ ಹೊರವಲಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ನಡೆದ ಹಾವು ಮತ್ತು ನಾಯಿ ಕಡಿತ ನಿಯಂತ್ರಣ ಕುರಿತ ಅಂತರ್ ಇಲಾಖಾ ಮುಖ್ಯಸ್ಥರ ಸಮನ್ವಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಜಿಲ್ಲಾ ಕೇಂದ್ರವಾದ ಚಿಕ್ಕಬಳ್ಳಾಪುರ ಮತ್ತು ತಾಲ್ಲೂಕು ಕೇಂದ್ರಗಳ ಚಿಕನ್ ಮತ್ತು ಮಟನ್ ಮಾರಾಟ ಮಾಡುವ ಮಳಿಗೆಗಳ ಬಳಿ ಮಾಂಸ ಕತ್ತರಿಸುವ ವೇಳೆ ಉತ್ಪತ್ತಿಯಾಗುವ ನಿರುಪ ಯುಕ್ತ ಮಾಂಸ ಮತ್ತು ತ್ಯಾಜ್ಯವನ್ನು ಮುಂಭಾಗದ ರಸ್ತೆಗೆ ಬಿಸಾಕುವುದನ್ನು ತಿನ್ನಲು ಬರುವ ಬೀದಿನಾಯಿಗಳಿಂದಲೇ ಹೆಚ್ಚಿನ ನಾಯಿ ಕಡಿತಗಳಾಗುತ್ತಿರುವುದು ಆತಂಕಕಾರಿ ಯಾದ ವಿಚಾರವಾಗಿದೆ ಎಂದರು.

ಇಂತಹ ಪ್ರಸಂಗಗಳನ್ನು ಜಿಲ್ಲೆಯಲ್ಲಿ ಸಂಪೂರ್ಣವಾಗಿ ತಡೆಗಟ್ಟಲು ಸ್ಥಳೀಯಾಡಳಿತ ಸಂಸ್ಥೆಗಳ ಅಧಿಕಾರಿಗಳು ಮತ್ತು ಆರೋಗ್ಯ ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ ಅಂತಹ ಮಾಂಸ ಮಾರಾಟಗಾರರಿಗೆ ಎಚ್ಚರಿಕೆ ನೀಡುವ ಜೊತೆಗೆ ಕಾನೂನು ಕ್ರಮಕ್ಕೆ ಒಳಪಡಿಸಿ ಸಮರ್ಪಕ ವಿಲೆವಾರಿಗೆ ಅರಿವು ಮೂಡಿಸಬೇಕು ಎಂದು ತಾಕೀತು ಮಾಡಿದರು. ಪರವಾನಗಿ ಪಡೆಯದೆ ಮಾಂಸ ಮಾರಾಟ ಮಾಡುವವರ ಮೇಲೆ ನಿರ್ದಾಕ್ಷಿಣ್ಯವಾಗಿ ಕಾನೂನು ಕ್ರಮ ಕೈಗೊಳ್ಳುವಂತೆ ಇಲಾಖಾ ಮುಖ್ಯಸ್ಥರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ನಾಯಿ ಕಚ್ಚುವಿಕೆಯು ರೇಬೀಸ್ ಸೋಂಕನ್ನು ಹರಡಬಹುದು, ಇದು ಮಾರಣಾಂತಿಕ ಕಾಯಿಲೆಯಾಗಿದ್ದು ಯಾವುದೇ ವ್ಯಕ್ತಿ ನಾಯಿ ಕಡಿತಕ್ಕೆ ಒಳಗಾದ ತಕ್ಷಣ ವೈದ್ಯಕೀಯ ಸಹಾಯ ಪಡೆಯುವುದು ಅತ್ಯಗತ್ಯ, ವಿಶೇಷವಾಗಿ ಸಾಕು ಪ್ರಾಣಿಗಳಿಗೆ ವ್ಯಾಕ್ಸಿನೇಷನ್ ಮಾಡಿಸಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.2025 ನೇ ವರ್ಷದಲ್ಲಿ ಜಿಲ್ಲೆಯಲ್ಲಿ 12,663 ಮಂದಿಗೆ ನಾಯಿ ಕಚ್ಚಿರುವುದು ದಾಖಲಾಗಿದೆ. ಈ ಪೈಕಿ 2 ಸಾವು ಪ್ರಕರಣಗಳು ದಾಖಲಾಗಿವೆ. ಅದೇ ಜಿಲ್ಲೆಯಲ್ಲಿ 2025ನೇ ವರ್ಷದಲ್ಲಿ 944 ಹಾವು ಕಡಿತದ ಪ್ರಕರಣಗಳು ದಾಖಲಾಗಿದ್ದು, ಅದರ ಪೈಕಿ 7 ಜನ ನಿಧನರಾಗಿದ್ದಾರೆ. 2026ನೇ ವರ್ಷದ ಜನವರಿಯಿಂದ ಈವರೆಗೆ ಜಿಲ್ಲೆಯಲ್ಲಿ 5717 ನಾಯಿ ಕಡಿತಗಳಾಗಿದ್ದು, ಎಲ್ಲರಿಗೂ ಚಿಕಿತ್ಸೆ ನೀಡಿ ಪ್ರಾಣಾಪಾಯದಿಂದ ಪಾರು ಮಾಡಲಾಗಿದೆ ಎಂದರು.

ಆದರೆ ಇದೇ ವರ್ಷದಲ್ಲಿ 292 ಮಂದಿ ಹಾವು ಕಡಿತಕ್ಕೆ ಒಳಗಾಗಿ 3 ಜನ ಈ ವರೆಗೆ ಸಾವನ್ನಪ್ಪಿದ್ದಾರೆ. ಮುಂದಿನ ದಿನಗಳಲ್ಲಿ ನಾಯಿ ಮತ್ತು ಹಾವಿನ ಕಡಿತದಿಂದ ಸಾವು ಉಂಟಾಗ ದಂತೆ ಏನೆಲ್ಲ ಕ್ರಮಗಳನ್ನು ಕೈಗೊಳ್ಳಬೇಕು ಆ ಕ್ರಮಗಳನ್ನು ಕೈಗೊಳ್ಳುವಂತೆ ಅಧಿಕಾರಿ ಗಳಿಗೆ ಸೂಚನೆಗಳನ್ನು ನೀಡಿದರು. ಫ್ರೆಂಚ್ ಸೂಕ್ಷ್ಮ ಜೀವಶಾಸ್ತ್ರಜ್ಞ ''ಲೂಯಿ ಪಾಶ್ಚರ್'' ಅವರು ಮೊದಲ ರೇಬೀಸ್ ಲಸಿಕೆ ಯನ್ನು ಅಭಿವೃದ್ಧಿಪಡಿಸಿದರು. 1885ರಲ್ಲಿ ರೇಬೀಸ್ ಅಧ್ಯಯನ ಮಾಡುವಾಗ, ಪಾಶ್ಚರ್ ತನ್ನ ಮೊದಲ ಮಾನವ ಲಸಿಕೆಯನ್ನು ಪರೀಕ್ಷಿಸಿದರು ಎಂದು ತಿಳಿಸಿದರು.

ರೇಬೀಸ್ ಒಂದು ವೈರಾಣುವಿನಿಂದ ಹರಡುವ ಸೋಂಕು. ಸೋಂಕಿರುವ ಪ್ರಾಣಿಗಳ (ನಾಯಿ 97%, ಬೆಕ್ಕು 2%, ನರಿ, ಮಂಗೂಸ್, ಕುದುರೆ, ಹಸು, ಕುರಿ, ಟಗರು 1%) ಜೊಲ್ಲಿನ ಸಂಪರ್ಕದಿಂದ ಮತ್ತು ತೆರೆದ ಚರ್ಮ ಮೇಲೆ ನಾಕುವಿಕೆಯಿಂದ ಹಾಗೂ ಪರಚುವಿಕೆ ಯಿಂದ ಕಡಿತದಿಂದ ಹರಡುತ್ತದೆ ಎಂದರು.


ಉದಯವಾಹಿನಿ ಚಿತ್ರ

**ಹಾವುಗಳು ವಿಷಕಾರಿ ಮತ್ತು ವಿಷರಹಿತ ಎರಡೂ ಆಗಿರುತ್ತವೆ. ಹಾವು ಕಚ್ಚಿದ ಸಂದರ್ಭಗಳಲ್ಲಿ ಹೆದರದೆ ಹಾವು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಎಡಭಾಗಕ್ಕೆ ಮಲಗಿಸಿ ಕಚ್ಚಿದ ಭಾಗವನ್ನು ಅಲುಗಾಡದಂತೆ ನೋಡಿಕೊಳ್ಳಬೇಕು ಹಾವು ಕಚ್ಚಿದ ದೇಹದ ಭಾಗದಲ್ಲಿರುವ ಪಾದರಕ್ಷೆ, ಕಾಲುಂಗುರ, ಬೆಲ್ಟ್ ಆಭರಣಗಳು, ವಾಚ್, ಬಿಗಿಯಾದ ಬಟ್ಟೆಯನ್ನು ಕಳಚಿ ಅಂಬ್ಯುಲೆನ್ಸ್ ಅಥವಾ ಇನ್ನಿತರ ವಾಹನದಲ್ಲಿ ಹಾವು ಕಡಿತಕ್ಕೆ ಒಳಗಾದ ವ್ಯಕ್ತಿಯನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ಯಬೇಕು ಎಂದರು. ಈ ಸೋಂಕಿನ ಬಗ್ಗೆ ಶಾಲಾ, ಕಾಲೇಜು, ಗ್ರಾಮ ಪಂಚಾಯತಿ, ನಗರಸಭೆ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಅರಿವು ಮೂಡಿಸಬೇಕು ನಾಯಿ ಮತ್ತು ಹಾವು ಕಡಿತ ಕಡಿಮೆ ಮಾಡಲು ಕ್ರಮ ವಹಿಸಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.** ಡಾ.ಎನ್.ಭಾಸ್ಕರ್ ಅಪರ ಜಿಲ್ಲಾಧಿಕಾರಿ

## ಮಿನಿ ನ್ಯೂಸ್

### ಕೊಡಗಿನಲ್ಲಿ ಅಕ್ರಮ ಮರ ಸಾಗಣೆ ಜಾಲ ಭೇದಿಸಿದ ಅರಣ್ಯ ಇಲಾಖೆ

• **ಉದಯವಾಹಿನಿ, ಮಡಕೇರಿ**



ಉದಯವಾಹಿನಿ ಚಿತ್ರ

ಕೊಡಗು ಜಿಲ್ಲೆಯ ವೀರಾಜಪೇಟೆ ಅರಣ್ಯ ಪ್ರದೇಶದಿಂದ ಅಕ್ರಮವಾಗಿ ಬೀಟೆ ಮರದ ದಿಮ್ಮಿಗಳನ್ನು ಸಾಗಣೆ ಮಾಡುತ್ತಿದ್ದ ಜಾಲವನ್ನು ಅರಣ್ಯ ಇಲಾಖೆ ಅಧಿಕಾರಿಗಳು ಭೇದಿಸಿದ್ದಾರೆ. ಸುಮಾರು 28 ಲಕ್ಷ ರೂ. ಮೌಲ್ಯದ 45 ಬೀಟೆ ಮರದ ದಿಮ್ಮಿಗಳು ಹಾಗೂ ಸಾಗಣೆಗೆ ಬಳಸಿದ್ದ ಲಾರಿಯನ್ನು ವಶಕ್ಕೆ ಪಡಿಸಿಕೊಂಡಿದ್ದಾರೆ. ಈ ಪ್ರಕರಣದಲ್ಲಿ ಕೇರಳದ ಮಲ್ಲಪುರಂ ಮೂಲದ ಲಾರಿ ಮಾಲೀಕ ಹಾಗೂ ಚಾಲಕ ಅಬ್ದುಲ್ ಶುಕೂರ್‌ನನ್ನು ಬಂಧಿಸಲಾಗಿದೆ. ಲಾರಿಯಲ್ಲಿದ್ದ ಸುಮಾರು 28 ಲಕ್ಷ ರೂ. ಬೆಲೆ ಬಾಳುವ 45 ಬೀಟೆ ಮರದ ದಿಮ್ಮಿಗಳನ್ನು ವಶಪಡಿಸಿಕೊಳ್ಳಲಾಗಿದೆ. ಕೊಡಗಿನಿಂದ ಕಾಫಿ ಹಾಗೂ ಮರದ ಹೊಟ್ಟು ತುಂಬಿದ ಚೀಲಗಳ ನಡುವೆ ಬೀಟೆ ಮರದ ದಿಮ್ಮಿಗಳನ್ನು ಅಡಗಿಸಿ ಸಾಗಣೆ ಮಾಡಲಾಗುತ್ತಿತ್ತು ಎಂದು ತನಿಖೆಯಿಂದ ತಿಳಿದುಬಂದಿದೆ. ಖಚಿತ ಮಾಹಿತಿ ಮೇರೆಗೆ ಹುಣಸೂರು ಪ್ರಾದೇಶಿಕ ಅರಣ್ಯ ವಿಭಾಗದ ಅಧಿಕಾರಿಗಳು ಹುಣಸೂರು-ಹೆಚ್.ಡಿ.ಕೋಟೆ ಮುಖ್ಯರಸ್ತೆಯ ಆಜಾದ್ ನಗರ ಪೆಟ್ರೋಲ್ ಬಂಕ್ ಬಳಿ ಲಾರಿಯನ್ನು ತಡೆದು ಪರಿಶೀಲನೆ ನಡೆಸಿದರು. ಈ ವೇಳೆ ಲಾರಿಯೊಳಗೆ ಅಡಗಿಸಿಟ್ಟಿದ್ದ ಬೀಟೆ ಮರದ ದಿಮ್ಮಿಗಳು ಪತ್ತೆಯಾಗಿವೆ.

### ವಿಜಯ್ ರೀತಿ ನೂರು ಜನರ ಬಂದ್ರೂ ಮೇಕೆದಾಟು ಯೋಜನೆ ನಿಲ್ಲಿಸಲು ಸಾಧ್ಯವಿಲ್ಲ: ಗಣಿಗ ರವಿಕುಮಾರ್

• **ಉದಯವಾಹಿನಿ, ಮಂಡ್ಯ**


ಉದಯವಾಹಿನಿ ಚಿತ್ರ

ವಿಜಯ್ ರೀತಿ ತಮಿಳುನಾಡಿನಲ್ಲಿ ನೂರು ಮಂದಿ ಸಿಎಂ ಆದರೂ ಸಹ ನಾವು ಮೇಕೆದಾಟು ಡ್ಯಾಂ ಕಟ್ಟೋದನ್ನು ತಡೆಯಲು ಸಾಧ್ಯವಿಲ್ಲ ಎಂದು ಕಾಂಗ್ರೆಸ್ ಶಾಸಕ ಗಣಿಗ ರವಿಕುಮಾರ್ ಹೇಳಿದ್ದಾರೆ.

ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈಗಾಗಲೇ ನಾವು ಮೇಕೆದಾಟು ಯೋಜನೆಯ ಡಿಪಿಆರ್‌ನ್ನು ಸಿದ್ಧಪಡಿಸಿದ್ದೇವೆ. ಅಲ್ಲದೇ ಸುಪ್ರೀಂಕೋರ್ಟ್ ಸಹ ಕಾವೇರಿ ಬೋರ್ಟ್‌ನಲ್ಲಿ ತೀರ್ಮಾನ ಮಾಡಿಕೊಳ್ಳಿ ಎಂದು ಹೇಳಿದೆ.

ನಮ್ಮ ಪರವಾಗಿ ಸುಪ್ರೀಂ ಕೋರ್ಟ್ ಆದೇಶ ನೀಡಿದೆ. ಅದರಂತೆ ನಾವು ಡಿಪಿಆರ್‌ನ್ನು ಸಿದ್ಧತೆ ಮಾಡಿಕೊಂಡಿದ್ದೇವೆ. ಇದೀಗ ಮೇಕೆದಾಟು ವಿಚಾರದಲ್ಲಿ ಕಾನೂನು ಹೋರಾಟ ಮಾಡುವುದಾಗಿ ವಿಜಯ್ ಹೇಳಿದ್ದಾರೆ ಎಂದಿದ್ದಾರೆ. ತಮಿಳುನಾಡಿನವರಿಗೆ ಅವರ ಪಾಲಿನ ನೀರನ್ನು ನಾವು ಕೊಡ್ತಾ ಇದೀವಿ. ನಮ್ಮ ಜಾಗದಲ್ಲಿ ಡ್ಯಾಂ ಕಟ್ಟುವುದನ್ನು ತಡೆಯುವ ಹಕ್ಕು ಅವರಿಗಿಲ್ಲ. ಇನ್ನೂ ಬಿಜೆಪಿ ಯಾವಾಗಲೂ ರಾಜಕೀಯವಾಗಿ ಮಾತನಾಡುತ್ತಾರೆ ಅಷ್ಟೇ.

ಗೋವಾದಲ್ಲಿ ಅವರದ್ದೇ ಸರ್ಕಾರ ಇದೆ, ಆದರೂ ಕಳಸ ಬಂಡೂರಿಗೆ ಅವಕಾಶ ಕೊಡಿಸಲು ಆಗುತ್ತಿಲ್ಲ.

ಆಯಾ ಆಯಾ ರಾಜ್ಯಗಳಲ್ಲಿ ಅವರುಗಳು ರಾಜಕಾರಣ ಮಾಡ್ತಾರೆ ಅಷ್ಟೇ. ಯಾರು ಏನೇ ಮಾಡಲಿ ಮೇಕೆದಾಟು ಡ್ಯಾಂ ಕಟ್ಟುವುದನ್ನು ತಡೆಯೋಕೆ ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

### ಪದವಿ ವಿದ್ಯಾರ್ಥಿಗಳಿಗೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಚಿತ ತರಬೇತಿ ಶಾಸಕ ಸಿ.ಬಿ.ಸುರೇಶ್‌ಬಾಬು


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಹುಳಿಯಾರು**

ವಿದ್ಯಾರ್ಥಿಗಳಿಗೆ ಕೇವಲ ಪದವಿ ಶಿಕ್ಷಣ ಅಷ್ಟೇ ಸಾಲದು, ಬದಲಿಗೆ ತಮ್ಮ ಭವಿಷ್ಯವನ್ನು ಉಜ್ವಲಗೊಳಿಸಿಕೊಳ್ಳಲು ಎಫ್‌ಡಿಎ, ಎಸ್‌ಡಿಎ ಬ್ಯಾಂಕಿಂಗ್ ಮತ್ತು ಪೊಲೀಸ್ ಉದ್ಯೋಗಗಳ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಬೇಕು. ಇದಕ್ಕಾಗಿ ಈ ವರ್ಷದಿಂದ ಉಚಿತ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಸಲಾಗುವುದು ಎಂದು ಶಾಸಕರಾದ ಸಿ.ಬಿ.ಸುರೇಶ್‌ಬಾಬು ತಿಳಿಸಿದರು. ಹುಳಿಯಾರು-ಕೆಂಕೆರೆ ಬಿಎಂಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಂಗಳವಾರ ಏರ್ಪಡಿಸಿದ್ದ ಜನಪದ ಉತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿ , ಪಾಶ್ಚಾತ್ಯ ಸಂಸ್ಕೃತಿಯ ಅತಿಯಾದ ವ್ಯಾಮೋಹದಿಂದಾಗಿ ಇಂದು ನಾವು ನಮ್ಮದೇ ಆದ ಗ್ರಾಮೀಣ ಸೊಗಡು ಹಾಗೂ ಶ್ರೀಮಂತ ಜಾನಪದ ಪರಂಪರೆಯನ್ನು ಮರೆಯುತ್ತಿದ್ದೇವೆ.

ಪಾಶ್ಚಾತ್ಯರ ಅನುಕರಣೆಗೆ ಹೋಗಿ ನಾವು ನಮ್ಮ ಮೂಲ ಸಂಸ್ಕೃತಿಯನ್ನೂ ಉಳಿಸಿಕೊಳ್ಳಲಾಗದೆ, ಅತ್ತ ಅವರದ್ದನ್ನೂ ಪೂರ್ಣವಾಗಿ ಅಳವಡಿಸಿಕೊಳ್ಳಲಾಗದೆ ಎಡಬಿಡಂಗಿ ಪರಿಸ್ಥಿತಿಯಲ್ಲಿ ಸಿಲುಕಿದ್ದೇವೆ. ನಮ್ಮ ದೇಶದ ಯೋಗ, ಸಾಂಪ್ರದಾಯಿಕ ಸೀರೆ ಮತ್ತು ಪಂಚೆ ಶೈಲಿಯ ಉಡುಗೆಗಳು ಇಡೀ ಜಗತ್ತನ್ನೇ ಆಕರ್ಷಿಸುತ್ತಿವೆ. ವಿದೇಶಿಗರು ನಮ್ಮ ಸಂಸ್ಕೃತಿಯನ್ನು ಗೌರವಿಸಿ ಅಳವಡಿಸಿಕೊಳ್ಳುತ್ತಿದ್ದರೆ, ನಾವು ಮಾತ್ರ ನಮ್ಮದೇ ಆದ ಅಸ್ಮಿತೆಯನ್ನು ಬಿಟ್ಟು ಗೊಂದಲಕ್ಕೀಡಾಗುತ್ತಿದ್ದೇವೆ ಎಂದರು.

### ಕೋಲಾರದಲ್ಲಿ ಮುಂದುವರೆದ ಕೃಷಿ ಹೊಂಡ ಸಾವಿನ ಸರಣಿ: 20 ದಿನದಲ್ಲಿ ಮಕ್ಕಳು ಸೇರಿ 9 ಜನ ಸಾವು

• **ಉದಯವಾಹಿನಿ, ಕೋಲಾರ**

ಜಿಲ್ಲೆಯಲ್ಲಿ ಕೃಷಿ ಹೊಂಡಗಳು ಅಕ್ಷರಶಃ ಮೃತ್ಯು ಕೂಪಗಳಾಗಿ ಮಾರ್ಪಟ್ಟಿವೆ. ನಿನ್ನೆ ಕಾಲುಜಾರಿ ಕೃಷಿ ಹೊಂಡಕ್ಕೆ ಬಿದ್ದು ಮತ್ತೆ ಇಬ್ಬರು ಸಹೋದರರು ಸಾವನ್ನಪ್ಪಿರುವಂತಹ ಘಟನೆ ಜಿಲ್ಲೆಯ ಮಾಲೂರು ತಾಲ್ಲೂಕಿನ ಕೊತ್ತೂರು ಬಳಿ ನಡೆದಿದೆ. ಆ ಮೂಲಕ ಕಳೆದ ಇಪ್ಪತ್ತು ದಿನದಲ್ಲಿ ಕೃಷಿ ಹೊಂಡದಲ್ಲಿ ಬಿದ್ದು 9 ಜನರು ಮೃತಪಟ್ಟಿದ್ದಾರೆ.

ಕೃಷಿಹೊಂಡಗಳಿಗೆ ತಂತಿ ಬೇಲಿ ಅಳವಡಿಸಿ, ಸುರಕ್ಷಿತ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಆದೇಶದ ನಡುವೆಯೂ ಸಾವಿನ ಸರಣಿ ಮುಂದುವರೆದಿದೆ.

ಜಿಲ್ಲೆಯಲ್ಲಿ ಕೃಷಿ ಹೊಂಡಕ್ಕೆ ಬಿದ್ದು ಮೃತಪಟ್ಟವರ ಸಂಖ್ಯೆ ಏರಿಕೆ ಆಗುತ್ತಿದೆ. ಕೃಷಿ ಹೊಂಡಗಳಿಗೆ ಮುಳ್ಳುತಂತಿ ಹಾಗೂ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಎಂಆರ್‌ರವಿ ಒಂದು ವಾರದ ಗಡುವು ನೀಡಿದ್ದರು. ಒಂದು ವಾರದ ನಂತರವೂ ಸಾವಿನ ಸರಣಿ ಮುಂದುವರೆದಿದೆ. ನಿನ್ನೆ ಕೋಲಾರ ಜಿಲ್ಲೆಯ ಮಾಲೂರು ತಾಲ್ಲೂಕಿನ ಕೊತ್ತೂರು ಬಳಿ ಕಾಲುಜಾರಿ ಕೃಷಿ ಹೊಂಡಕ್ಕೆ ಬಿದ್ದು ಮುಳುಗಿ ಇಬ್ಬರು ಸಹೋದರರು ಸಾವನ್ನಪ್ಪಿದ್ದಾರೆ.

ಅಂತರಾಳದಿಂದ..
EDITORIAL

# ಭಟ್ಕಳ ದುರಂತ: ಸುರಕ್ಷೆಯ ಕ್ರಮಗಳು ಅನಿವಾರ್ಯ



ಉತ್ತರ ಕನ್ನಡ ಜಿಲ್ಲೆಯ ಭಟ್ಕಳದ ವೆಂಕಟಾಪುರ ನದಿಯಲ್ಲಿ ಕಪ್ಪೆಚಿಪ್ಪು ಹೆಕ್ಕಲು ಹೋಗಿ ಒಟ್ಟು 11 ಜನರು ಜಲಸಮಾಧಿಯಾಗಿರುವ ದುರಂತವು ಇಡೀ ರಾಜ್ಯವನ್ನೇ ಆಘಾತಕ್ಕೆ ಒಳಪಡಿಸಿದೆ. ಪ್ರಕೃತಿಯ ದಿಢೀರ್ ಮುನಿಸಿಗೆ ಒಂದೇ ಕುಟುಂಬದ ಹತ್ತು ಜೀವಗಳು ಬಲಿಯಾಗಿರುವುದು ಕರಾವಳಿ ಇತಿಹಾಸದಲ್ಲೇ ಅತ್ಯಂತ ದೊಡ್ಡ ದುರಂತಗಳಲ್ಲೊಂದಾಗಿ ದಾಖಲಾಗಿದೆ. ಕರಾವಳಿ ಭಾಗದ ಅನೇಕ ಬಡ ಜನರಿಗೆ ಕಪ್ಪೆಚಿಪ್ಪು ಜೀವನಾಧಾರ ಮತ್ತು ಉಪಜೀವನದ ಮಾರ್ಗ. ಆದರೆ ಅದೇ ಹಸಿವಿನ ಅನ್ವೇಷಣೆ ಇಂದು ಒಂದು ಸುಖೀ ಕುಟುಂಬದ ಪಾಲಿಗೆ ಯಮಪಾಶವಾಗಿ ಪರಿಣಮಿಸಿರುವುದು ಅತ್ಯಂತ ಕರುಣಾಜನಕ ಹಾಗೂ ಆಘಾತಕಾರಿ.

## ದುರದೃಷ್ಟಕರ

**ಪ್ರಕೃತಿಯ ವಿಕೋಪ ಹಾಗೂ ಮುನ್ನೆಚ್ಚರಿಕೆಯ ಕೊರತೆ ಈ ಘೋರ ದುರಂತಕ್ಕೆ ಮುಖ್ಯ ಕಾರಣ. ಸುರಿದ ಭಾರೀ ಮಳೆ ಮತ್ತು ಸಮುದ್ರದ ಉಬ್ಬರ-ಇಳಿತದಿಂದಾಗಿ ನದಿಯಲ್ಲಿ ದಿಢೀರನೆ ನೀರಿನ ಮಟ್ಟ ಹೆಚ್ಚಾಗಿದೆ. ಭಟ್ಕಳದ ಸುತ್ತಮುತ್ತ ಸುರಿದ ಭಾರೀ ಮಳೆಯಿಂದಾಗಿ ನದಿಯಲ್ಲಿ ಒಳಹರಿವು ಹೆಚ್ಚಾಗಿತ್ತು. ಇದರೊಂದಿಗೆ ಸಮುದ್ರದ ಉಬ್ಬರವಿಳಿತದ ಪರಿಣಾಮವಾಗಿ ನದಿಯಲ್ಲಿ ದಿಢೀರನೆ ನೀರಿನ ಮಟ್ಟ ಮತ್ತು ಸೆಳೆತ ತೀವ್ರಗೊಂಡಿತು.**

**ನೀರಿನ ಆಳದಲ್ಲಿ ಮುಳುಗಿ ಕಪ್ಪೆಚಿಪ್ಪು ಆರಿಸುವ ಕಾಯಕದಲ್ಲಿ ತಲ್ಲೀನರಾಗಿದ್ದ ಮಹಿಳೆಯರಿಗೆ ನದಿಯಲ್ಲಿ ಹೆಚ್ಚಾಗುತ್ತಿದ್ದ ನೀರಿನ ವೇಗ ತತ್‌ಕ್ಷಣಕ್ಕೆ ಅರಿವಾಗಿರಲಿಲ್ಲ. ನದಿಯ ಆಳದಲ್ಲಿ ಕಪ್ಪೆಚಿಪ್ಪು ಆರಿಸುವ ಕಾಯಕದಲ್ಲಿ ನಿರತರಾಗಿದ್ದ ಮುಗ್ಧ ಜನರಿಗೆ ನೀರಿನ ರಭಸದ ಅರಿವಾಗದಿರುವುದು ದುರದೃಷ್ಟಕರ.**

ಒಬ್ಬರನ್ನೊಬ್ಬರು ಉಳಿಸಲು ಪರಸ್ಪರ ಕೈ ಕೈ ಹಿಡಿದು ಹೋದವರೆಲ್ಲರೂ ನೀರಿನ ಸೆಳೆತಕ್ಕೆ ಸಿಲುಕಿ ಪ್ರಾಣ ಕಳೆದುಕೊಂಡಿದ್ದಾರೆ. ಈ ದುರಂತ ನದಿ-ಸಮುದ್ರಗಳ ಅಪಾಯಕಾರಿ ನಡವಳಿಕೆಯ ಮುನ್ಸೂಚನೆ ಇಲ್ಲದಿರುವುದಕ್ಕೆ ಸಾಕ್ಷಿಯಾಗಿದೆ. ಪ್ರಕೃತಿಯ ಮುನ್ಸೂಚನೆಗಳನ್ನು ನಿರ್ಲಕ್ಷಿಸುವುದು ಎಷ್ಟು ಅಪಾಯಕಾರಿ ಎಂಬುದಕ್ಕೆ ಈ ಘಟನೆ ಕನ್ನಡಿ. ಕೇಂದ್ರ ಹಾಗೂ ರಾಜ್ಯ ಸರಕಾರಗಳು ಮೃತರ ಕುಟುಂಬಗಳಿಗೆ ಪರಿಹಾರ ಘೋಷಿಸಿವೆ. ಸಚಿವರು ಮತ್ತು ಅಧಿಕಾರಿಗಳು ಸ್ಥಳದಲ್ಲೇ ಬೀಡುಬಿಟ್ಟು ರಕ್ಷಣ ಕಾರ್ಯಾಚರಣೆ ನಡೆಸಿರುವುದು ಶ್ಲಾಘನೀಯವಾದರೂ ಕಳೆದುಹೋದ ಜೀವಗಳನ್ನು ಮತ್ತು ಆ ಕುಟುಂಬದ ಆಕ್ರಂದನವನ್ನು ತುಂಬಿಕೊಡಲು ಸಾಧ್ಯವಿಲ್ಲ.

ಇನ್ನು ಮುಂದಾದರೂ ಇಂತಹ ದುರ್ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆಯ ಕ್ರಮಗಳನ್ನು ಕೈಗೊಳ್ಳಬೇಕಾಗಿದೆ. ಇದರ ಜತೆಗೆ ನದಿಗಳ ಸುಳಿಗಳಲ್ಲಿ ವಿದ್ಯಾರ್ಥಿಗಳು, ಪ್ರವಾಸಿಗರು ಮುಳುಗುವಂತಹ ದುರ್ಘಟನೆಗಳು ನಡೆಯದಂತೆಯೂ ಎಚ್ಚರಿಕೆಯ ಕ್ರಮಗಳನ್ನು ಜಾರಿಗೊಳಿಸಬೇಕು.

ಕರಾವಳಿ ಹಾಗೂ ನದಿ ತೀರದ ಇಂತಹ ಸೂಕ್ಷ್ಮ ಪ್ರದೇಶಗಳಲ್ಲಿ ಹವಾಮಾನ ವೈಪರೀತ್ಯ ಅಥವಾ ಉಬ್ಬರವಿಳಿತದ ಸಂದರ್ಭದಲ್ಲಿ ಸಾರ್ವಜನಿಕರಿಗೆ ತತ್‌ಕ್ಷಣ ಎಚ್ಚರಿಕೆ ನೀಡುವ ಸೈರನ್ ಅಥವಾ ಧ್ವನಿವರ್ಧಕ ವ್ಯವಸ್ಥೆ ಜಾರಿಗೆ ಬರಬೇಕು.ನದಿ ತೀರದ ನಿವಾಸಿಗಳಿಗೆ ದಿಢೀರ್‌ಪ್ರವಾಹ ಅಥವಾ ನೀರಿನ ಸೆಳೆತ ಉಂಟಾದಾಗ ಕೈಗೊಳ್ಳಬೇಕಾದ ಸುರಕ್ಷೆಯ ಕ್ರಮಗಳ ಬಗ್ಗೆ ಕರಾವಳಿ ಕಾವಲು ಪಡೆ ತರಬೇತಿ ನೀಡಬೇಕು.

ಈ ದುರಂತವು ಕೇವಲ ಒಂದು ಅಪಘಾತವಲ್ಲ, ಬದಲಿಗೆ ಕರಾವಳಿ ಭಾಗದ ಜನರ ಸುರಕ್ಷೆಯ ದೃಷ್ಟಿಯಿಂದ ವ್ಯವಸ್ಥೆಗೆ ಎಚ್ಚರಿಕೆಯ ಘಂಟೆಯಾಗಿದೆ. ಇಂತಹ ಆಯಕಟ್ಟಿನ ಜಾಗಗಳಲ್ಲಿ ಕನಿಷ್ಠ ಪಕ್ಷ ವಿಪತ್ತಿನ ದಿನಗಳಲ್ಲಾದರೂ ಜೀವ ರಕ್ಷಕರನ್ನು ನಿಯೋಜಿಸುವುದು ಅತ್ಯಗತ್ಯ. ಇಂತಹ ನೈಸರ್ಗಿಕ ವಿಕೋಪಗಳ ಮುನ್ಸೂಚನೆಯನ್ನು ಸ್ಥಳೀಯರಿಗೆ ತಲುಪಿಸುವಲ್ಲಿ ನಮ್ಮ ವ್ಯವಸ್ಥೆ ಇನ್ನಷ್ಟು ಜಾಗೃತವಾಗಬೇಕಿದೆ. ಬಡತನ ಮತ್ತು ಜೀವನೋಪಾಯಕ್ಕಾಗಿ ನದಿ-ಸಮುದ್ರಗಳನ್ನೇ ನಂಬಿಕೊಂಡಿರುವ ಕರಾವಳಿಯ ಜನರಿಗೆ ಸುರಕ್ಷೆಯ ಪಾಠಗಳು ಅನಿವಾರ್ಯವಾಗಿವೆ. ಈ ಭೀಕರ ದುರಂತದಿಂದಲಾದರೂ ಆಡಳಿತ ವ್ಯವಸ್ಥೆ ಎಚ್ಚೆತ್ತುಕೊಂಡು ಮುಂದಿನ ದಿನಗಳಲ್ಲಿ ಇಂತಹ ಸಾವುಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಿದೆ.



ಕಲಾ ಸಾಹಿತ್ಯ

ವಿಶ್ವಾಸ್ ಡಿ. ಗೌಡ
ಲೇಖಕರು
ಸಾಮಾಜಿಕ ಚಿಂತಕ

# ಮತದಾನದ ಮೌಲ್ಯ ತಿಳಿಯದ ಸಮಾಜಕ್ಕೆ ಟೀಕಿಸುವ ಹಕ್ಕಿದೆಯೇ?

**ಇಂದಿನ ಯುವಜನತೆ ವಿಶೇಷವಾಗಿ ಮತದಾನದ ಮಹತ್ವವನ್ನು ಅರ್ಥಮಾಡಿಕೊಳ್ಳಬೇಕು. ಸೋಶಿಯಲ್ ಮೀಡಿಯಾದಲ್ಲಿ ಸರ್ಕಾರವನ್ನು ಟೀಕಿಸುವುದು ಸುಲಭ. ಆದರೆ ಮತದಾನದ ದಿನ ಮನೆಬಿಟ್ಟು ಹೊರಬಂದು ಮತ ಹಾಕುವುದು ನಿಜವಾದ ನಾಗರಿಕ ಜವಾಬ್ದಾರಿ. ದೇಶದ ಭವಿಷ್ಯದ ಬಗ್ಗೆ ಮಾತನಾಡುವ ಪ್ರತಿಯೊಬ್ಬರೂ ಮೊದಲಿಗೆ ಮತದಾನದ ಬಗ್ಗೆ ಗಂಭೀರತೆ ಹೊಂದಬೇಕು.**

**ಮತದಾನ ಮಾಡದಿರುವುದಕ್ಕೆ ಕೆಲವೊಮ್ಮೆ ಸರಿಯಾದ ಕಾರಣಗಳೂ ಇರಬಹುದು. ಅಭ್ಯರ್ಥಿಗಳ ಬಗ್ಗೆ ಅಸಮಾಧಾನ, ರಾಜಕೀಯದ ಮೇಲಿನ ನಿರಾಸಕ್ತಿ ಅಥವಾ ವ್ಯವಸ್ಥೆಯ ಮೇಲಿನ ನಂಬಿಕೆ ಕಳೆದುಕೊಳ್ಳುವುದು ಕೆಲವರನ್ನು ಮತದಾನದಿಂದ ದೂರ ಇಡಬಹುದು. ಆದರೆ ಸಮಸ್ಯೆಗೆ ಪರಿಹಾರ ಮತದಾನದಿಂದ ದೂರ ಉಳಿಯುವುದಲ್ಲ ಉತ್ತಮ ನಾಯಕತ್ವವನ್ನು ಆರಿಸುವ ಜಾಗೃತಿಯನ್ನು ಬೆಳೆಸುವುದಾಗಿದೆ.**



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ದೊರೆತಿರುವ ಅತ್ಯಂತ ಅಮೂಲ್ಯವಾದ ಹಕ್ಕು ಎಂದರೆ ಮತದಾನದ ಹಕ್ಕು. ದೇಶದ ಆಡಳಿತ ಯಾರ ಕೈಯಲ್ಲಿ ಇರಬೇಕು, ಸಮಾಜದ ಭವಿಷ್ಯ ಯಾವ ದಿಕ್ಕಿನಲ್ಲಿ ಸಾಗಬೇಕು ಎಂಬುದನ್ನು ನಿರ್ಧರಿಸುವ ಶಕ್ತಿ ಸಾಮಾನ್ಯ ಮತದಾರನ ಕೈಯಲ್ಲಿದೆ. ಒಂದು ಮತ ಕೇವಲ ಗುರುತು ಹಾಕುವ ಕ್ರಿಯೆಯಲ್ಲ ಅದು ದೇಶದ ಭವಿಷ್ಯ ರೂಪಿಸುವ ಜವಾಬ್ದಾರಿ. ಆದರೆ ಇಂದಿನ ಸಮಾಜದಲ್ಲಿ ಒಂದು ವಿಚಿತ್ರ ಸ್ಥಿತಿ ಕಾಣುತ್ತಿದೆ. ಮತ ಹಾಕದೇ ಇರುವ ಹಲವರು ಸರ್ಕಾರ, ರಾಜಕೀಯ ಮತ್ತು ಆಡಳಿತದ ವಿರುದ್ಧ ತೀವ್ರ ಟೀಕೆ ಮಾಡುತ್ತಾರೆ. ಹೀಗಾಗಿ ಮತ ಹಾಕದೆ ಟೀಕಿಸುವ ಹಕ್ಕಿದೆಯೇ ಎಂಬ ಪ್ರಶ್ನೆ ಗಂಭೀರ ಚರ್ಚೆಗೆ ಕಾರಣವಾಗಿದೆ. ಪ್ರಜಾಪ್ರಭುತ್ವದ ಮೂಲ ಅರ್ಥವೇ ಜನರ ಆಡಳಿತ. ಜನರು ತಮ್ಮ ಪ್ರತಿನಿಧಿಗಳನ್ನು ಆರಿಸಿ ಆಡಳಿತ ನಡೆಸಲು ಅವಕಾಶ ನೀಡುತ್ತಾರೆ. ಈ ವ್ಯವಸ್ಥೆಯ ಶಕ್ತಿ ಮತದಾನದಲ್ಲಿದೆ. ಮತ ಹಾಕುವುದು ಕೇವಲ ಹಕ್ಕಲ್ಲ, ಅದು ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಹೌದು. ಯಾಕೆಂದರೆ ನಾವು ಮತ ಹಾಕುವ ಮೂಲಕ ದೇಶದ ಭವಿಷ್ಯವನ್ನು ನಿರ್ಧರಿಸುತ್ತೇವೆ. ಉತ್ತಮ ನಾಯಕತ್ವವನ್ನು ಆಯ್ಕೆ ಮಾಡುವುದು ಅಥವಾ ತಪ್ಪು ನಾಯಕರನ್ನು ತಿರಸ್ಕರಿಸುವ ಶಕ್ತಿ ಮತಪೆಟ್ಟಿಗೆಯಲ್ಲಿದೆ.

ಆದರೆ ಇಂದಿನ ದಿನಗಳಲ್ಲಿ ಮತದಾನದ ದಿನವನ್ನು ಕೆಲವರು ಕೇವಲ ರಜಾದಿನದಂತೆ ನೋಡುತ್ತಾರೆ. ''ಒಂದು ಮತದಿಂದ ಏನು ಬದಲಾವಣೆ ಆಗುತ್ತದೆ?'' ಎಂಬ ನಿರ್ಲಕ್ಷ್ಯದ ಮನೋಭಾವ ಹೆಚ್ಚುತ್ತಿದೆ. ಕೆಲವರು ಮತದಾನ ಕೇಂದ್ರಕ್ಕೆ ಹೋಗುವುದಕ್ಕೂ ಆಸಕ್ತಿ ತೋರಿಸುವುದಿಲ್ಲ. ಆದರೆ ಅದೇ ಜನರು ನಂತರ ಸರ್ಕಾರದ ವೈಫಲ್ಯ, ರಸ್ತೆ ಸಮಸ್ಯೆ, ಬೆಲೆ ಏರಿಕೆ, ನಿರುದ್ಯೋಗ ಅಥವಾ ಭ್ರಷ್ಟಾಚಾರದ ಬಗ್ಗೆ ಟೀಕಿಸುತ್ತಾರೆ.

ತಮ್ಮ ಜವಾಬ್ದಾರಿಯನ್ನು ನಿರ್ವಹಿಸದವರು ಆಡಳಿತವನ್ನು ಪ್ರಶ್ನಿಸುವ ನೈತಿಕ ಹಕ್ಕು ಹೊಂದಿದ್ದಾರೆಯೇ ಎಂಬ ಪ್ರಶ್ನೆ ಇಲ್ಲಿ ಉದ್ಭವಿಸುತ್ತದೆ. ಒಬ್ಬ ವಿದ್ಯಾರ್ಥಿ ಪರೀಕ್ಷೆ ಬರೆಯದೆ ಫಲಿತಾಂಶದ ಬಗ್ಗೆ ದೂರು ನೀಡಿದರೆ ಅದು ಎಷ್ಟು ಅಸಂಬದ್ಧವಾಗಿರುತ್ತದೆಯೋ, ಅದೇ ರೀತಿ ಮತ ಹಾಕದೇ ಸರ್ಕಾರವನ್ನು ಟೀಕಿಸುವುದೂ ಅಷ್ಟೇ ವಿಚಿತ್ರವಾಗಿದೆ. ಯಾಕೆಂದರೆ ಪ್ರಜಾಪ್ರಭುತ್ವದಲ್ಲಿ ಆಡಳಿತ ನಿರ್ಮಾಣವಾಗುವುದು ಜನರ ಮತದಾನದಿಂದಲೇ. ಮತ ಹಾಕದೆ ದೂರ ನಿಂತವರು ನಂತರ ವ್ಯವಸ್ಥೆಯ ವೈಫಲ್ಯದ ಬಗ್ಗೆ ಮಾತ್ರ ಮಾತನಾಡುವುದು ಸಮಾಜದ ಜವಾಬ್ದಾರಿತನವನ್ನು ಕುಗ್ಗಿಸುತ್ತದೆ.

ಆದರೆ ಇಲ್ಲಿ ಮತ್ತೊಂದು ಮಹತ್ವದ ವಿಚಾರವನ್ನೂ ಗಮನಿಸಬೇಕು. ಪ್ರಜಾಪ್ರಭುತ್ವದಲ್ಲಿ ಟೀಕೆ ಮಾಡುವುದು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕು. ಮತ ಹಾಕಿದ್ದರೂ ಹಾಕದಿದ್ದರೂ ಸರ್ಕಾರವನ್ನು ಪ್ರಶ್ನಿಸುವ ಹಕ್ಕು ಎಲ್ಲರಿಗೂ ಇದೆ. ಯಾಕೆಂದರೆ ಸರ್ಕಾರ ಜನರ ತೆರಿಗೆ ಹಣದಿಂದ ನಡೆಯುತ್ತದೆ. ಆದ್ದರಿಂದ ಆಡಳಿತದ ತಪ್ಪುಗಳನ್ನು ಪ್ರಶ್ನಿಸುವುದು ಜನರ ಹಕ್ಕು ಮತ್ತು ಜವಾಬ್ದಾರಿಯೂ ಆಗಿದೆ. ಆದರೆ ಮತ ಹಾಕದೇ ಟೀಕೆ ಮಾಡುವವರ ಮಾತಿನಲ್ಲಿ ನೈತಿಕ ಬಲ ಕಡಿಮೆಯಾಗುತ್ತದೆ ಎಂಬುದು ವಾಸ್ತವ.ಮತದಾನ ಎಂದರೆ ಕೇವಲ ರಾಜಕೀಯ ಪಕ್ಷಕ್ಕೆ ಬೆಂಬಲ ನೀಡುವುದಲ್ಲ ಅದು ದೇಶದ ಅಭಿವೃದ್ಧಿಗೆ ನಮ್ಮ ಪಾಲಿನ ಕೊಡುಗೆ.

ಒಂದು ಮತದಿಂದ ಸರ್ಕಾರ ಬದಲಾಗಬಹುದು, ಒಂದು ಕ್ಷೇತ್ರದ ಭವಿಷ್ಯ ಬದಲಾಗಬಹುದು, ಒಂದು ದೇಶದ ದಿಕ್ಕೇ ಬದಲಾಗಬಹುದು. ಇತಿಹಾಸದಲ್ಲಿ ಅನೇಕ ಚುನಾವಣೆಗಳು ಕೆಲವೇ ಮತಗಳ ಅಂತರದಿಂದ ನಿರ್ಧಾರವಾಗಿರುವ ಉದಾಹರಣೆಗಳಿವೆ.

ಆದ್ದರಿಂದ ''ನನ್ನ ಒಂದು ಮತದಿಂದ ಏನು ಆಗುತ್ತದೆ?'' ಎಂಬ ಮನೋಭಾವ ಪ್ರಜಾಪ್ರಭುತ್ವಕ್ಕೆ ಅಪಾಯಕಾರಿಯಾಗಿದೆ. ಕೊನೆಗೆ ಹೇಳುವುದಾದರೆ, ಮತದಾನ ಪ್ರಜಾಪ್ರಭುತ್ವದ ಜೀವಾಳ. ಮತ ಹಾಕುವುದು ಕೇವಲ ಹಕ್ಕಲ್ಲ, ಅದು ದೇಶದ ಭವಿಷ್ಯದ ಮೇಲಿನ ಜವಾಬ್ದಾರಿ. ಸರ್ಕಾರವನ್ನು ಟೀಕಿಸುವ ಹಕ್ಕು ಎಲ್ಲರಿಗೂ ಇದ್ದರೂ, ಮತ ಹಾಕದೇ ಟೀಕೆ ಮಾಡುವವರ ಮಾತಿನಲ್ಲಿ ನೈತಿಕ ಬಲ ಕಡಿಮೆಯಾಗುತ್ತದೆ.

ಆದ್ದರಿಂದ ಉತ್ತಮ ಸಮಾಜ ಮತ್ತು ಬಲವಾದ ಪ್ರಜಾಪ್ರಭುತ್ವಕ್ಕಾಗಿ ಪ್ರತಿಯೊಬ್ಬ ನಾಗರಿಕನು ಮೊದಲು ಮತದಾನದ ಮೌಲ್ಯ ಅರಿತು ತನ್ನ ಹಕ್ಕನ್ನು ಚಲಾಯಿಸಬೇಕು. ಯಾಕೆಂದರೆ ದೇಶವನ್ನು ಬದಲಾಯಿಸುವ ಶಕ್ತಿ ಕೇವಲ ನಾಯಕನ ಕೈಯಲ್ಲಿಲ್ಲ ಅದು ಪ್ರತಿಯೊಬ್ಬ ಮತದಾರನ ಬೆರಳಲ್ಲಿದೆ.



ಕಲಾ ಸಾಹಿತ್ಯ

ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

# ಸ್ವತಂತ್ರ ಭಾರತದ ಮೊಟ್ಟಮೊದಲ ಪ್ರಧಾನಿ ಪಂಡಿತ್ ಜವಾಹರ್ ಲಾಲ್ ನೆಹರುರವರ 62ನೇ ವರ್ಷದ ಪುಣ್ಯಸ್ಮರಣೆ

ಪಂಡಿತ್ ಜವಾಹರ್ ಲಾಲ್ ನೆಹರುರವರು 1889 ನವಂಬರ್ 14 ರಂದು ತಂದೆ ಮೋತಿಲಾಲ್ ನೆಹರು ಮತ್ತು ತಾಯಿ ಸ್ವರೂಪರಾಣಿರವರ ಮಗನಾಗಿ ಅಲಹಾಬಾದಿನಲ್ಲಿ ಜನಿಸಿರುತ್ತಾರೆ. ಚಿಕ್ಕವಯಸ್ಸಿನಿಂದ ಸಂಸ್ಕಾರಗಳ ಜೊತೆಗೆ ಉನ್ನತ-ಗುಣಮಟ್ಟದ ಶಿಕ್ಷಣವನ್ನು ದೇಶ-ವಿದೇಶಗಳಲ್ಲಿ ಪಡೆದರು. ತಂದೆ ಜೊತೆಯಲ್ಲಿ ವಕೀಲ ವೃತ್ತಿಯನ್ನು ಮಾಡುತ್ತಿರುವಾಗ, 1919ರಲ್ಲಿ ಪಂಜಾಬಿನ ಜಲಿಯನ್ ವಾಲ್ ಬಾಗ್ ನಲ್ಲಿ ಬ್ರಿಟೀಷರು ನಡೆಸಿದ ಪೈಶಾಚಿಕ ಹತ್ಯಾಕಾಂಡವನ್ನು ವಿರೋಧಿಸಿ ಅದರಿಂದ ಪ್ರಭಾವಿತರಾಗಿ ಗಾಂಧೀಜಿ ಮೊದಲುಗೊಂಡು ಇತರೆ ನಾಯಕರೊಂದಿಗೆ ಸ್ವಾತಂತ್ರ್ಯ ಚಳುವಳಿಗೆ ಧುಮುಕಿದರು. ಅನೇಕ ಸಲ ಸೆರೆಮನೆವಾಸ ಅನುಭವಿಸಿದರು. ನಂತರ ಸಕ್ರಿಯವಾಗಿ ಸ್ವಾತಂತ್ರ್ಯ ಹೋರಾಟದ ಚಳುವಳಿಯಲ್ಲಿ ಭಾಗವಹಿಸಿದರು. ನೆಹರುರವರು ಕಮಲರೊಂದಿಗೆ ವಿವಾಹವಾಗಿ ಅವರಿಗೆ ಏಕೈಕ ಪುತ್ರಿ ಇಂದಿರಾಗಾಂಧಿ. ಕಮಲಾರವರ ಆರೋಗ್ಯ ಹದಗೆಟ್ಟು ಗುಣಮುಖರಾಗದೇ 1936 ರಲ್ಲಿ ತೀರಿಕೊಂಡರು.ಆಗ ನೆಹರು ರವರಿಗೆ 47 ವರ್ಷ ವಯಸ್ಸಾಗಿತ್ತು. 1929ರಲ್ಲಿ ಕಾಂಗ್ರೆಸ್ಸಿನ ಅಧ್ಯಕ್ಷರಾಗಿ ಆಯ್ಕೆಯಾದರು.

1942ರಲ್ಲಿ ಕ್ವಿಟ್ ಇಂಡಿಯಾ ಚಳುವಳಿಯಲ್ಲಿ ಸಕ್ರಿಯವಾಗಿ ಎಲ್ಲಾ ಮುಖಂಡರ ಜೊತೆಯಲ್ಲಿ ಭಾಗವಹಿಸಿದರು. ಸ್ವಾತಂತ್ರ್ಯ ಹೋರಾಟದ ಫಲದಿಂದಾಗಿ,1947 ಆಗಸ್ಟ್ 15 ರಂದು ಭಾರತ ಸ್ವಾತಂತ್ರ್ಯ ಪಡೆಯಿತು. ಸ್ವತಂತ್ರ ಭಾರತದ ಪ್ರಥಮ ಪ್ರಧಾನಮಂತ್ರಿಯಾಗಿ ತನ್ನ 58 ನೇ ವಯಸ್ಸಿನಲ್ಲಿ ಸರ್ವಾನುಮತದಿಂದ ಆಯ್ಕೆಯಾಗಿ ಪ್ರಮಾಣವಚನ ಸ್ವೀಕರಿಸಿದರು. ಇವರು ಒಬ್ಬ ದಕ್ಷ ಆಡಳಿತಗಾರರು, ಬುದ್ಧಿಶಾಲಿ, ಕ್ರಿಯಾಶಾಲಿ, ತೀಕ್ಷ್ಣ ವಿಚಾರ ಮತಿ ಗಳಾಗಿದ್ದು,ವೈಜ್ಞಾನಿಕ, ಸೈದ್ಧಾಂತಿಕ, ವೈಚಾರಿಕ, ಇತಿಹಾಸ ಪ್ರಜ್ಞೆ ಉಳ್ಳವರಾಗಿ ಜಾಗತಿಕ ದೃಷ್ಟಿಕೋನ ಹೊಂದಿದ್ದ ಪ್ರತಿಭಾವಂತ ರಾಜಕಾರಣಿಯಾಗಿದ್ದರು.

ನೆಹರು ಅವರು ತಮ್ಮ ನೇರನುಡಿ,ದೂರದೃಷ್ಟಿ, ದಿಟ್ಟತನ, ಅಪಾರ ದೇಶಭಕ್ತಿ,ಜನಸಾಮಾನ್ಯರ ಕಲ್ಯಾಣಕ್ಕಾಗಿ ಕೈಗೊಂಡ ರಚನಾತ್ಮಕ ಕಾರ್ಯಗಳಿಂದಾಗಿ ಭಾರತೀಯ ಜನಮಾನಸದಲ್ಲಿ ಶಾಶ್ವತವಾಗಿ ಸ್ಥಾನಗಳಿಸಿದ್ದಾರೆ. ಭಾರತದ ಪ್ರಧಾನಮಂತ್ರಿಯಾಗಿ 17 ವರ್ಷಗಳ ಕಾಲ ರಾಷ್ಟ್ರವನ್ನು ಪ್ರಗತಿ ಪಥದಲ್ಲಿ ಮುನ್ನಡೆಸಿದರು.1955ರಲ್ಲಿ ಭಾರತ ಸರ್ಕಾರವು ನೆಹರುರವರ ಅನನ್ಯ ಪ್ರತಿಭೆ ಹಾಗೂ ದೂರದೃಷ್ಟಿಉಳ್ಳವರು ಈ ಗೌರವಕ್ಕೆ ಭಾರತ ರತ್ನ ಪ್ರಶಸ್ತಿ ನೀಡಿ ಗೌರವಿಸಿತು.

ನೆಹರೂರವರು ಭಾರತದ ಮಕ್ಕಳನ್ನು ಬಹುವಾಗಿ ಪ್ರೀತಿಸುತ್ತಿದ್ದರು. ಆದ್ದರಿಂದ ಅವರ ಹುಟ್ಟುಹಬ್ಬದ ದಿನವನ್ನು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸಬೇಕೆಂದು ಅವರ ಆತ್ಮಕಥೆಯಲ್ಲಿ ಪ್ರತಿ ಬಿಂಬಿಸಿರುತ್ತಾರೆ. ಆದ್ದರಿಂದ ರಾಷ್ಟ್ರಾದ್ಯಂತ ನೆಹರೂಜಿರವರ ಜನ್ಮ ದಿನವನ್ನು ಪ್ರತಿವರ್ಷ ನವಂಬರ್ 14 ರಂದು ಮಕ್ಕಳ ದಿನಾಚರಣೆಯನ್ನಾಗಿ ಆಚರಿಸುತ್ತಾ ಇಂದಿನ ಮಕ್ಕಳು ಮುಂದಿನ ಭವಿಷ್ಯದ ಪ್ರಜೆಗಳು. ಜಗತ್ತಿನಲ್ಲಿ ಶಕ್ತಿ ಬಣಗಳಿಗೆ ಸೇರದ ಅಲಿಪ್ತ ರಾಷ್ಟ್ರಗಳನ್ನು ಒಂದುಗೂಡಿಸಿ ಅವುಗಳ ಬಲವನ್ನು ವೃದ್ಧಿಸಲು ಶ್ರಮಿಸಿದರು.ಸಹಕಾರ, ಸಹಬಾಳ್ವೆಯನ್ನು ಸಾರುವ ಪಂಚಶೀಲ ಸೂತ್ರಗಳನ್ನು ಪ್ರತಿಪಾದಿಸಿದರು.ನೆಹರು ಭಾರತದ ಅಭಿವೃದ್ಧಿಗೆ ವಿಜ್ಞಾನ ಮತ್ತು ತಂತ್ರಜ್ಞಾನ ಅತ್ಯಗತ್ಯವೆಂದು ಸಾರಿ ಆ ನಿಟ್ಟಿನಲ್ಲಿ ಅನೇಕ ಯೋಜನೆಗಳನ್ನು ರೂಪಿಸಿ ಕಾರ್ಯಗತಗೊಳಿಸಿದರು. ಬೃಹತ್ ಕೈಗಾರಿಕೆಗಳು ಅಣೆಕಟ್ಟುಗಳ ನಿರ್ಮಾಣಕ್ಕೆ ಕಾರಣರಾಗಿ ಇವೇ ಭಾರತದ ನೂತನ ದೇವಾಲಯಗಳು, ರಾಷ್ಟ್ರೀಯ ಯಾತ್ರಾ ಸ್ಥಳಗಳು ಎಂದು ಸಾರಿದರು.

ಹೀಗಿರುವಲ್ಲಿ 1964 ಮೇ 27 ರಂದು ಭಾರತೀಯರ ನೆಚ್ಚಿನ ರಾಷ್ಟ್ರನಾಯಕ ಪ್ರಧಾನಮಂತ್ರಿ ನೆಹರು ಅವರು ವಯೋ ಸಹಜದಿಂದ ತಮ್ಮ 75 ನೇ ವಯಸ್ಸಿನಲ್ಲಿ ತೀರಿಕೊಂಡರು. ನೆಹರು ತೀರಿಹೋದ ಬಳಿಕ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಅವರು ಸ್ವತಂತ್ರ ಭಾರತದ ಒಬ್ಬ ಸರ್ವ ಶ್ರೇಷ್ಠ ಆಧುನಿಕ ಶಿಲ್ಪಿ ಮರೆಯಾದರೆಂದು ರಾಜ್ಯಸಭೆಯ ಸಂತಾಪ ಸೂಚನಾ ಪಟ್ಟಿಯಲ್ಲಿ ಪ್ರತಿಬಿಂಬಿಸಿರುತ್ತಾರೆ.

ಇಂದು ಅವರ 62 ನೇ ವರ್ಷದ ಪುಣ್ಯಸ್ಮರಣೆಯನ್ನು ಭಾರತೀಯರಾದ ನಾವುಗಳು ಅವರನ್ನು ಸ್ಮರಿಸಿ, ನೆನೆಯುತ್ತಾ ಅವರ ಆದರ್ಶಗಳನ್ನ ಪಾಲಿಸುವ ಸಂಕಲ್ಪ ಮಾಡೋಣ.

# ಪೈಲ್ವಾನರ ನಿದ್ರೆಯ ರಹಸ್ಯ

ಅಂತರಂಗದ ಮಾತು



ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು



**ಪೈಲ್ವಾನರ ದೈಹಿಕ ಶ್ರಮ ಸಾಮಾನ್ಯರಿಗಿಂತ ಹತ್ತರಷ್ಟು ಹೆಚ್ಚು.**


**ಆದ್ದರಿಂದ ದಣಿದ ಸ್ನಾಯುಗಳು ಪೂರ್ಣ ಚೇತರಿಸಿಕೊಳ್ಳಲು ದಿನಕ್ಕೆ ಕನಿಷ್ಠ ಎಂಟರಿಂದ ಒಂಬತ್ತು ಗಂಟೆಗಳ ಗಾಢ ನಿದ್ರೆ ಬೇಕು ಎನ್ನುತ್ತಿದ್ದರು ಹಿರಿಯ ಉಸ್ತಾದರು. ರಾತ್ರಿಯ ನಿದ್ರೆಗೆ ಮೊದಲ ಆದ್ಯತೆ, ಜೊತೆಗೆ ತೀವ್ರ ಕಸರತ್ತಿನ ದಿನಗಳಲ್ಲಿ ಮಧ್ಯಾಹ್ನದ ಒಂದು ಗಂಟೆಯ ವಾಮಕುಕ್ಷಿಯೂ ಸ್ನಾಯು ಬೆಳವಣಿಗೆಗೆ ಅಮೃತವಾಗುತ್ತದೆ.**

ಗರಡಿ ಮನೆಯ ತಾಲೀಮು ಎಂದೊಡನೆ ಬೆವರಿನ ಹನಿ ಮತ್ತು ಕಠಿಣ ಕಸರತ್ತುಗಳ ಚಿತ್ರ ಕಣ್ಮುಂದೆ ಬರುತ್ತದೆ. ಆದರೆ ವಜ್ರಕಾಯದ ಹಿಂದಿನ ದೊಡ್ಡ ರಹಸ್ಯ ವ್ಯಾಯಾಮದೊಂದಿಗೆ ಸಮರ್ಪಕ ನಿದ್ರೆ. ಆಧುನಿಕ ಕ್ರೀಡಾ ವಿಜ್ಞಾನ ಇದನ್ನು ಚೇತರಿಕೆ ಎಂದು ಕರೆದರೆ, ನಮ್ಮ ಪೂರ್ವಜ ಪೈಲ್ವಾನರಿಗೆ ನಿದ್ರೆ ಕೇವಲ ವಿಶ್ರಾಂತಿಯಲ್ಲ,ದೇಹವನ್ನು ಪುನರ್ನಿರ್ಮಿಸಿ ಅಪ್ರತಿಮ ಶಕ್ತಿಯನ್ನು ಮರುತುಂಬುವ ಪವಿತ್ರ ಕ್ರಿಯೆಯಾಗಿತ್ತು.

ಚಕ್ರದಂಡ,ಬೈಟಕ್ ನಡೆಸಿದಾಗ ಸ್ನಾಯುಗಳಲ್ಲಿ ಸೂಕ್ಷ್ಮ ಬಿರುಕುಗಳಾಗುತ್ತವೆ.ಗಾಢ ನಿದ್ರೆಯಲ್ಲಿ ದೇಹ ಬೆಳವಣಿಗೆಯ ರಸದೂತಗಳನ್ನು ಬಿಡುಗಡೆ ಮಾಡಿ ಆ ಬಿರುಕುಗಳನ್ನು ಮುಚ್ಚಿ ಸ್ನಾಯುಗಳನ್ನು ಕಲ್ಲಿನಂತೆ ಗಟ್ಟಿ ಮಾಡುತ್ತದೆ. ನಿದ್ರೆ ಕೊರತೆಯಾದರೆ ಸ್ನಾಯು ಕ್ಷೀಣಿಸಿ ಶಕ್ತಿ ಕುಸಿಯುತ್ತದೆ. ಅಖಾಡದ ನಿಜವೆಂದರೆ ಸ್ನಾಯು ಬೆಳೆಯುವುದು ವ್ಯಾಯಾಮದಲ್ಲಲ್ಲ, ನಿಶ್ಚಿಂತ ನಿದ್ರೆಯಲ್ಲಿ.ಬೇಗ ಮಲಗಿ ಬೇಗ ಏಳುವುದು ಪೈಲ್ವಾನರ ಮಂತ್ರ. ರಾತ್ರಿ ಎಂಟು ಗಂಟೆಗೆ ಮಲಗಿ ಬ್ರಾಹ್ಮೀ ಮುಹೂರ್ತದ ನಾಲ್ಕು ಗಂಟೆಗೆ ಎಚ್ಚರಗೊಳ್ಳುವ ಶಿಸ್ತು ನರಮಂಡಲಕ್ಕೆ ಅಮೋಘ ಶಕ್ತಿ ನೀಡುತ್ತದೆ. ತಡರಾತ್ರಿ ಎಚ್ಚರವಾಗಿ ಬೆಳಿಗ್ಗೆ ತಡವಾಗಿ ಏಳುವುದು ನಿಜವಾದ ಪೌರುಷಕ್ಕೆ ಪೆಟ್ಟು. ರಾತ್ರಿಯ ಮೊದಲಾರ್ಧದ ನಿದ್ರೆ ಮೆದುಳಿಗೆ ಅತ್ಯಂತ ಶ್ರೇಷ್ಠ.ಕುಸ್ತಿ ತೋಳ್ಬಲ ಮಾತ್ರವಲ್ಲ, ಕ್ಷಣಾರ್ಧದ ನಿರ್ಧಾರದ ಕಲೆ. ಸರಿಯಾದ ನಿದ್ರೆ ಮೆದುಳನ್ನು ಹರಿತವಾಗಿರಿಸಿ ತಾಳ್ಮೆ, ಏಕಾಗ್ರತೆ ಹೆಚ್ಚಿಸುತ್ತದೆ. ಪ್ರಶಾಂತ ನಿದ್ರೆಯ ಪೈಲ್ವಾನ ಎದುರಾಳಿಯ ನಡೆಯನ್ನು ಅರಿತು ಸಕಾಲದಲ್ಲಿ ಪಟ್ಟು ಹಾಕಿ ಗೆಲ್ಲುತ್ತಾನೆ.ಹಾಲು, ತುಪ್ಪ, ಬಾದಾಮಿ, ಮೊಳಕೆಕಾಳಿನ ಸಾರ ಸ್ನಾಯು ಸೇರಲು ದೇಹಕ್ಕೆ ಪೂರ್ಣ ವಿಶ್ರಾಂತಿ ಬೇಕು. ಗಾಢ ನಿದ್ರೆಯಲ್ಲಿ ಮಾತ್ರ ಜೀರ್ಣಾಂಗ ಸಾರ ಹೀರುತ್ತದೆ. ನಿದ್ರೆ ತಪ್ಪಿದರೆ ಜೀರ್ಣ ಕುಂಠಿತವಾಗಿ ಕೊಬ್ಬು ಸೇರುತ್ತದೆ. ಆದ್ದರಿಂದ ತಾಲೀಮು ಎಷ್ಟು ಮುಖ್ಯವೋ ತಾಳ್ಮೆಯ ವಿಶ್ರಾಂತಿಯೂ ಅಷ್ಟೇ ಮುಖ್ಯ ಎಂಬುದು ಗರಡಿಯ ನುಡಿ.

ಒತ್ತಡದ ಇಂದಿನ ಯುವ ಕ್ರೀಡಾಪಟುಗಳು ಈ ನಿದ್ರೆಯ ಶಿಸ್ತನ್ನು ಮೈಗೂಡಿಸಿಕೊಂಡರೆ ಸ್ನಾಯು ಬಲದ ಜೊತೆಗೆ ದೀರ್ಘ ಆಯುಷ್ಯವನ್ನೂ ಪಡೆಯುತ್ತಾರೆ. ನೆನಪಿರಲಿ, ಪೈಲ್ವಾನನ ಅಜೇಯ ಬಲ ಅಖಾಡದ ಮಣ್ಣಿನಷ್ಟೇ ಆತನ ನಿದ್ರೆಯ ಮೌನದಲ್ಲೂ ಅಡಗಿದೆ.

# ರಾಮಾಯಣ



## ತನ್ನ ಉದ್ದೇಶದಲ್ಲಿ ವಿಫಲನಾದ ರಾವಣನು ರಕ್ಕಸಿಯರಿಗೆ ಸೂಚನೆಯಿತ್ತು

• ಹಿಂದಿನ ಸಂಚಿಕೆಯಿಂದ 121ನೆಯ ಅಧ್ಯಾಯ

ಅನಂತರ ಶ್ರೀರಾಮನ ಸ್ತುತಿ ಮಾಡುವ ಮನುಷ್ಯರ ಮಾತುಗಳನ್ನು ಅನುಕರಿಸಿ ಕೊಂಬೆಯ ಮೇಲೆ ಕುಳಿತು ನೆಲವನ್ನು ನೋಡುತ್ತ, ''ಜನನಾಥ ಮಕುಟಮಣಿ ದಶರಥ ಮಹಾರಾಜನಿಗೆ ನಾಲ್ವರು ಪುತ್ರರು, ಅವರಲ್ಲಿ ಪರಬ್ರಹ್ಮನೇ ಆದ ಶ್ರೀರಾಮಚಂದ್ರನು ಸಕಲಸದ್ಗುಣಸಾಂದ್ರ ವಿಶ್ವಾಮಿತ್ರನು ದಶರಥನನ್ನು ಪ್ರಾರ್ಥಿಸಿಕೊಂಡು ಯಜ್ಞರಕ್ಷಣೆಗೆ ಲಕ್ಷ್ಮಣಸಹಿತವಾಗಿ ರಾಮನನ್ನು ಕರೆದೊಯ್ಯಲು, ಕಾಡಿನಲ್ಲಿ ತಾಟಕಿಯನ್ನು ಸಂಹರಿಸಿ, ಗೌತಮನ ಸತಿ ಅಹಲ್ಯೆಯನ್ನುದ್ಧರಿಸಿ, ಮಿಥಿಲೆಗೆ ಬಂದು ಹರಚಾಪವನ್ನು ಮುರಿದು ಜನಕಜೆಯ ಕೈಹಿಡಿದು, ಪರಶುರಾಮನನ್ನು ಧಿಕ್ಕರಿಸಿ ಅಯೋಧ್ಯೆಗೆ ಬಂದು ಸುಖದಿಂದಿರಲು, ತಂದೆಯು ಮಗನ ಮೇಲಿನ ಅತಿಶಯ ಪ್ರೇಮದಿಂದ ಯುವರಾಜಪಟ್ಟವನ್ನು ಕಟ್ಟಲು ಸಿದ್ಧನಾದ; ಕೈಕೇಯಿಯು ಎರಡು ವರಗಳನ್ನು ಬೇಡಲು ರಘುವರನು ಧರ್ಮಮಾರ್ಗವನ್ನು ಹಿಡಿದು ಜಾನಕಿಸೌಮಿತ್ರಿಯರೊಡನೆ ವನವಾಸಕ್ಕೆಂದು ಹೊರಟು ಗಂಗೆಯ ದಡದಲ್ಲಿ ಗುಹನನ್ನು ಗೌರವಿಸಿ, ಸುಮಂತ್ರನನ್ನು ಬೀಳ್ಕೊಟ್ಟ ಅನಂತರ ಅಲ್ಲಿಂದ ಭರದ್ವಾಜಾಶ್ರಮಕ್ಕೆ ಬಂದು ಚತ್ರಕೂಟಾದ್ರಿಯಲ್ಲಿ ಕೆಲವು ಆ ಬಳಿಕ ಅಗಸ್ತ್ಯನ ಆಶ್ರಮದ ಕಡೆಗೆ ಪಯಣ ಬೆಳೆಸಿ, ಬಿಲ್ಲುಬಾಣಗಳನ್ನು ಹಿಡಿದು ಅರಣ್ಯದಲ್ಲಿ ಸಂಚರಿಸುತ್ತ ಅತ್ರಿಮುನಿಯನ್ನು ಕಂಡು ಶರಭಂಗನೇ ಮೊದಲಾದವರನ್ನು ಸಂತಸಪಡಿಸಿ ಗೋದಾವರಿಯ ತೀರದ ಪಂಚವಟಿಗೆ ಹೋಗಿ, ತನ್ನನ್ನು ಮೋಹಿಸಿ ಬಂದ ರಾವಣನ ತಂಗಿ ಶೂರ್ಪಣಖಿಯ ಕಿವಿಮೂಗು ಕತ್ತರಿಸಿದುದನ್ನು ಕೇಳಿ ಯುದ್ಧಕ್ಕೆ ಬಂದ ಖರದೂಷಣತ್ರಿಶಿರರನ್ನು ಕೊಂದ ವಿಷಯವನ್ನು ಅಕಂಪನನಿಂದ ತಿಳಿದ ರಾವಣನು ಕೋಪದಿಂದ ಮಾರೀಚನನ್ನು ಹೊನ್ನ ಜಿಂಕೆಯ ರೂಪದಲ್ಲಿ ಕಳಿಸಿ, ಸೀತೆಗಾಗಿ ಅದನ್ನು ಹಿಡಿದು ತರಲು ರಾಘವನು ಹೋಗಲು, ಇತ್ತ ರಾವಣನು ಭಿಕ್ಷುವೇಷದಿಂದ ಕದ್ದೊಯ್ಯುವ ಮಾರ್ಗದಲ್ಲಿ ಜಟಾಯುವನ್ನು ಬಡಿದು ಮುಂದೆ ಸಾಗಲು, ಶ್ರೀರಾಮನು ಮಾರೀಚನನ್ನು ಕೊಂದು ಆಶ್ರಮಕ್ಕೆ ಬಂದು ಸೀತೆಯನ್ನು ಕಾಣದೆ ದುಃಖದಿಂದ ಹುಡುಕಿಕೊಂಡು ಬರುತ್ತಿರಲು ಜಟಾಯುವಿನಿಂದ ಸುದ್ದಿ ತಿಳಿದು, ಆತನಿಗೆ ಸದ್ಗತಿಯನ್ನೊದಗಿಸಿ, ಕಬಂಧನ ಮಾತನಂತೆ ಸುಗ್ರೀವನ ಸಖ್ಯವನ್ನು ಸಂಪಾದಿಸಿ, ಆತನು ಶತಕೋಟಿ ಸಾವಿರ ವಾನರರನ್ನು ಕಳುಹಿಸಲು ಎಲ್ಲರೂ ಸೀತೆಗಾಗಿ ಹುಡುಕುತ್ತಿರಲು, ನಾನೊಬ್ಬನೇ ಸಮುದ್ರವನ್ನು ದಾಟಿ ಬಂದು ಲಂಕೆಯಲ್ಲಿ ಹುಡುಕಿ ಕಾಣದೆ ಈ ಸುಂದರ ವನವನ್ನು ಹೊಕ್ಕೆ; ಧೀರ ರಘುವೀರನು ಆಜ್ಞಾಪಿಸಿದಂತೆ ಸಲ್ಲಕ್ಷಣಗಳಿಂದ ಕೂಡಿದ ನಿಮ್ಮನ್ನು ಕಂಡು ರಾಮನೂಳಿಗ ಸಾರ್ಥಕವಾಯಿತು ಎಂದು ರಾಮನ ಚಾರುಚರಿತ್ರೆಯನ್ನು ಸ್ತುತಿಸಿ ಸುಮ್ಮನಾದ. ಇದನ್ನೆಲ್ಲ ಕೇಳಿದ ಧಾರಿಣೀಸುತೆಯ ಮನಸ್ಸು ಸಂತೋಷಸಾಗರದಲ್ಲಿ ಓಲಾಡಿತು ಆದರೂ ಬೆದರಿಕೆಯಿಂದ ಸುತ್ತಲೂ ನೋಡಿ, ವಿಸ್ಮಯದಿಂದ ಮರದ ತುದಿಯನ್ನು ನಿಟ್ಟಿಸಿದಳು ಅಲ್ಲಿ ಬಿಳಿಯ ಬಟ್ಟೆಯನ್ನುಟ್ಟ ತೇಜೋವಂತನಾದ ಚದುರಕಪಿಯನ್ನು ನೋಡಿ ಅಚ್ಚರಿಗೊಂಡಳು. ಹಿತಕರವಾದ ಅವನ ನುಡಿಗಳನ್ನು ಕೇಳಿ ಹಿಗ್ಗಿದ ಸೀತೆಯು ಹೊಳೆಯುವ ಕಣ್ಣುಗಳ ಕಪಿಧೀರನನ್ನು ನೋಡಿ ಭಯದಿಂದ, ವಾನರನಿಗೆ ಈ ಮಹಾದೇಹ ಹೇಗೆ ಉಂಟಾದೀತು ಎಂದು ಅನುಮಾನಿಸುತ್ತ, ಇದು ಕನಸಿರಬೇಕು ಎಂದುಕೊಂಡು ನೆಲವನ್ನು ನೋಡುತ್ತ ಯೋಚಿಸಿದಳು

''ನನಗೆ ಈ ಕೆಟ್ಟ ಕನಸೇಕೆ ಬಿತ್ತು ಸ್ವಪ್ನದಲ್ಲಿ ವಾನರನು ಕಾಣಿಸುವುದು ನಿಷಿದ್ಧ, ಸೂರ್ಯಕುಲದರಸನಾದ ದಶರಥ ಜನಕರ ಕ್ಷೇಮವನ್ನು ಹೇಗೆ ಕೇಳಿದೆ?' ಎಂದು ಅದರ ಸಾಧಕಬಾಧಕಗಳ ಬಗ್ಗೆ ಚಿಂತಿಸುತ್ತ ಬೇಸರ-ಅಳಲುಗಳು ಮುತ್ತಿಕೊಂಡು ತೊಳಲಿ ಬಳಲಿದಳು.

ಮುಂದುವರೆಯುವುದು

# ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಟಿಕೆಎಂ ಬಿಜಿಂಟೆಲ್ ಹಬ್ ಅನ್ನು ಸ್ಥಾಪಿಸಲು ಕರ್ನಾಟಕ ಸರ್ಕಾರದೊಂದಿಗೆ ಕಾರ್ಯತಂತ್ರದ ಒಪ್ಪಂದಕ್ಕೆ ಸಹಿ ಹಾಕಿದೆ

• ಉದಯವಾಹಿನಿ, ಬೆಂಗಳೂರು



ಟೊಯೊಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ) ಇಂದು ಬೆಂಗಳೂರಿನ ಕೆವಿಐಎನ್ ಸಿಟಿಯಲ್ಲಿ ಟಿಕೆಎಂ ಬಿಜಿಂಟೆಲ್ ಹಬ್ ಅನ್ನು ಸ್ಥಾಪಿಸುವ ಮೂಲಕ ಭಾರತದಲ್ಲಿ ತನ್ನ ಕಾರ್ಯಾಚರಣೆಯನ್ನು ವಿಸ್ತರಿಸಲು ಕರ್ನಾಟಕ ಸರ್ಕಾರದೊಂದಿಗೆ ತಿಳಿವಳಿಕೆಯ ಒಪ್ಪಂದಕ್ಕೆ ಸಹಿ ಹಾಕುವುದಾಗಿ ಘೋಷಿಸಿದೆ. ಈ ಉಪಕ್ರಮವು ಇಂಜಿನಿಯರಿಂಗ್ ಸಾಮರ್ಥ್ಯಗಳು ಮತ್ತು ಡಿಜಿಟಲ್ ನಾವೀನ್ಯತೆಯನ್ನು ಬಲಪಡಿಸಲು ಬಲವಾದ ಸಹಯೋಗ ಮತ್ತು ಸಮಾನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಕರ್ನಾಟಕದ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ ಸಿದ್ದರಾಮಯ್ಯನವರು, ಕರ್ನಾಟಕ ಸರ್ಕಾರದ ಭಾರಿ ಮತ್ತು ಮಧ್ಯಮ ಕೈಗಾರಿಕಾ ಸಚಿವರಾದ ಡಾ. ಎಂ.ಬಿ. ಪಾಟೀಲರು ಹಾಗೂ ಇತರ ಹಿರಿಯ ಸಚಿವರು ಮತ್ತು ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ, ಜೊತೆಗೆ ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನ ಹಿರಿಯ ಅಧಿಕಾರಿಗಳ ಉಪಸ್ಥಿತಿಯಲ್ಲಿ, ಒಪ್ಪಂದ ಪತ್ರಕ್ಕೆ ಸಹಿ ಮಾಡಲಾಯಿತು.

300 ಎಕರೆಗಳಲ್ಲಿ ವ್ಯಾಪಿಸಿರುವ ಪ್ರಸ್ತಾವಿತ ಟಿಕೆಎಂ ಬಿಜಿಂಟೆಲ್ ಹಬ್ ಚಲನಶೀಲತೆ ಪರಿಹಾರಗಳ ಪರೀಕ್ಷೆ ಮತ್ತು ಮೌಲ್ಯಮಾಪನ, ಎಲ್ಲಾ ವ್ಯವಹಾರ ಕಾರ್ಯಾಚರಣೆಗಳಲ್ಲಿ ಡಿಜಿಟಲ್ ರೂಪಾಂತರ ಮತ್ತು ಜಾಣ ಉತ್ಪಾದನಾ ಉಪಕ್ರಮಗಳ ಅನುಷ್ಠಾನವೂ ಸೇರಿದಂತೆ ಇಡೀ ಮೌಲ್ಯ ಸರಪಳಿಯ ಒಟ್ಟಾರೆ ಸ್ಪರ್ಧಾತ್ಮಕತೆಯನ್ನು ಹೆಚ್ಚಿಸಲು ಅನೇಕ ಕಾರ್ಯತಂತ್ರದ ಉದ್ದೇಶಗಳನ್ನು ಅನುಸರಿಸುತ್ತದೆ.

ದೇಶದ ದೃಢವಾದ ನುರಿತ ಇಂಜಿನಿಯರಿಂಗ್ ಮಾನವಶಕ್ತಿ ಮತ್ತು ಮಾಹಿತಿ ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಬಳಸಿಕೊಳ್ಳುವ ಮೂಲಕ ಮುಂದಿನ ದಿನಗಳಲ್ಲಿ ಟೊಯೊಟಾದ ಜಾಗತಿಕ ದೃಷ್ಟಿಕೋನದಲ್ಲಿ ಭಾರತವನ್ನು ಪ್ರಮುಖ ಸ್ಥಾನಕ್ಕೆ ತರುವ ನಿರೀಕ್ಷೆಯಿದೆ.

ಕರ್ನಾಟಕ ಸರ್ಕಾರದ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ. ಸಿದ್ದರಾಮಯ್ಯನವರು ಮಾತನಾಡಿ ಹೇಳಿದರು, ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಕರ್ನಾಟಕದ ಬೆಳವಣಿಗೆಯ ಪಯಣದಲ್ಲಿ ವಿಶ್ವಾಸಾರ್ಹ ದೀರ್ಘಕಾಲೀನ ಪಾಲುದಾರನಾಗಿದೆ. ತಂತ್ರಜ್ಞಾನ ಆಧಾರಿತ ಹೂಡಿಕೆಯನ್ನು ಹೆಚ್ಚಿಸಲು, ಗುಣಮಟ್ಟದ ಉದ್ಯೋಗ ಸೃಷ್ಟಿಸಲು ಮತ್ತು ಸುಸ್ಥಿರ ಕೈಗಾರಿಕಾ ಅಭಿವೃದ್ಧಿಯನ್ನು ಉತ್ತೇಜಿಸಲು ನಾವು ಒಗ್ಗೂಡಿ ಶ್ರಮಿಸುತ್ತಿರುವುದರಿಂದ ಈ ತಿಳಿವಳಿಕೆಯ ಒಪ್ಪಂದವು ಮತ್ತೊಂದು ಮಹತ್ವದ ಮೈಲಿಗಲ್ಲಾಗಿದೆ. ಈ ಪಾಲುದಾರಿಕೆಯು ಜಾಗತಿಕ ಹೂಡಿಕೆ ತಾಣವಾಗಿ ಕರ್ನಾಟಕದ ನಾಯಕತ್ವವನ್ನು ಮತ್ತಷ್ಟು ಬಲಪಡಿಸುತ್ತದೆ ಮತ್ತು ನಾವೀನ್ಯತೆ-ಚಾಲಿತ ಬೆಳವಣಿಗೆಗೆ ನಮ್ಮ ಬದ್ಧತೆಯನ್ನು ಬಲಪಡಿಸುತ್ತದೆ.

ಈ ಸಂದರ್ಭದಲ್ಲಿ ಮಾತನಾಡಿದ ಟೊಯೊಟಾ ಕಿರ್ಲೋಸ್ಕರ್ ಮೋಟಾರ್ಸ್‌ನ ಅಧ್ಯಕ್ಷರು, ವ್ಯವಸ್ಥಾಪಕ ನಿರ್ದೇಶಕರು ಮತ್ತು ಸಿಇಒ ಶ್ರೀ ಮಸಕಾಜು ಯೊಶಿಮುರಾ, ಹೇಳಿದರುನಮ್ಮ ಪ್ರಯಾಣದಲ್ಲಿ ಪ್ರಮುಖ ಪಾತ್ರ ವಹಿಸಿದ ಕರ್ನಾಟಕ ಸರ್ಕಾರದ ನಿರಂತರ ಬೆಂಬಲ ಮತ್ತು ಸಹಯೋಗಕ್ಕಾಗಿ ನಾವು ಕೃತಜ್ಞರಾಗಿರುತ್ತೇವೆ. ನಾವೀನ್ಯತೆ ಮತ್ತು ಸುಸ್ಥಿರ ಚಲನಶೀಲತೆಯ ಉಪಕ್ರಮಗಳಿಗೆ ಚಾಲನೆ ನೀಡಲು ಟೊಯೊಟಾಗೆ ಭಾರತವು ಯಾವಾಗಲೂ ವ್ಯೂಹಾತ್ಮಕವಾಗಿ ಪ್ರಮುಖ ಮಾರುಕಟ್ಟೆಯಾಗಿದೆ. ಟಿಕೆಎಂ ಬಿಜಿಂಟೆಲ್ ಹಬ್ ಪರೀಕ್ಷೆ ಮತ್ತು ಮೌಲ್ಯಮಾಪನ ಚಟುವಟಿಕೆಗಳು, ಡಿಜಿಟಲ್ ರೂಪಾಂತರದಲ್ಲಿನ ಪ್ರಗತಿ ಮತ್ತು ಇಡೀ ಪೂರೈಕೆ ಸರಪಳಿ ವ್ಯವಹಾರದಾದ್ಯಂತ ಬುದ್ಧಿವಂತ ಉತ್ಪಾದನೆಯನ್ನು ಬೆಂಬಲಿಸುತ್ತ,

ನುರಿತ ಪ್ರತಿಭೆಗಳೊಂದಿಗೆ ಭಾರತದ ದೃಢವಾದ ಮಾಹಿತಿ ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಬಳಸಿಕೊಳ್ಳುತ್ತದೆ. ಸ್ಥಳೀಕರಣ ಮತ್ತು ಜವಾಬ್ದಾರಿಯುತ ಬೆಳವಣಿಗೆಯ ಮೇಲೆ ಟಿಕೆಎಂನ ಗಮನವನ್ನು ಕೇಂದ್ರೀಕರಿಸಿದ ಈ ಉಪಕ್ರಮವು ಇಂಗಾಲದ ತಟಸ್ಥತೆಯ ಗುರಿಗಳನ್ನು ಸಾಧಿಸುವ ಮತ್ತು ಮೇಕ್ ಇನ್ ಇಂಡಿಯಾ ಮತ್ತು ಆತ್ಮನಿರ್ಭರ ಭಾರತದಂತಹ ರಾಷ್ಟ್ರೀಯ ಆದ್ಯತೆಗಳನ್ನು ಪೂರೈಸುವ ನಿಟ್ಟಿನಲ್ಲಿ ಕಂಪನಿಯ ಬಹುಮಾರ್ಗದ ವಿಧಾನದೊಂದಿಗೆ ಹೊಂದಿಕೆಯಾಗುತ್ತದೆ.

ಈ ಪಾಲುದಾರಿಕೆಯ ಮೂಲಕ, ಟೊಯೊಟಾ ಕಿರ್ಲೋಸ್ಕರ್ ಮೋಟಾರ್ ಮತ್ತು ಕರ್ನಾಟಕ ಸರ್ಕಾರವು ಸುಸ್ಥಿರ ಆರ್ಥಿಕ ಬೆಳವಣಿಗೆ ಮತ್ತು ನಾವೀನ್ಯತೆ-ನೇತೃತ್ವದ ಉದ್ಯೋಗ ಸೃಷ್ಟಿಯನ್ನು ಬೆಂಬಲಿಸುತ್ತ ಕಾರ್ಯತಂತ್ರದ ತಂತ್ರಜ್ಞಾನ ಹೂಡಿಕೆ ಮತ್ತು ಭವಿಷ್ಯಕ್ಕೆ ಸಿದ್ಧವಾದ ಪ್ರತಿಭೆಗಳಿಗೆ ಪ್ರಮುಖ ತಾಣವಾಗಿ ರಾಜ್ಯದ ಸ್ಥಾನವನ್ನು ಮತ್ತಷ್ಟು ಬಲಪಡಿಸುವ ಗುರಿಯನ್ನು ಹೊಂದಿದೆ.ನುರಿತ ಪ್ರತಿಭೆಗಳೊಂದಿಗೆ ಭಾರತದ ದೃಢವಾದ ಮಾಹಿತಿ ತಂತ್ರಜ್ಞಾನ ಪರಿಸರ ವ್ಯವಸ್ಥೆಯನ್ನು ಬಳಸಿಕೊಳ್ಳುತ್ತದೆ.

ದೊಡ್ಡಬಳ್ಳಾಪುರ-ದಾಬಸ್ಪೇಟೆ ಹೆದ್ದಾರಿಯ ಉದ್ದಕ್ಕೂ ಕೆವಿಐಎನ್ (ಜ್ಞಾನ, ಯೋಗಕ್ಷೇಮ ಮತ್ತು ನಾವೀನ್ಯತೆ) ನಗರವು ಟಿಕೆಎಂ ಬಿಜಿಂಟೆಲ್ ಹಬ್ ನ ಉದ್ದೇಶಿತ ಸ್ಥಳವಾಗಿದೆ, ಇದು ನಾವೀನ್ಯತೆ, ಆರೋಗ್ಯ ರಕ್ಷಣೆ ಮತ್ತು ಮಾಹಿತಿ ತಂತ್ರಜ್ಞಾನದ ಮೇಲೆ ಬಲವಾದ ಗಮನವನ್ನು ಕೇಂದ್ರೀಕರಿಸಿ ಕರ್ನಾಟಕ ಸರ್ಕಾರವು ಅಭಿವೃದ್ಧಿಪಡಿಸುತ್ತಿರುವ ಸಮಗ್ರ ಸ್ಮಾರ್ಟ್ ಸಿಟಿ ಉಪಕ್ರಮವಾಗಿದೆ.

# ಶೌಚಾಲಯ ಹೆಸರಿನಲ್ಲಿ ಲಕ್ಷ ಲಕ್ಷ ಹಣ ಲೂಟಿ ಹೊಡೆದ ಪಿಡಿಒ ದತ್ತಾತ್ರಿ ಪಾಟೀಲ್

## ಸರ್ಕಾರದ ಕೋಟ್ಯಾಂತರ ರೂಪಾಯಿ ಹಣ ಅಧಿಕಾರಿಗಳ ಪಾಲು ಅಂಗವಿಕಲರ ಶೌಚಾಲಯ ನಿರ್ಮಾಣ ಮಾಡದೆ ಅಂಗವಿಕಲ ಪಿಡಿಒ ಹಣ ಗುಳುಂ

- ಪರಮೇಶ.ಡಿ.ವಿಳಸಪೂರೆ
- ಉದಯವಾಹಿನಿ ಬೀದರ್:



ಉದಯವಾಹಿನಿ ಚಿತ್ರ

ಔರಾದ್ ತಾಲ್ಲೂಕಿನ ಬಾದಲಗಾಂವ ಗ್ರಾಮ ಪಂಚಾಯಿತಿಯ ಆವರಣದಲ್ಲಿ ದೈಹಿಕ ಅಂಗವಿಕಲರ ಶೌಚಾಲಯ ನಿರ್ಮಾಣ ಮಾಡಲಾಗಿದೆ ಎಂದು 2023 ಸೆಪ್ಟೆಂಬರ್ 13 ರಂದು ಬಾಬು ಕಿಶನ್ ಎಂಬುವರ ಖಾತೆಗೆ ನೇರವಾಗಿ 1,91,216 ರೂಪಾಯಿ ಹಣವನ್ನು ವರ್ಗಾವಣೆ ಮಾಡಿ, ಅಂಗವಿಕಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪಾಟೀಲ್ ಅವರು ಲಕ್ಷಾಂತರ ರೂಪಾಯಿ ಹಣವನ್ನು ಕೊಳೆ ಹೊಡೆದಿದ್ದಾರೆ.

ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಗ್ರಾಮಗಳಲ್ಲಿನ ಶಾಲೆಗಳಲ್ಲಿ ಶೌಚಾಲಯ ದುರಸ್ತಿ ಮಾಡಲಾಗಿದೆ ಎಂದು ಸುಳ್ಳು ದಾಖಲೆ ಸೃಷ್ಟಿಸಿ ಪಿಡಿಒ ದತ್ತಾತ್ರಿ ಪಾಟೀಲ್ ಅವರ ಅವಧಿಯಲ್ಲಿ ಲಕ್ಷಾಂತರ ರೂಪಾಯಿ ಹಣ ಲೂಟಿ ಹೊಡೆಯಲಾಗಿದೆ. ಕ್ರಿಯಾ ಯೋಜನೆಯಂತೆ ಕಾಮಗಾರಿ ಅನುಷ್ಠಾನಗೊಳ್ಳದೇ ಸುಳ್ಳು ದಾಖಲೆ ಸೃಷ್ಟಿಸಿ ಬಿಲ್ ಮಾಡಿರುವುದು ಬಹಿರಂಗವಾಗಿದೆ.

15ನೇ ಹಣಕಾಸು ಯೋಜನೆಯಡಿ ಬಾದಲಗಾಂವ ಗ್ರಾಮ ಪಂಚಾಯಿತಿ ಎಲ್ಲಾ ಗ್ರಾಮಗಳಲ್ಲಿನ ಶೌಚಾಲಯ ದುರಸ್ತಿಗಾಗಿ ಹಣ ಲೂಟಿ ಮಾಡಿರುವುದು ಬೆಳಕಿಗೆ ಬಂದಿದೆ ಆದರೆ ಈ ಪಂಚಾಯಿತಿ ವ್ಯಾಪ್ತಿಗೆ ಬರುವ ಯಾವುದೇ ಗ್ರಾಮಗಳಲ್ಲಿ ಸಾರ್ವಜನಿಕ ಶೌಚಾಲಗಳೇ ಇಲ್ಲಾ ಆದರೆ ಚಾಣಾಕ್ಷತೆ ಹೊಂದಿರುವ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಈ ಪದಕ್ಕೂ ಕೂಡ ಅರ್ಹನಲ್ಲದ ಪಿಡಿಒ ದತ್ತಾತ್ರಿ ಪಾಟೀಲ್ ಶೌಚಾಲಯ ದುರಸ್ತಿ ಮಾಡಿರುವ ಬಗ್ಗೆ ಸುಳ್ಳು ಬಿಲ್ ಸೃಷ್ಟಿಸಿ ಲಕ್ಷಾಂತರ ರೂಪಾಯಿ ಹಣ ಜೇಬಿಗೆ ಸೇರಿಸಿಕೊಂಡಿರುವುದು ಸರಿಯಲ್ಲ ಇದರ ಬಗ್ಗೆ ತನಿಖೆ ನಡೆಸಿ ಅವರನ್ನು ಅಮಾನತು ಮಾಡಬೇಕು ಎಂದು ಸ್ಥಳೀಯರು ಪಟ್ಟು ಹಿಡಿದಿದ್ದಾರೆ.

**ಪಾವತಿ ವೋಚರ್ ವಿವರ**






ಉದಯವಾಹಿನಿ ಚಿತ್ರ

2023-2025 ರ ವರೆಗೆ ಬಾದಲಗಾಂವ ಗ್ರಾಮ ಪಂಚಾಯಿತಿಯ 15ನೇ ಹಣಕಾಸು ಯೋಜನೆಯ ಲಕ್ಷಾಂತರ ರೂಪಾಯಿ ಹಣವನ್ನು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪಾಟೀಲ್ ಬೇಕಾಬಿಟ್ಟಿ ಲೂಟಿ ಮಾಡಿರುವುದು ಬೆಳಕಿಗೆ ಬಂದಿದ್ರೂ, ಮೇಲಾಧಿಕಾರಿಗಳು ಯಾವುದೇ ರೀತಿಯಲ್ಲಿ ಅವರ ಕ್ರಮಕ್ಕೆಗೊಳ್ಳದೇ ಜಾಣ ಕುರುಡರಂತೆ ವರ್ತಿಸುತ್ತಿದ್ದಾರೆ ಎಂದು ಅಲ್ಲಾಪೂರ ಗ್ರಾಮಸ್ಥ ಪ್ರಕಾಶ್ ಕಾಂಬ್ಳೆ ಉದಯವಾಹಿನಿಗೆ ತಿಳಿಸಿದ್ದಾರೆ.

> ಸರ್ಕಾರಕ್ಕೆ ಸತ್ಯ ತಿಳಿಯಲಿ 15ನೇ ಹಣಕಾಸು ಯೋಜನೆಯಡಿ ಗ್ರಾಮ ಪಂಚಾಯಿತಿಗೆ ಮೀಸಲಿಟ್ಟ ಅನುದಾನದಲ್ಲಿ ಅನೇಕ ಕಾಮಗಾರಿಗಳ ಬಗ್ಗೆ ಸುಳ್ಳು ದಾಖಲೆ ಸೃಷ್ಟಿಸಿ ಅನುದಾನ ದುರ್ಬಳಕೆ ಆಗಿರುವುದು ಪ್ರಶ್ನಾರ್ಹ ಸಂಗತಿ. ಕಾಮಗಾರಿ ಮಾಡದೆ ಬಿಲ್ ಮಾಡಿ ಲಕ್ಷಾಂತರ ರೂ. ಅಕ್ರಮ ಎಸಗಲಾಗಿದೆ. ದಾಖಲೆ, ಸ್ಥಳ, ವಾಸ್ತವಾಂಶ ಕುರಿತು ಸತ್ಯ ತಿಳಿಯಲು ಸರಕಾರ ತಕ್ಷಣ ತನಿಖೆ ನಡೆಸಲಿ -ಅನೀಲ್ ರೆಡ್ಡಿ
> ಮಮದಾಪೂರ ನಿವಾಸಿ

> ಬಾದಲಗಾಂವ ಗ್ರಾಮ ಪಂಚಾಯಿತಿಯಲ್ಲಿ ನಡೆದಿರುವ ಸಂಪೂರ್ಣ ಅವ್ಯವಹಾರ ಕುರಿತು ಈಗಾಗಲೇ ತನಿಖೆಗೆ ಆದೇಶಿಸಿದ್ದೇನೆ. ಅನುದಾನ ಬಳಕೆಯಲ್ಲಿ ಆಗಿರುವ ಲೋಪಗಳ ಕ್ರಿಯಾಯೋಜನೆ, ತಾಂತ್ರಿಕ ಅಂದಾಜು ಪಟ್ಟಿ, ಕಾಮಗಾರಿ ಅನುಷ್ಠಾನ ವರದಿ, ಸ್ಥಳ ಪರಿಶೀಲಿಸಿ, ಅವ್ಯವಹಾರ ನಡೆದಿರುವುದು ಕಂಡು ಬಂದರೆ ತಕ್ಷಣ ಕ್ರಮ ಕೈಗೊಳ್ಳಲಾಗುವುದು. -ಕೀರಣ್ ಪಾಟೀಲ್
> ತಾಲ್ಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ

**ಶೌಚಾಲಯ ದುರಸ್ತಿಗಾಗಿ ಹಣ 3 ಲಕ್ಷ ದುರ್ಬಳಕೆ:**

ಬಾದಲಗಾಂವ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಶಾಲೆಗಳಲ್ಲಿನ ಶೌಚಾಲಯ ದುರಸ್ತಿ ದುರಸ್ತಿಗಾಗಿ 2023-25 ರ ವರೆಗೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪಾಟೀಲ್ ಅವರ ಅವಧಿಯಲ್ಲಿ ಯಾವುದೇ ಶಾಲೆಗಳಲ್ಲಿನ ಶೌಚಾಲಯಕ್ಕೆ ನಯಾ ಪೈಸೆ ಹಣ ಖರ್ಚು ಮಾಡದೆ 3 ಲಕ್ಷ ಹಣ ದುರ್ಬಳಕೆ ಮಾಡಿಕೊಂಡಿದ್ದಾರೆ.


**ಇಲ್ಲದ ಶೌಚಾಲಯ ದುರಸ್ತಿಗೆ 2ಲಕ್ಷ ಹಣ ದುರ್ಬಳಕೆ:**

ಪಂಚಾಯಿತಿ ಆವರಣದಲ್ಲಿ ದೈಹಿಕ ಅಂಗವಿಕಲರ ಶೌಚಾಲಯ ನಿರ್ಮಾಣ ಮಾಡದೆ ಲಕ್ಷಾಂತರ ರೂಪಾಯಿ ಹಣ ಲೂಟಿ ಮಾಡಿರುವುದರ ಜೊತೆಗೆ ಅದೇ ದೈಹಿಕ ಅಂಗವಿಕಲರ ಶೌಚಾಲಯ ದುರಸ್ತಿ ಮಾಡಲಾಗಿದೆ ಎಂದು ನಕಲಿ ಫೋಟೋ ದಾಖಲೆ ಸೃಷ್ಟಿಸಿ ಒಂದೇ ವರ್ಷದಲ್ಲಿ 2ಲಕ್ಷ ಹಣ ಲೂಟಿ ಮಾಡಿರುವುದು ಬೆಳಕಿಗೆ ಬಂದಿದೆ.

## ಮಿನಿ ನ್ಯೂಸ್

### ಸಿಲಿಂಡರ್ ವಿತರಣೆ ಸರಾಗ, ಗ್ರಾಹಕರು ನಿಟ್ಟುಸಿರು

- ಉದಯವಾಹಿನಿ ಆಲೂರು:



ಉದಯವಾಹಿನಿ ಚಿತ್ರ

ವಾರದಿಂದ ಅಡುಗೆ ಅನಿಲ ಸಿಲಿಂಡರ್ ಪಡೆಯಲು ಗ್ರಾಹಕರ ಗೋಳು ಹೇಳತೀರದಾಗಿತ್ತು ಸೋಮವಾರದಿಂದ ಬಹುತೇಕ ತೊಂದರೆ ನಿವಾರಣೆಯಾಗಿದೆ.15 ದಿನಗಳಿಂದ ಗ್ಯಾಸ್ ವಿತರಣೆಯಲ್ಲಿ ಭಾರಿ ವ್ಯತ್ಯಾಸ ಉಂಟಾಗಿದ್ದು, ಗ್ರಾಹಕರು ಸಿಲಿಂಡರ್ ಪಡೆಯಲು ಭಾರಿ ಪ್ರಯತ್ನ ಪಡುತ್ತಿದ್ದರು. ಅನೇಕ ಸಂದರ್ಭಗಳಲ್ಲಿ ಗ್ರಾಹಕರು ಮತ್ತು ಗ್ಯಾಸ್ ಏಜೆನ್ಸಿ ಸಿಬ್ಬಂದಿ ಮಧ್ಯೆ ಮಾತಿನ ಚಕಮಕಿ, ಪ್ರತಿಭಟನೆಯೂ ನಡೆಯಿತು.

ಗ್ರಾಹಕರು ಕೋಪಗೊಂಡು ಏಜೆನ್ಸಿ ಸಿಬ್ಬಂದಿ ವಿರುದ್ಧ ಹರಿಹಾಯ್ದರು. ಗ್ರಾಹಕರ ಒಟಿಪಿ ಪಡೆದು ಗ್ಯಾಸ್ ಸಿಲಿಂಡರ್‌ಗಳನ್ನು ಇತರರಿಗೆ ಮಾರಾಟ ಮಾಡಿಕೊಂಡಿದ್ದಾರೆ. ಈಗ ಕೇಳಿದರೆ ನಮಗೆ ಸಿಲಿಂಡರ್ ಕೊಡುತ್ತಿಲ್ಲ. ನಾಳೆ, ನಾಡಿದ್ದು ಎಂದು ಸಬೂಬು ಹೇಳಿ ವಾಪಸ್ ಕಳುಹಿಸುತ್ತಿದ್ದಾರೆ ಎಂದು ಗ್ರಾಹಕರು ಆರೋಪಿಸಿದ್ದರು.ಈಗ ತಕ್ಷಣ ಕೊಡುತ್ತಿದ್ದಾರೆ. ಗ್ರಾಹಕರು ಸಿಲಿಂಡರ್ ಪಡೆಯುವಾಗ ಮಾತ್ರ ಒಟಿಪಿ ನೀಡಿದರೆ ತೊಂದರೆ ಆಗುವುದು ತಪ್ಪುತ್ತದೆ.

### ಅಚ್ಚಳಿಯದ ಗುರುತು ಮೂಡಿಸಿದ ರೈತ ಹೋರಾಟ

- ಉದಯವಾಹಿನಿ ಹೊಳೆಹೊನ್ನೂರು:

'ರೈತರ ಹಕ್ಕುಗಳಿಗಾಗಿ ನಡೆದ ಹೋರಾಟಗಳು ಇತಿಹಾಸದ ಪುಟಗಳಲ್ಲಿ ಅಚ್ಚಳಿಯದೇ ಉಳಿದಿವೆ' ಎಂದು ರೈತ ಸಂಘದ ರಾಜ್ಯ ಘಟಕದ ಅಧ್ಯಕ್ಷ ಎಚ್.ಆರ್. ಬಸವರಾಜಪ್ಪ ಹೇಳಿದರು. ಸಮೀಪದ ನಾಗಸಮುದ್ರದಲ್ಲಿ ಹುತಾತ್ಮ ರೈತರ ಸ್ಮಾರಕದ ಬಳಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸಹಭಾಗಿತ್ವದಲ್ಲಿ ಹಮ್ಮಿಕೊಂಡಿದ್ದ 44ನೇ ವರ್ಷದ ರೈತ ಹುತಾತ್ಮರ ದಿನಾಚರಣೆಯಲ್ಲಿ ಮಾತನಾಡಿದರು. ''ನಾಗಸಮುದ್ರ ಗೋಲಿಬಾರ್ ರೈತರ ಬದುಕು- ಹಕ್ಕು ಹಾಗೂ ಅಸ್ತಿತ್ವಕ್ಕಾಗಿ ನಡೆದ ತ್ಯಾಗದ ಸಂಕೇತ. 1982ರ ಮೇ 25ರಂದು ನಡೆದ ಘಟನೆಯಲ್ಲಿ ಸನ್ಯಾಸಿಕೊಡಮಗ್ಗಿಯ ಬಸವನಗೌಡ, ನಾಗಸಮುದ್ರದ ವೃದ್ಧ ಮಲ್ಲಪ್ಪ ಹಾಗೂ ಬಾಲಕ ನಟರಾಜ ಪೊಲೀಸರ ಗುಂಡಿಗೆ ಬಲಿಯಾಗಿದ್ದರು' ಎಂದರು. ಹೊಳೆಹೊನ್ನೂರು ಭಾಗದಲ್ಲಿ ಮೇ 26ರಂದು 20 ನಿಮಿಷ ಬೀಸಿದ ಬಿರುಗಾಳಿಗೆ ಅಪಾರ ನಷ್ಟವಾಗಿದೆ. ಸರ್ಕಾರ ಈ ನಷ್ಟವನ್ನು ತುಂಬಿಕೊಡಬೇಕು' ಎಂದು ಒತ್ತಾಯಿಸಿದರು.'

ರೈತರು ವರ್ಷಪೂರ್ತಿ ದುಡಿದು ಬೆಳೆ ಬೆಳೆಯುತ್ತಾರೆ. ಆದರೆ ಪ್ರಕೃತಿ ವಿಕೋಪದಿಂದ ಎಲ್ಲವನ್ನೂ ಕಳೆದುಕೊಂಡವರಿಗೆ ಸಿಗುತ್ತಿರುವ ಪರಿಹಾರದ ಮೊತ್ತ ತೀರಾ ಕಡಿಮೆ' ಎಂದು ಬೇಸರ ವ್ಯಕ್ತಪಡಿಸಿದರು.

# ಇ- ಸ್ವತ್ತು ವಿಳಂಬಕ್ಕೆ ಖಂಡನೆ; ನಿವಾಸಿಗಳ ಪ್ರತಿಭಟನೆ

- ಉದಯವಾಹಿನಿ ಸಾಗರ:



ಉದಯವಾಹಿನಿ ಚಿತ್ರ

ತಮ್ಮ ಸ್ವತ್ತಿಗೆ ಇ- ಖಾತಾ ನಮೂದು ಮಾಡುವಲ್ಲಿ ಆಗುತ್ತಿರುವ ವಿಳಂಬ ಖಂಡಿಸಿ ಇಲ್ಲಿನ ಅರಳಿಕೊಪ್ಪದ ಜನ್ನತ್ ನಗರ ಬಡಾವಣೆ ನಿವಾಸಿಗಳು ನಗರಸಭೆ ಕಚೇರಿ ಎದುರು ಪ್ರತಿಭಟನೆ ನಡೆಸಿದರು.'ಬಡಾವಣೆಯ 136 ಕುಟುಂಬಗಳಿಗೆ 90ರ ದಶಕದಲ್ಲೇ ಸರ್ಕಾರದ ವತಿಯಿಂದ ಹಕ್ಕುಪತ್ರ ವಿತರಿಸಲಾಗಿದೆ. ನಂತರ ಫಲಾನುಭವಿಗಳ ಹೆಸರಿಗೆ ಖಾತೆ ಬದಲಾವಣೆ ಮಾಡಲಾಗಿದೆ. ಆದರೆ, ಇ- ಖಾತಾ ನಮೂದು ಮಾಡುವಂತೆ ಅರ್ಜಿ ಸಲ್ಲಿಸಿದರೆ ಅನಗತ್ಯ ವಿಳಂಬ ಮಾಡಲಾಗುತ್ತಿದೆ' ಎಂದು ಪುರಸಭೆ ಮಾಜಿ ಅಧ್ಯಕ್ಷ ತೀ.ನ. ಶ್ರೀನಿವಾಸ್ ದೂರಿದರು. 'ಇ- ಖಾತಾ ನಮೂದು ಮಾಡದೇ ಇರುವುದರಿಂದ ನಿವಾಸಿಗಳು ತಮ್ಮ ಸ್ವತ್ತಿನ ಮೇಲೆ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳಿಂದ ಸಾಲ ಸೌಲಭ್ಯ ಪಡೆಯಲು ಸಾಧ್ಯವಾಗುತ್ತಿಲ್ಲ.

ಕಷ್ಟದ ಸಂದರ್ಭದಲ್ಲಿ ಸ್ವತ್ತನ್ನು ಮತ್ತೊಬ್ಬರಿಗೆ ಮಾರಾಟ ಮಾಡಲು ಆಗುತ್ತಿಲ್ಲ. ತಾಂತ್ರಿಕ ಕಾರಣಗಳ ನೆಪ ಹೇಳುತ್ತ ವರ್ಷಗಟ್ಟಲೇ ಜನರನ್ನು ಕಚೇರಿಗೆ ಅಲೆಯುವಂತೆ ಮಾಡಲಾಗುತ್ತಿದೆ' ಎಂದು ಆರೋಪಿಸಿದರು. 136 ಕುಟುಂಬಗಳ ಆಸ್ತಿಗೆ ಇ-ಖಾತಾ ನಮೂದು ಮಾಡುವಂತೆ ಶಾಸಕ ಗೋಪಾಲಕೃಷ್ಣ ಬೇಳೂರು ಸೂಚನೆ ನೀಡಿದ ನಂತರವೂ ನಗರಸಭೆ ಸಿಬ್ಬಂದಿ ಅದನ್ನು ಪಾಲಿಸುತ್ತಿಲ್ಲ. ಹಾಗಾದರೆ ಶಾಸಕರ ಮಾತಿಗೂ ಇಲ್ಲಿ ಬೆಲೆ ಇಲ್ಲವೆ' ಎಂದು ಪ್ರಶ್ನಿಸಿದರು. 'ನಾವು ವಾಸವಾಗಿರುವ ಮನೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ನ್ಯಾಯಾಲಯದಲ್ಲಿ ಯಾವುದೇ ವ್ಯಾಜ್ಯ ನಡೆಯುತ್ತಿಲ್ಲ. ಯಾವುದೇ ತಡೆಯಾಜ್ಞೆಯೂ ಇಲ್ಲ. ಆದಾಗ್ಯೂ ಈ ಹಿಂದೆ ನ್ಯಾಯಾಲಯದಲ್ಲಿ ನಡೆದ ಪ್ರಕ್ರಿಯೆಗಳನ್ನು ಮುಂದಿಟ್ಟು ಇ-ಖಾತಾ ನಮೂದು ಮಾಡಲು ನಿರಾಕರಿಸುತ್ತಿರುವುದು ತಪ್ಪು' ಎಂದು ಸ್ಥಳೀಯ ನಿವಾಸಿ ಅಶ್ವಿನಿ ಹೆಗಡೆ ದೂರಿದರು. 'ಹಕ್ಕುಪತ್ರ ನೀಡಿ ಖಾತೆ ಬದಲಾವಣೆ ಮಾಡಿದ ನಂತರ ಇ-ಸ್ವತ್ತು ಮಾಡಿಕೊಡಬೇಕಾದದ್ದು ನಗರಸಭೆಯ ಕರ್ತವ್ಯ.

ಜನ್ನತ್ ನಗರದಲ್ಲಿ ಆರ್ಥಿಕವಾಗಿ ಹಿಂದುಳಿದ ಕೂಲಿ ಕಾರ್ಮಿಕರೇ ಹೆಚ್ಚಿನ ಸಂಖ್ಯೆಯಲ್ಲಿದ್ದಾರೆ. ಅವರ ಸಮಸ್ಯೆಗೆ ನಗರಸಭೆ ಆಡಳಿತ ಸ್ಪಂದಿಸಬೇಕು' ಎಂದು ನಗರಸಭೆ ಮಾಜಿ ಸದಸ್ಯ ಸತೀಶ್ ಕೆ. ಮೊಗವೀರ ಒತ್ತಾಯಿಸಿದರು. ಪ್ರಮುಖರಾದ ಶ್ರೀಧರ ಜೋಗಿ, ಭಾಷಾ ಸಾಬ್, ಮುನಾವರ್, ಯಶೋಧ, ಗೋಪಿ, ಸಂತೋಷ್, ಸಾದಿಕ್, ಅಸ್ಪಾಕ್, ಫಿರ್ದೋಶ್ ಇದ್ದರು.

# ರಸ್ತೆ ಕಾಮಗಾರಿ ಶಿಲಾನ್ಯಾಸ :ಶಾಸಕ ಅಶೋಕ್ ರೈ

- ಉದಯವಾಹಿನಿ ವಿಟ್ಲ:


ಉದಯವಾಹಿನಿ ಚಿತ್ರ

ಇಲ್ಲಿಂದ ಮಂಗಳೂರಿಗೆ ತೆರಳುವ ಮುಖ್ಯರಸ್ತೆಯ ಬೊಬ್ಬೆಕೇರಿ ಎಂಬಲ್ಲಿ ರಸ್ತೆ ಅಭಿವೃದ್ಧಿಗೆ 60 ಲಕ್ಷ ಮಂಜೂರಾಗಿದ್ದು, ಕಾಮಗಾರಿಗೆ ಶಾಸಕ ಅಶೋಕ ರೈ ಶಿಲಾನ್ಯಾಸ ನೆರವೇರಿಸಿದರು.ಬಳಿಕ ಮಾತನಾಡಿದ ಅವರು, ಸುಮಾರು ಹದಿನೈದು ವರ್ಷಗಳಿಂದ ಇದ್ದ ಇಲ್ಲಿನ ಬಹುದೊಡ್ಡ ಸಮಸ್ಯೆಯೊಂದು ನಿವಾರಣೆಯಾಗಿದೆ.ಬೊಬ್ಬೆಕೇರಿಯಲ್ಲಿ ರಸ್ತೆ ಕಿರಿದಾಗಿದ್ದು, ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿತ್ತು ಎಂದರು.ವಾಹನ ಸಂಚರಿಸುವಾಗ ಫುಟ್‌ಪಾತ್ ಇಲ್ಲದೆ ಪಾದಚಾರಿಗಳಿಗೆ ತೊಂದರೆಯಾಗುತ್ತಿರುವುದು, ಮಳೆಗಾಲದಲ್ಲಿ ನೀರು ಹರಿದು ಹೋಗುವ ವ್ಯವಸ್ಥೆ ಇಲ್ಲದಿರುವ ಬಗ್ಗೆ ಸ್ಥಳೀಯರು ಮನವಿ ಮಾಡಿಕೊಂಡಿದ್ದರು.

ವಿಟ್ಲ ಭಾಗದ ಕಾಂಗ್ರೆಸ್ ನಾಯಕರ ಮೂಲಕ ವಿಚಾರ ತಿಳಿದುಕೊಂಡಾಗ ರಸ್ತೆ ಬದಿಯಲ್ಲಿ ಖಾಸಗಿ ಜಾಗವಿದ್ದು ವಿಸ್ತರಣೆಗೆ ಸಮಸ್ಯೆಯಾಗುತ್ತಿರುವ ಬಗ್ಗೆ ಗಮನಕ್ಕೆ ಬಂದಿತ್ತು. ಜಾಗದ ಮಾಲೀಕರೊಂದಿಗೆ ಮಾತುಕತೆ ನಡೆಸಿ ರಸ್ತೆಗೆ ಜಾಗ ಬಿಟ್ಟು ಕೊಡುವಂತೆ ಕೇಳಿಕೊಂಡಿದ್ದೆ.

ಆ ಮೂಲಕ ಹದಿನೈದು ವರ್ಷಗಳ ವಿವಾದ ಇತ್ಯರ್ಥವಾಗಿತ್ತು ಎಂದು ಹೇಳಿದರು. ಕಬಕದಿಂದ ವಿಟ್ಲಕ್ಕೆ ತೆರಳುವ ರಸ್ತೆ ವಿಸ್ತರಣೆ ಕಾಮಗಾರಿಗೆ 20 ಕೋಟಿ, ಇದೇ ರಸ್ತೆಯ ಎರಡು ಸೇತುವೆ ಅಭಿವೃದ್ಧಿಗೆ 10 ಕೋಟಿ ಅನುದಾನ ನೀಡಲಾಗುವುದು ಎಂದರು.

**ವಿಟ್ಲ ಪಟ್ಟಣದ ರಸ್ತೆ ವಿಸ್ತರಣೆ ಅಗತ್ಯ:** ಪಟ್ಟಣದಲ್ಲಿ ರಸ್ತೆಗಳಿಗೆ ತಾಗಿಕೊಂಡೇ ಕಟ್ಟಡಗಳಿದ್ದು, ರಸ್ತೆ ವಿಸ್ತರಣೆ ಮಾಡುವ ಆಲೋಚನೆ ಇದೆ. ಈ ಬಗ್ಗೆ ಅಧಿಕಾರಿಗಳ ಜೊತೆ ಮಾತನಾಡಿದ್ದೇನೆ. ಅಂಗಡಿ ಮಾಲೀಕರು, ಕಟ್ಟಡ ಮಾಲೀಕರು ಒಪ್ಪಿಗೆ ನೀಡಿದರೆ ಮಾತ್ರ ಕಾಮಗಾರಿ ನಡೆಯಬಹುದು. ಯಾರಿಗೂ ತೊಂದರೆ ಕೊಡುವ ಉದ್ದೇಶವಿಲ್ಲ. ರಸ್ತೆ ಅಗಲಗೊಂಡರೆ ಪಟ್ಟಣ ದೊಡ್ಡದಾಗಿ ಬೆಳೆಯಲು ಸಾಧ್ಯ. ವರ್ತಕರು, ಮಾಲೀಕರು ಸಹಕಾರ ನೀಡುತ್ತಾರೆ ಎಂಬ ವಿಶ್ವಾಸವಿದೆ ಎಂದರು. 'ಅಭಿವೃದ್ಧಿ ಕೆಲಸ ಕಂಡು ಬೆದರಿದ ಬಿಜೆಪಿಯವರು ಸುಳ್ಳು ಆರೋಪ ಹೊರಿಸಿ ತೇಜೋವಧೆ ಮಾಡುವ ಕೆಲಸ ಮಾಡುತ್ತಿದ್ದಾರೆ. ಅಧಿಕಾರವಿರುವಾಗ ಅಭಿವೃದ್ಧಿ ಮಾಡದ ಮಾಜಿ ಶಾಸಕ ಬೆರಗಾಗಿರುವ ಅವರು ಇದೇ ಕಾರಣಕ್ಕೆ ಬಂಟ್ವಾಳ ತಾಲ್ಲೂಕು ಕಚೇರಿ ಮುಂದೆ ಪ್ರತಿಭಟನೆ ನಡೆಸಿದ್ದಾರೆ' ಎಂದು ಆರೋಪಿಸಿದರು.

# ಸರ್ಕಾರಿ ಶಾಲೆ ಮುಚ್ಚಲು ಬಿಡಲ್ಲ: ಶಿಕ್ಷಣ ಉಳಿಸಿ ಸಮಿತಿ ಆಕ್ರೋಶ

- ಉದಯವಾಹಿನಿ ಅರಸೀಕೆರೆ:



ಉದಯವಾಹಿನಿ ಚಿತ್ರ

ಕೆಪಿಎಸ್ ಮ್ಯಾಗ್ನೆಟ್ ಯೋಜನೆ ಅಡಿಯಲ್ಲಿ ಸರ್ಕಾರಿ ಶಾಲೆಗಳ ವಿಲೀನಕ್ಕೆ ವಿರೋಧ ವ್ಯಕ್ತಪಡಿಸಿ, ಎಐಡಿಎಸ್‌ಒ ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ನೇತೃತ್ವದಲ್ಲಿ ಅರಸೀಕೆರೆಯ ಬಿಇಒ ಕಚೇರಿ ಮುಂಭಾಗ ಪ್ರತಿಭಟನೆ ಮತ್ತು ಪ್ರತಿರೋಧ ಸಮಾವೇಶ ನಡೆಯಿತು. ತಾಲ್ಲೂಕಿನ ಬಾಣವಾರ, ಕುರವಂಕ, ಡಿ.ಎಂ. ಕುರ್ಕ, ಜಾವಗಲ್' ಹಾಗೂ ಚಂದೇನಹಳ್ಳಿ ಗೇಟ್ ಪ್ರದೇಶಗಳಲ್ಲಿ ಕಪಿಎಸ್' ಮ್ಯಾಗ್ನೆಟ್ ಶಾಲೆಗಳನ್ನು ಸ್ಥಾಪಿಸಿ, ಸುತ್ತಲಿನ 50ಕ್ಕೂ ಹೆಚ್ಚು ಸರ್ಕಾರಿ ಶಾಲೆಗಳನ್ನು ಮುಚ್ಚಲು ಸರ್ಕಾರ ಅಧಿಕೃತ ಪಟ್ಟಿ ಬಿಡುಗಡೆ ಮಾಡಿರುವುದನ್ನು ಪ್ರತಿಭಟನಕಾರರು ಖಂಡಿಸಿದರು. ಎಐಡಿಎಸ್‌ಒ ರಾಜ್ಯ ಘಟಕದ ಖಜಾಂಚಿ ಸುಭಾಷ್ ಬೆಟ್ಟದಕೊಪ್ಪ ಮಾತನಾಡಿ, ರಾಜ್ಯ ಸರ್ಕಾರದ ಆದೇಶದ ಪ್ರಕಾರ ಗ್ರಾಮ ಪಂಚಾಯಿತಿಗೆ ಒಂದೇ ಸರ್ಕಾರಿ ಶಾಲೆ ಉಳಿಸಿ, ಸಾವಿರಾರು ಶಾಲೆಗಳನ್ನು ಮುಚ್ಚುವ ಸಂಚು ನಡೆಯುತ್ತಿದೆ. ಕೆಪಿಎಸ್ ಮ್ಯಾಗ್ನೆಟ್ ಶಾಲೆಗಳ 5 ಕಿ.ಮೀ. ವ್ಯಾಪ್ತಿಯ ಸರ್ಕಾರಿ ಶಾಲೆಗಳನ್ನು ಹಂತ ಹಂತವಾಗಿ ನಾಶ ಮಾಡಲು ಸರ್ಕಾರ ಮುಂದಾಗಿದೆ ಎಂದು ಆರೋಪಿಸಿದರು.


ರಾಜ್ಯ ಸರ್ಕಾರ ಶಿಕ್ಷಣಕ್ಕೆ ಗ್ಯಾರಂಟಿ ನೀಡುವುದಾಗಿ ಹೇಳುತ್ತಿದೆಯಾದರೂ, ಇನ್ನೊಂದೆಡೆ ಸರ್ಕಾರಿ ಶಾಲೆಗಳನ್ನು ಮುಚ್ಚುವ ಮೂಲಕ ಜನರಿಗೆ ಮೋಸ ಮಾಡುತ್ತಿದೆ. ಒಂದನೇ ತರಗತಿಯಿಂದಲೇ ಆಂಗ್ಲ ಮಾಧ್ಯಮ ಆರಂಭಿಸುವ ಮೂಲಕ ಕನ್ನಡ ಶಾಲೆಗಳ ಅಸ್ತಿತ್ವಕ್ಕೂ ಧಕ್ಕೆ ತರುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಅಖಿಲ ಭಾರತ ಶಿಕ್ಷಣ ಉಳಿಸಿ ಸಮಿತಿಯ ರಾಜ್ಯ ಘಟಕದ ಉಪಾಧ್ಯಕ್ಷ ವಿ.ಎನ್. ರಾಜಶೇಖರ್ ಮಾತನಾಡಿ, ರಾಜ್ಯದಲ್ಲಿ ಈಗಾಗಲೇ ಸಾವಿರಾರು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಅನೇಕ ಸರ್ಕಾರಿ ಶಾಲೆಗಳಿಗೆ ಮೂಲಸೌಕರ್ಯಗಳೇ ಇಲ್ಲ. ಶಾಲೆಗಳನ್ನು ಬಲಪಡಿಸುವ ಬದಲು ಸರ್ಕಾರ ಅವುಗಳನ್ನು ಸೊರಗಲು ಬಿಡುತ್ತಿದೆ ಎಂದು ಟೀಕಿಸಿದರು.

ಸಾಮಾಜಿಕ ಹೋರಾಟಗಾರ ಉಗ್ರ ನರಸಿಂಹೇಗೌಡ ಮಾತನಾಡಿ, ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳನ್ನು ಮುಚ್ಚಿದರೆ ಶ್ರಮಜೀವಿಗಳ ಮಕ್ಕಳಿಗೆ ಶಿಕ್ಷಣ ಸಿಗದಂತಾಗುತ್ತದೆ. ಜನರ ತೆರಿಗೆ ಹಣದಿಂದ ಸರ್ಕಾರ ಸರ್ಕಾರಿ ಶಾಲೆಗಳನ್ನು ಬಲಪಡಿಸಬೇಕು ಎಂದು ಆಗ್ರಹಿಸಿದರು. ಬಿಇಒ ಮೋಹನ್ ಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಿದ ಪ್ರತಿಭಟನಕಾರರು, ನಮ್ಮೂರ ಸರ್ಕಾರಿ ಶಾಲೆಗಳನ್ನು ಮುಚ್ಚಬೇಡಿ ಎಂದು ಒತ್ತಾಯಿಸಿದರು.

ಎಐಡಿಎಸ್‌ಒ ಜಿಲ್ಲಾ ಘಟಕದ ಅಧ್ಯಕ್ಷೆ ಚೈತ್ರಾ, ಅಧ್ಯಕ್ಷತೆ ವಹಿಸಿದ್ದರು. ಕಾರ್ಯದರ್ಶಿ ಸುಷ್ಮಾ, ಉಪಾಧ್ಯಕ್ಷ ಅಭಿಷೇಕ್ ಸೇರಿದಂತೆ ವಿವಿಧ ಹಳ್ಳಿಗಳ ವಿದ್ಯಾರ್ಥಿಗಳು, ಪೋಷಕರು ಹಾಗೂ ಸಾರ್ವಜನಿಕ ಶಿಕ್ಷಣ ಉಳಿಸಿ ಸಮಿತಿಯ ಸದಸ್ಯರು, 25ಕ್ಕೂ ಹೆಚ್ಚು ಹಳ್ಳಿಗಳಿಂದ ಸುಮಾರು 300ಕ್ಕೂ ಅಧಿಕ ಪೋಷಕರು, ವಿದ್ಯಾರ್ಥಿಗಳು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಶಾಲೆಗಳಲ್ಲಿ ಹಿಜಾಬ್‌ಗೆ ಅವಕಾಶ ಬೇಡ: ಹಿಂದೂ ಜನಜಾಗೃತಿ ವೇದಿಕೆ ಮನವಿ

- ಉದಯವಾಹಿನಿ ಮೂಡಿಗೆರೆ:


ಉದಯವಾಹಿನಿ ಚಿತ್ರ

ಶಾಲೆ, ಪದವಿ ಪೂರ್ವ ಕಾಲೇಜುಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡುವ ಹಾಗೂ ಕೇಸರಿ ಶಾಲು ನಿರ್ಬಂಧಿಸುವ ನಿರ್ಧಾರವನ್ನು ಸರ್ಕಾರ ತಕ್ಷಣ ಹಿಂಪಡೆಯಬೇಕು ಎಂದು ಹಿಂದೂ ಜನಜಾಗೃತಿ ವೇದಿಕೆಯ ಕಾರ್ಯಕರ್ತರು ಒತ್ತಾಯಿಸಿ ತಹಶೀಲ್ದಾರ್‌ಗೆ ಮನವಿ ಸಲ್ಲಿಸಿದರು.ರಾಜ್ಯ ಸರ್ಕಾರವು ಶಿಕ್ಷಣದ ಮೂಲಕ ತಾರತಮ್ಯ ನೀತಿ ಅನುಸರಿಸುತ್ತಿದೆ. ಶಾಲೆ, ಪದವಿ ಪೂರ್ವ ಕಾಲೇಜುಗಳಲ್ಲಿ ಹಿಜಾಬ್‌ಗೆ ಅವಕಾಶ ನೀಡಿ, ಕೇಸರಿ ಶಾಲು ನಿರ್ಬಂಧಿಸುವ ನಿರ್ಧಾರವು ಧಾರ್ಮಿಕ ತಾರತಮ್ಯವಾಗಿದೆ.ಈ ನಿರ್ಧಾರವು ಸಮಾನತೆ, ಧರ್ಮನಿರಪೇಕ್ಷತೆ ಹಾಗೂ ಏಕರೂಪದ ಸಮವಸ್ತ್ರ ನೀತಿಗೆ ವಿರುದ್ಧವಾಗಿದೆ. 2022ರಲ್ಲಿ ಉಡುಪಿಯಲ್ಲಿ ಆರಂಭವಾದ ಹಿಜಾಬ್ ವಿವಾದವು ರಾಜ್ಯದಾದ್ಯಂತ ವಿಸ್ತರಿಸಿತ್ತು. ಈ ಪ್ರಕರಣದ ಕುರಿತು ನ್ಯಾಯಾಲಯ ಶಾಲೆ-ಕಾಲೇಜುಗಳಲ್ಲಿ ನಿಗದಿತ ಸಮ ವಸ್ತ್ರವನ್ನು ಪಾಲಿಸಬೇಕೆಂದು ಸೂಚಿಸಿತ್ತು. ಹಿಜಾಬ್ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿ ವಿಚಾ ರಣೆಗೆ ಬಾಕಿಯಿದೆ. ಆದರೂ ಸರ್ಕಾರ ಹಿಜಾಬ್‌ಗೆ ಅವಕಾಶ ನೀಡಿ, ಕಾನೂನು ಉಲ್ಲಂಘಿಸಿದೆ ಎಂದು ದೂರಿದರು.'ಹಿಜಾಬ್‌ಗೆ ಅವಕಾಶ ನೀಡಿದರೆ ಇತರೆ ಸಮುದಾಯದ ವಿದ್ಯಾರ್ಥಿಗಳು ಸಹ ತಮ್ಮ ಧಾರ್ಮಿಕ ಚಿಹ್ನೆಗಳನ್ನು ಪ್ರದರ್ಶಿಸುವ ಸಾಧ್ಯತೆ ಇರುತ್ತದೆ. ಇದರಿಂದ ಶಿಕ್ಷಣದ ಮಹತ್ವ ಕಳೆದುಕೊಳ್ಳುತ್ತದೆ. ಹಾಗಾಗಿ ಹಿಜಾಬ್‌ಗೆ ಅವಕಾಶ ನೀಡಬಾರದು' ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ.

# ತಹಶೀಲ್ದಾರ್ ಕಚೇರಿಗೆ ಲೋಕಾಯುಕ್ತ ದಾಳಿ ಎಸ್.ಪಿ ದಿನೇಶ್ ಕುಮಾರ್ ಮಾರ್ಗದರ್ಶನ

- ಉದಯವಾಹಿನಿ ಬ್ರಹ್ಮಾವರ:

ಇಲ್ಲಿನ ತಹಶೀಲ್ದಾರ್ ಕಚೇರಿಗೆ ಲೋಕಾಯುಕ್ತ ಪೊಲೀಸರು ದಾಳಿ ನಡೆಸಿ, ಪರಿಶೀಲನೆ ನಡೆಸಿದರು.ತಹಶೀಲ್ದಾರ್ ಕಚೇರಿಯ ಕಾರ್ಯ ವೈಖರಿಯ ಬಗ್ಗೆ ದೂರು ಸಲ್ಲಿಕೆಯಾಗಿದ್ದ ಕಾರಣ ಶೋಧನಾ ವಾರೆಂಟ್‌ನೊಂದಿಗೆ ಬಂದ ಲೋಕಾಯುಕ್ತ ಪೊಲೀಸರು, ನಾಲ್ಕು ತಂಡಗಳಾಗಿ ತಾಲ್ಲೂಕು ಸೌಧದ ವಿವಿಧ ವಿಭಾಗಗಳನ್ನು ಪರಿಶೀಲಿಸಿದರು. 'ಪರಿಶೀಲನೆ ವೇಳೆ ಹಲವಾರು ದಾಖಲೆಗಳು ವರ್ಷಗಳಿಂದ ವಿಲೇವಾರಿಯಾಗದೆ ಬಾಕಿ ಉಳಿದಿರುವುದು ಕಂಡುಬಂದಿದೆ. ನಿಯಮಬಾಹಿರವಾಗಿ ಹಲವಾರು ಕಡತಗಳು ವಿಲೇವಾರಿಯಾಗಿರುವ ಬಗ್ಗೆ ಶಂಕೆ ಇದೆ' ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಬ್ರಹ್ಮಾವರ ತಹಶೀಲ್ದಾರ್ ಕಚೇರಿಯಲ್ಲಿ ಆನ್‌ಲೈನ್‌ಗೆ ಕಡತಗಳು ಸರಿಯಾಗಿ ಅಪ್‌ಲೋಡ್ ಆಗಿಲ್ಲ.

ಆಫ್‌ಲೈನ್‌ನಲ್ಲಿ ಕೂಡ ದಾಖಲೆಗಳು ಸರಿಯಾಗಿ ವಿಲೇವಾರಿ ಆಗುತ್ತಿಲ್ಲ ಎಂಬ ದೂರುಗಳು ಇದ್ದವು. ಅಧಿಕಾರಿಗಳನ್ನು ಪ್ರಶ್ನಿಸಿದ ಲೋಕಾಯುಕ್ತ ಪೊಲೀಸರು, ತರಾಟೆಗೆ ತೆಗೆದುಕೊಂಡರು. ಕಾರಣ ನೀಡದ ಮತ್ತು ಅನುಮಾನಾಸ್ಪದ ದಾಖಲೆಗಳನ್ನು ಮಹಜರು ಮಾಡಿ ವಶಕ್ಕೆ ಪಡೆಯಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳಿಗೆ ನೋಟಿಸ್ ನೀಡಿ ಉತ್ತರ ಕೇಳಲಾಗುತ್ತದೆ.

ಸರಿಯಾದ ಉತ್ತರ ನೀಡದೇ ಇದಲ್ಲಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು ಲೋಕಾಯುಕ್ತ ಪೊಲೀಸರು ಮಾಹಿತಿ ನೀಡಿದ್ದಾರೆ. ಇನ್‌ಸ್ಪೆಕ್ಟರ್ ಭಾರತಿ ಭಾಗವಹಿಸಿದ್ದರು. ದಾಖಲೆ ಪರಿಶೀಲನೆ

# ಸರ್ಕಾರದ ನಡೆಗೆ ಎಸ್‌ಡಿಪಿಐ ವಿರೋಧ



ಉದಯವಾಹಿನಿ ಚಿತ್ರ

- ಉದಯವಾಹಿನಿ ದಾವಣಗೆರೆ:

ಕೋಮುದ್ವೇಷ ಹರಡುವ ಉದ್ದೇಶದಿಂದ ದ್ವೇಷ ಭಾಷಣ ಮಾಡಿದವರ ವಿರುದ್ಧ ದಾಖಲಾಗಿರುವ ಪ್ರಕರಣಗಳನ್ನು ರಾಜ್ಯ ಸರ್ಕಾರ ಹಿಂಪಡೆಯುತ್ತಿದೆ ಎಂದು ಆರೋಪಿಸಿ ಸೋಷಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ (ಎಸ್‌ಡಿಪಿಐ) ಕಾರ್ಯಕರ್ತರು ಸೋಮವಾರ ಪ್ರತಿಭಟನೆ ನಡೆಸಿದರು.

ರಾಜ್ಯ ಸರ್ಕಾರದ ವಿರುದ್ಧ ಘೋಷಣೆ ಕೂಗಿದರು. ಗೋವುಗಳ ರಕ್ಷಣೆಯ ಹೆಸರಿನಲ್ಲಿ ಅಲ್ಪಸಂಖ್ಯಾತರು ಹಾಗೂ ರೈತರ ಮೇಲೆ ದಾಳಿ ನಡೆಸಲಾಗುತ್ತಿದೆ ಎಂದು ದೂರಿದರು. 'ಕಾನೂನು ಬದ್ಧವಾಗಿ ಖರೀದಿಸಿದ ಗೋವುಗಳನ್ನು ತಡೆದು ದೌರ್ಜನ್ಯ ಎಸಗುತ್ತಿರುವ ಗುಂಪುಗಳಿಗೆ ರಾಜ್ಯ ಸರ್ಕಾರ ಬೆಂಬಲ ಸೂಚಿಸುತ್ತಿದೆ.

ಗೋಮಾತೆಯ ರಕ್ಷಣೆಯ ನೆಪದಲ್ಲಿ ನಡೆಯುತ್ತಿರುವ ಪುಂಡಾಟಿಕೆಯ ವಿರುದ್ಧ ಕ್ರಮ ಕೈಗೊಳ್ಳುವ ಬದಲು ದ್ವೇಷ ಭಾಷಣ ಮಾಡಿದವರ ಮೇಲೆ ದಾಖಲಾಗಿರುವ ಪ್ರಕರಣಗಳನ್ನು ಹಿಂಪಡೆಯಲು ಮುಂದಾಗಿದೆ' ಎಂದು ಎಸ್‌ಡಿಪಿಐ ರಾಜ್ಯ ಪ್ರಧಾನ ಕಾರ್ಯದರ್ಶಿ ಅಪ್ಸರ್ ಕೊಡ್ಲಿಪೇಟೆ ಆರೋಪಿಸಿದರು.

'ಹಾಲು ಕೊಡದ ಹಾಗೂ ಕೃಷಿ ಕೆಲಸಕ್ಕೆ ಬಳಕೆಯಾಗದ ಜಾನುವಾರುಗಳ ಪಾಲನೆಗೆ ರೈತರು ಕಷ್ಟಪಡಬೇಕಿದೆ. ಇಂತಹ ಜಾನುವಾರುಗಳನ್ನು ಮಾರಾಟ ಮಾಡಲು ಮುಂದಾಗುವ ರೈತರಿಗೆ ಗೋರಕ್ಷಣೆಯ ಹೆಸರಿನಲ್ಲಿ ಕಿರುಕುಳ ನೀಡಲಾಗುತ್ತಿದೆ' ಎಂದು ಕಿಡಿಕಾರಿದರು.

# ಕೇಂದ್ರ ಸರಕಾರದ ಮಾನವ ಸಂಪನ್ಮೂಲ ಇಲಾಖೆ ನೇರ ಹೊಣೆ

- ಉದಯವಾಹಿನಿ ಮಂಗಳೂರು :



ಉದಯವಾಹಿನಿ ಚಿತ್ರ

ನೀಟ್ ವ್ಯವಸ್ಥೆಯ ಮೂಲಕ ಭಾರತದಲ್ಲಿ ವೈದ್ಯಕೀಯ ಶಿಕ್ಷಣವನ್ನು ವ್ಯಾಪರವನ್ನಾಗಿ ಮಾಡಿ, ನೈತಿಕ ಮತ್ತು ಸಮಾಜಿಕ ಬದ್ದತೆ ನಾಶ ಮಾಡಲಾಗುತ್ತಿದೆ. ವಾಸ್ತವಿಕವಾಗಿ ಈ ನೀಟ್ ಪರೀಕ್ಷಾ ವ್ಯವಸ್ಥೆ ಕೇಂದ್ರಿಕೃತವಾಗಿದ್ದು ಸರ್ವಾಧಿಕಾರಿ ವ್ಯವಸ್ಥೆಯ ಭಾಗ. ಇದನ್ನು ದಕ್ಷಿಣದ ರಾಜ್ಯಗಳು ವಿರೋಧಿಸುತ್ತ ಬಂದಿದೆ. ಉತ್ತರ ರಾಜ್ಯಗಳ ಕೋಚಿಂಗ್ ಮಾಫಿಯಾಗಳಿಗೆ ಮಣಿದು ಈ ನೀಟ್ ಪರೀಕ್ಷೆಯನ್ನು ನಡೆಸಲಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಪರೀಕ್ಷಾ ವ್ಯವಸ್ಥೆಯನ್ನು ವಿಕೇಂದ್ರೀಕೃತ ಗೊಳಿಸಬೇಕು. ಕೇಂದ್ರ ಸರಕಾರದ ಮಾನವ ಸಂಪನ್ಮೂಲ ಇಲಾಖೆ ನೀಟ್ ಪರೀಕ್ಷೆ ಪರಿಚಯಿಸಿ ತನ್ನ ಸರ್ವಾಧಿಕಾರ ಧೋರಣೆ ತೋರಿಸುತ್ತಿದೆ. ಶಿಕ್ಷಣ ವ್ಯವಸ್ಥೆಯನ್ನು ವ್ಯಾಪಾರದ ಸರಕುವನ್ನಾಗಿಸಿದೆ. ಇದು ಕೇಂದ್ರೀಕೃತ ವ್ಯವಸ್ಥೆಯ ವೈಫಲ್ಯಯಾಗಿದೆ ಎಂದರು. ವೈದ್ಯಕೀಯ ಹುದ್ದೆ ಪವಿತ್ರವಾಗಿದೆ. ಆದರೆ ಇಂದು ಅದರ ನೈತಿಕ ಮೂಲದ ಅಡಿಪಾಯ ಕಿತ್ತು ಹಾಕುವ ಪ್ರಯತ್ನ ಸಾಗುತ್ತಿದೆ. ಕೋಚಿಂಗ್ ಸೆಂಟರ್ ಮಾಫಿಯಾಕ್ಕೂ ಹಗರಣಕ್ಕೂ ನೇರ ಸಂಬಂಧವಿದೆ.ಎಷ್ಟು ಖಾಸಗಿ ಕೋಚಿಂಗ್ ಸೆಂಟರ್ಗಳು ಇದೆಯೆಂಬುವುದು ಮಾನವ ಸಂಪನ್ಮೂಲ ಇಲಾಖೆಗೆ ಗೊತ್ತಿಲ್ಲ. ಈ ಸೆಂಟರ್ಗಳಿಗೆ ಯಾವ ರೀತಿಯ ವೃತ್ತಿಪರತೆ ಇದೆ ಎಂದು ಗೊತ್ತಿಲ್ಲ. ಸರಿಸುಮಾರು ನೂರು ಕೋಚಿಂಗ್ ಸೆಂಟರ್ ಗಳು ಕೋಟಾ ದಂತಹ ಪ್ರದೇಶದಲ್ಲಿದೆ.

**ಕೇಂದ್ರೀಕೃತ ವ್ಯವಸ್ಥೆಯ ವೈಫಲ್ಯ**

ಪೋಷಕರು ಲಕ್ಷಾಂತರ ಹಣ ವ್ಯಯಿಸಿ ಕೋಚಿಂಗ್ ಸೆಂಟರ್ ಗಳಿಗೆ ಸೇರಿಸುತ್ತಾರೆ. ಅಲ್ಲಿ ವಿದ್ಯಾರ್ಥಿಗಳಿಗೆ ವೈಜ್ಞಾನಿಕ ಶಿಕ್ಷಣ ಸರಿಯಾಗಿ ದೊರೆಯುವುದಿಲ್ಲ. ಪಿಯುಸಿ ಶಿಕ್ಷಣ ಸರಿಯಾಗಿ ದೊರೆಯುವುದಿಲ್ಲ ಎಂದು ಶಿಕ್ಷಣ ವ್ಯವಸ್ಥೆಯ ಹುಳುಕು ಬಿಚ್ಚಿಟ್ಟರು.ಶೇ 100% , 95% ಉತ್ತೀರ್ಣರಾಗಿದ್ದರೆ ಎಂದು ಖ್ಯಾತಿ ಗಳಿಸಲು ಯಾವ ರೀತಿ ಪಶ್ನಾ ಪತ್ರಿಕೆ ಮಾಡಬೇಕು ಎಂಬ ಮಾದರಿ ತಯಾರಿಸಲಾಗುತ್ತದೆ. ಕೋಚಿಂಗ್ ಸೆಂಟರ್ ಈ ಮಾದರಿ ಮೂಲಕ ಪೋಷಕರ ಬಳಿ ಹಣ ಕೀಳುತ್ತದೆ. ಇಂದು 50-70 ಸಾವಿರ ಕೋಟಿ ಕೋಚಿಂಗ್ ವ್ಯವಹಾರ ನಡೆಯುತ್ತದೆ. ಇದು ಹಗಲಿನಲ್ಲಿ ಕುಳಿತು, ವ್ಯವಸ್ಥಿತವಾಗಿ ಯೋಜನೆ ರೂಪಿಸಿ ಮಾಡುತ್ತಿರುವ ''ಅತ್ಯಂತ ಭ್ರಷ್ಟ ಹಣಕಾಸಿನ ವ್ಯವಸ್ಥೆ'' ಎಂದರು. ಈ ಹಗರಣದ ಐದಾರು ಜನರನ್ನು ಬಂಧಿಸಿ ಪ್ರಯೋಜನವಿಲ್ಲ. ನೀಟ್ ವ್ಯವಸ್ಥೆಯನ್ನು ಡಿಸ್ ಮ್ಯಾಂಟಲ್ ಮಾಡಿ ನೀಟ್ ವ್ಯವಸ್ಥೆಯ ಯೊಳಗಿನ ಭ್ರಷ್ಟ ಅಧಿಕಾರಿಶಾಹಿಗಳನ್ನು ಕಡಿವಾಣ ಹಾಕಬೇಕು ಎಂದರು. ಮನುಷ್ಯರು ಯಂತ್ರಗಳಲ್ಲ, ಈ ಡಸ್ಟ್ ಬಿನ್ ವ್ಯವಸ್ಥೆಯನ್ನು ಕಿತ್ತೆಸೆದು ಮಾದರಿಯುತ, ಮೌಲ್ಯಯುತ, ಮಾನವೀಯತೆಗೆ ಪ್ರಾಧಾನ್ಯತೆ ನೀಡುವ ಶೈಕ್ಷಣಿಕ ವ್ಯವಸ್ಥೆ ಸಂಸ್ಥಾಪಿಸಬೇಕು ಎಂದರು. ಡಾ.ನಸುಹಾ ಮಾತನಾಡಿ, ನೀಟ್ ಪ್ರಶ್ನಾ ಪತ್ರಿಕೆ ಸೋರಿಕೆ ವೈದ್ಯಕೀಯ ಕನಸು ಹೊತ್ತ ವಿದ್ಯಾರ್ಥಿಗಳಿಗೆ ಆಘಾತ ತಂದಿದೆ.22 ಲಕ್ಷ ಆಕ್ಷಾಂಕ್ಷಿಗಳ ಕನಸನ್ನು, ವರ್ಷಾನುಗಟ್ಟಲೆ ಪಟ್ಟ ಶ್ರಮವನ್ನು ಕೇಂದ್ರ ಸರ್ಕಾರದ ವೈಫಲ್ಯದ ಕಾರಣ ನಾಶವಾಗಿದೆ. ಇಂತಹ ಘಟನೆಗಳು ಮರುಕಳಿಸಿದಂತೆ ಕ್ರಮವಹಿಸಬೇಕು.

ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು. ಅದರೊಂದಿಗೆ ಮುಖ್ಯವಾಗಿ ಕೇಂದ್ರ ಶಿಕ್ಷಣ ಸಚಿವರು ತಮ್ಮ ಅಸಮರ್ಥತೆ, ವೈಫಲ್ಯಕ್ಕಾಗಿ ರಾಜೀನಾಮೆ ನೀಡಬೇಕು ಎಂದರು.

**ವೈಫಲ್ಯಗಳನ್ನು ಮರೆಮಾಚಲು ನಾಟಕ**

ಪ್ರಧಾನಿ ವಿದೇಶಕ್ಕೆ ಹೋಗಬೇಡಿ ಎಂದು ಹೇಳಿ ವಿದೇಶ ತಿರುಗುತ್ತಾರೆ. ವಿದೇಶಕ್ಕೆ ಹೋದ ತಕ್ಷಣ ನೀಟ್ ಪತ್ರಿಕೆ ಸೋರಿಯಾಗುತ್ತಿದೆ. ವೈಫಲ್ಯಗಳನ್ನು ಮರೆಮಾಚಲು ನಾಟಕವಾಡಲಾಗುತ್ತಿದೆ. ಆದರೆ ನಾವು ಜೀರಳೆಗಳಲ್ಲ ಈ ದೇಶದ ಭಾಗ. ಗಾಂಧೀಜಿಯವರು ತಿಳಿಸಿದಂತೆ ನಾವು ಈ ಕೆಟ್ಟ ವ್ಯವಸ್ಥೆಯ ವಿರುದ್ಧ ಸತ್ಯಾಗ್ರಹ ಮಾಡಬೇಕಾಗಿದೆ ಎಂದು ಕರೆ ನೀಡಿದರು.

> ''ಮಾನವೀಯತೆ, ಮೌಲ್ಯ ಶಿಕ್ಷಣಯಿಲ್ಲದೆ ಪ್ರಸ್ತುತ ಶೈಕ್ಷಣಿಕ ವ್ಯವಸ್ಥೆ ಬರಗೆಟ್ಟು ಹೋಗಿದೆ.ವಿದ್ಯಾರ್ಥಿಗಳ ಕ್ರಿಯಾತ್ಮಕತೆಯನ್ನು ಸ್ಪರ್ಧಾತ್ಮಕ ಪರೀಕ್ಷೆ ಮೂಲಕ ಕೊಲ್ಲಲಾಗುತ್ತಿದೆ ಇದರ ಕಾರಣ ಶೈಕ್ಷಣಿಕ ವ್ಯವಸ್ಥೆ ಇದೀಗ ಶೂನ್ಯವಾಗಿ ಮಾರ್ಪಟ್ಟಿದೆ.
> -ಮಾಜಿ ರಾಷ್ಟ್ರೀಯ ಕಾರ್ಯದರ್ಶಿ ನಿಹಾಲ್ ಕಿದಿಯೂರು

# ಸಮಸ್ಯೆ ಸಾಗರದಷ್ಟಿವೆ; ಖಜಾನೆ ಖಾಲಿ: ಶಾಸಕ ಬಿ.ಪಿ. ಹರೀಶ್

- ಉದಯವಾಹಿನಿ ಹರಿಹರ:


ಉದಯವಾಹಿನಿ ಚಿತ್ರ

'ಒದಗಿಸಬೇಕಾದ ಸೌಲಭ್ಯಗಳು ಸಾಗರದಷ್ಟಿವೆ. ಆದರೆ, ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿದೆ. ಹೀಗಾಗಿ ಇರುವುದರಲ್ಲೇ ನೆಮ್ಮದಿ ಕಾಣಬೇಕಿದೆ' ಎಂದು ಶಾಸಕ ಬಿ.ಪಿ. ಹರೀಶ್ ಹೇಳಿದರು ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ನಡೆದ ಸಾರ್ವಜನಿಕರ ಕುಂದುಕೊರತೆ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ವಿವಿಧ ವಾರ್ಡ್‌ಗಳಲ್ಲಿ ಮೂಲಸೌಕರ್ಯ, ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲು ಸಾರ್ವಜನಿಕರು ಒತ್ತಾಯಿಸಿದಾಗ ಮೇಲಿನಂತೆ ಪ್ರತಿಕ್ರಿಯಿಸಿದರು. 'ನಗರದ ಪಟೇಲ್ ಬಡಾವಣೆಯಲ್ಲಿ ಕನಿಷ್ಠ ಮೂಲಸೌಕರ್ಯವಿಲ್ಲದೆ ಹಾವು, ಚೇಳುಗಳ ಹಾವಳಿ ಹೆಚ್ಚಿದೆ ಹಾಗೂ ಡೆಂಗಿ ಹರಡುತ್ತಿದೆ. ಕಂದಾಯ ಕಟ್ಟಿಸಿಕೊಂಡರೂ ಅಧಿಕಾರಿಗಳು ಇದೊಂದು ಅನಧಿಕೃತ ಬಡಾವಣೆ ಎನ್ನುತ್ತಾರೆ' ಎಂದು ನಿವಾಸಿ ಪದ್ಮಾವತಿ ಮತ್ತಿತರರು ಸಭೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ ವರದಿ ನೀಡಿ ಎಂದು ಪೌರಾಯುಕ್ತ ಹಾಗೂ ಎಇಇಗೆ ಸೂಚಿಸಿದರು, ತಾವೂ ಸ್ಥಳಕ್ಕೆ ಭೇಟಿ ಪರಿಶೀಲಿಸುವುದಾಗಿ' ಶಾಸಕರು ತಿಳಿಸಿದರು. ಹಾಗೂ ಅದೇ ಸಂಸ್ಥೆ ರಾಜಕಾಲುವೆ ಒತ್ತುವರಿ ಮಾಡಿದೆ ಎಂದು ಡಿಎಸ್‌ಎಸ್ ಸಂಚಾಲಕ ಪಿ.ಜೆ. ಮಹಾಂತೇಶ್ ಆರೋಪಿಸಿದರು. ಈ ಬಗ್ಗೆ ಪರಿಶೀಲಿಸಲು ಪೌರಾಯುಕ್ತರಿಗೆ ಹಾಗೂ ಒತ್ತುವರಿ ಸರ್ವೆ ಮಾಡಿಸಲು ತಹಶೀಲ್ದಾರ್‌ಗೆ ಸೂಚಿಸಿದರು. ಕೋಟ್ಯಂತರ ರೂಪಾಯಿ ವೆಚ್ಚದ ಈಜುಕೊಳ ಬಂದ್ ಆಗಿರುವ ಬಗ್ಗೆ ಕೇಳಿದಾಗ, ಅಗತ್ಯ ಕ್ರಮ ಕೈಗೊಳ್ಳಲು ಯುವಜನ ಸೇವಾ ಇಲಾಖೆ ಅಧಿಕಾರಿಗಳಿಗೆ ತಿಳಿಸುವುದಾಗಿ ಹೇಳಿದರು. ಕೋಟ್ಯಂತರ ರೂಪಾಯಿ ವೆಚ್ಚದಲ್ಲಿ ನಿರ್ಮಿಸಿದ ಫುಟ್‌ಪಾತ್‌ಗಳನ್ನು ಆಕ್ರಮಿಸಿರುವ ಬೀದಿಬದಿ ವ್ಯಾಪಾರಿಗಳಿಗೆ ತೊಂದರೆಯಾಗದಂತೆ ಪರ್ಯಾಯ ಜಾಗ ಗುರುತಿಸಿ ಫುಡ್ ಕೋರ್ಟ್ ಮಾದರಿಯಲ್ಲಿ ನಿರ್ಮಾಣ ಮಾಡಿ ಅಲ್ಲಿಗೆ ಸ್ಥಳಾಂತರಿಸಲು ಸೂಚಿಸಿದರು. ಹರಪನಹಳ್ಳಿ ರಸ್ತೆಯ ರೈಲ್ವೆ ಕೆಳಸೇತುವೆಯಲ್ಲಿ ಮಳೆನೀರು ನಿಲ್ಲುವ ಕುರಿತು ಸಭೆಯಲ್ಲೇ ರೈಲ್ವೆ ಎಇಇಗೆ ಕರೆ ಮಾಡಿ ಶಾಸಕರು ತರಾಟೆಗೆ ತೆಗೆದುಕೊಂಡರು. ಕಾಮಗಾರಿ ಅನುಮೋದನೆಯಾಗಿದ್ದು, ರಸ್ತೆ ಬಂದ್ ಮಾಡಬೇಕಿದೆ ಎಂದು ಎಇಇ ತಿಳಿಸಿದಾಗ, 'ಜಿಲ್ಲಾಧಿಕಾರಿ ಹಾಗೂ ಪೊಲೀಸ್ ಇಲಾಖೆ ನೆರವು ಪಡೆದುಕೊಂಡು ಶೀಘ್ರವೇ ಕಾಮಗಾರಿ ಆರಂಭಿಸುವಂತೆ' ತಾಕೀತು ಮಾಡಿದರು.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ಕ್ರೀಡೆಗಳು ಮತ್ತು ಇತರ ಹೊರಾಂಗಣ ಚಟುವಟಿಕೆಗಳಲ್ಲಿ ಭಾಗವಹಿಸುವುದು ನಿಮ್ಮ ಕಳೆದುಕೊಂಡ ಚೈತನ್ಯವನ್ನು ಸಂಗ್ರಹಿಸಲು ಸಹಾಯ ಮಾಡುತ್ತದೆ. ಉದ್ಯೋಗಕ್ಕೆ ಸಂಬಂಧಿಸಿರುವ ಜನರಿಗೆ ಇಂದು ಹಣದ ಬಹಳಷ್ಟು ಅಗತ್ಯವಿರುತ್ತದೆ ಅನಗತ್ಯ ಖರ್ಚುಗಳ ಕಾರಣದಿಂದಾಗಿ ಅವರ ಹತ್ತಿರ ಸಾಕಷ್ಟು ಹಣ ಇರುವುದಿಲ್ಲ..

**ವೃಷಭ** ಕೆಲಸದ ಒತ್ತಡ ಸ್ವಲ್ಪ ಒತ್ತಡ ತರಬಹುದು. ನೀವು ವಿಪರೀತವಾಗಿ ಖರ್ಚು ಮಾಡುವುದನ್ನು ನಿಲ್ಲಿಸಿದಾಗ ಮಾತ್ರ ನಿಮ್ಮ ಹಣವು ನಿಮ್ಮ ಕೆಲಸಕ್ಕೆ ಬರುತ್ತದೆ, ನೀವು ಈ ವಿಷಯವನ್ನು ಚೆನ್ನಾಗಿ ಅರ್ಥಮಾಡಿಕೊಳ್ಳಬಹುದು. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ.

**ಮಿಥುನ** ಕುತ್ತಿಗೆ / ಬೆನ್ನಿನಲ್ಲಿ ನಿರಂತರ ನೋವಿನಿಂದ ಬಳಲುವ ಸಾಧ್ಯತೆಯಿದೆ. ವಿಶೇಷವಾಗಿ ಇದರ ಜೊತೆ ಸಾಮಾನ್ಯ ದೌರ್ಬಲ್ಯವಿದ್ದಾಗ ಇದನ್ನು ನಿರ್ಲಕ್ಷಿಸದಿರಿ. ವಿಶ್ರಾಂತಿ ಬಹಳ ಪ್ರಮುಖವಾಗಿರುತ್ತದೆ. ನೀವು ನಿಮ್ಮನ್ನು ಒಂದು ರೋಮಾಂಚಕಾರಿ ಪರಿಸ್ಥಿತಿಯಲ್ಲಿ ಕಂಡುಕೊಳ್ಳಬಹುದು ಲಾಭವನ್ನೂ ತರುತ್ತದೆ.

**ಕರ್ಕಾಟಕ** ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನಿಮ್ಮ ಮೂಲಕ ಹಣವನ್ನು ಉಳಿಸಲು ಮಾಡಲಾಗಿರುವ ಪ್ರಯತ್ನವು ಇಂದು ವಿಫಲವಾಗಬಹುದು, ಹೇಗಾದರೂ, ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ, ಪರಿಸ್ಥಿತಿ ಶೀಘ್ರದಲ್ಲೇ ಸುಧಾರಿಸುತ್ತದೆ.

**ಸಿಂಹ** ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಮನೆಯ ಅಗತ್ಯಗಳನ್ನು ನೋಡುತ್ತಾ, ಇಂದು ನೀವು ನಿಮ್ಮ ಜೀವನ ಸಂಗಾತಿಯೊಂದಿಗೆ ಯಾವುದೇ ಅಮೂಲ್ಯ ವಸ್ತುವನ್ನು ಖರೀದಿಸಬಹುದು, ಇದರಿಂದ ಆರ್ಥಿಕ ಪರಿಸ್ಥಿತಿ ಸ್ವಲ್ಪ ತೊಂದರೆಗೊಳಗಾಗಬಹುದು.

**ಕನ್ಯಾ** ನಿಮ್ಮ ನೀಡುವ ವರ್ತನೆ ಪರೋಕ್ಷವಾಗಿ ನಿಮಗೆ ಆಶೀರ್ವಾದವೇ ಆಗುತ್ತದೆ, ಏಕೆಂದರೆ ನೀವು ಅನುಮಾನ, ನಿರಾಸೆ, ವಿಶ್ವಾಸರಾಹಿತ್ಯ, ಅಹಂಭಾವ ಮತ್ತು ಅಸೂಯೆಯಂಥ ಅನೇಕ ದುರ್ಗುಣಗಳಿಂದ ಮುಕ್ತಿ ಹೊಂದುವ ಸಾಧ್ಯತೆಗಳಿವೆ. ನೀವು ಸಾಕಷ್ಟು ಸಕಾರಾತ್ಮಕತೆಯೊಂದಿಗೆ ಮನೆಯಿಂದ ಹೊರಬರುತ್ತೀರಿ.

**ತುಲಾ** ಏನಾದರೂ ಆಸಕ್ತಿದಾಯಕವಾದದ್ದನ್ನು ಓದುವ ಮೂಲಕ ಮಾನಸಿಕ ವ್ಯಾಯಾಮ ಮಾಡಿ. ನೀವು ವಿಧ್ಯಾರ್ಥಿಯಾಗಿದ್ದರೆ ಮತ್ತು ವಿದೇಶಕ್ಕೆ ಹೋಗಿ ಅಧ್ಯಯನ ಮಾಡಲು ಬಯಸುತ್ತಿದ್ದರೆ ಆರ್ಥಿಕ ಬಿಕ್ಕಟ್ಟು ಇಂದು ನಿಮ್ಮ ಹಣೆಯ ಮೇಲೆ ಸುಕ್ಕು ತರಬಹುದು.

**ವೃಶ್ಚಿಕ** ಆಧ್ಯಾತ್ಮಿಕ ಜೀವನದ ಪೂರ್ವಾಪೇಕ್ಷಿತವಾಗಿರುವಂತಹ ನಿಮ್ಮ ಮಾನಸಿಕ ಆರೋಗ್ಯವನ್ನು ಕಾಯ್ದುಕೊಳ್ಳಿ. ಒಳ್ಳೆಯದೂ ಹಾಗೂ ಕೆಟ್ಟದೆಲ್ಲವೂ ಮನಸ್ಸಿನ ಮೂಲಕವೇ ಬರುವುದರಿಂದ ಬುದ್ಧಿ ಜೀವನದ ಹೆಬ್ಬಾಗಿಲಾಗಿದೆ. ಇದು ಜೀವನದ ಸಮಸ್ಯೆಗಳನ್ನು ಪರಿಹರಿಸುವಲ್ಲಿ ಸಹಾಯ ಮಾಡುತ್ತದೆ.

**ಧನಸ್ಸು** ನಿಮ್ಮ ಸಂತೋಷದ ಪ್ರಕೃತಿ ಇತರರಿಗೆ ಸಂತೋಷ ತರುತ್ತದೆ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ ಆದರೆ ನಿಮ್ಮ ಸಾಕಷ್ಟು ಹಣ ಇರುವುದಿಲ್ಲ.

**ಮಕರ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು ಮತ್ತು ನೀವು ಹಣದಿಂದ ಲಾಭ ಪಡೆಯಬಹುದು. ಧಾರ್ಮಿಕ ಸ್ಥಳಕ್ಕೆ ಅಥವಾ ಸಂಬಂಧಿಗಳ ಭೇಟಿ ಸಾಧ್ಯವಿದೆ. ಇಂದು ಸಂವಹನ ನಿಮ್ಮ ಬಲವಾಗಿರುತ್ತದೆ.

**ಕುಂಭ** ಸಂತಸದ ಪ್ರಯಾಣ ಮತ್ತು ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ಆರ್ಥಿಕವಾಗಿ ಇಂದು ನೀವು ಸಾಕಷ್ಟು ಬಲವಾಗಿ ಕಾಣುವಿರಿ, ಗ್ರಹ ಮತ್ತು ನಕ್ಷತ್ರಗಳ ಚಲನೆಯಿಂದ ಇಂದು ನಿಮಗಾಗಿ ಹಣವನ್ನು ಸಂಪಾದಿಸುವ ಅನೇಕ ಅವಕಾಶಗಳು ಉಂಟಾಗುತ್ತವೆ.

**ಮೀನ** ದೇಹದ ನೋವು ಮತ್ತು ಒತ್ತಡ ಸಂಬಂಧಿತ ಸಮಸ್ಯೆಗಳನ್ನು ತಳ್ಳಿಹಾಕಲು ಸಾಧ್ಯವಿಲ್ಲ. ಮನೆಯಲ್ಲಿ ಯಾವುದೇ ಕಾರ್ಯಕ್ರಮ ನಡೆಯುವ ಕಾರಣದಿಂದಾಗಿ ಇಂದು ನೀವು ನಿಮ್ಮ ಸಾಕಷ್ಟು ಹಣವನ್ನು ಖರ್ಚು ಮಾಡಬೇಕಾಗುತ್ತದೆ, ಕಾರಣದಿಂದಾಗಿ ನಿಮ್ಮ ಆರ್ಥಿಕ ಪರಿಸ್ಥಿತಿ ಹದಗೆಡಬಹುದು.

# ಸಂಸ್ಕರಿಸದೆ ನದಿಗೆ ತ್ಯಾಜ್ಯ ಹರಿಸಿದರೆ ಕ್ರಿಮಿನಲ್ ಮೊಕದ್ದಮೆ

**ತ್ಯಾಜ್ಯ ಜಲ ಸಂಸ್ಕರಣಾ ಘಟಕಗಳ ಪರಿಶೀಲನೆ ಮಾಡಬೇಕು, ಯಾರೇ ಸಂಸ್ಕರಿಸದೆ ತ್ಯಾಜ್ಯ ನದಿಗೆ ಬಿಟ್ಟದ್ದರೆ ಮೊದಲಿಗೆ ಎಚ್ಚರಿಕೆ ನೀಡಬೇಕು.**

• **ಉದಯವಾಹಿನಿ, ಕುಕ್ಕೆಸುಬ್ರಹ್ಮಣ್ಯ:**



ಉದಯವಾಹಿನಿ ಚಿತ್ರ

ಸಂಸ್ಕರಿಸದೆ ನದಿಗೆ ತ್ಯಾಜ್ಯ ಹರಿಸಿದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ ಖಂಡ್ರೆ ಮಂಗಳವಾರ ಖಡಕ್ ಸೂಚನೆ ನೀಡಿದ್ದಾರೆ.ಕುಕ್ಕೆ ಸುಬ್ರಹ್ಮಣ್ಯದಲ್ಲಿ ದೇವರ ದರ್ಶನ ಮಾಡಿದ ತರುವಾಯ ಸುದ್ದಿಗಾರರ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಕುಮಾರಧಾರಾ ನದಿಗೆ ತ್ಯಾಜ್ಯವನ್ನು ನೇರವಾಗಿ ಹರಿಯಬಿಡುತ್ತಿರುವವರ ಮೇಲೆ ಕ್ರಮ ವಹಿಸಲು ಸೂಚಿಸಿದರುವುದಾಗಿ ತಿಳಿಸಿದರು. ಸ್ಥಳೀಯ ಸಂಸ್ಥೆಗಳು ಈ ಬಗ್ಗೆ ನಿಗಾ ಇಡಬೇಕು, ತ್ಯಾಜ್ಯ ಜಲ ಸಂಸ್ಕರಣಾ ಘಟಕಗಳ ಪರಿಶೀಲನೆ ಮಾಡಬೇಕು, ಯಾರೇ ಸಂಸ್ಕರಿಸದೆ ತ್ಯಾಜ್ಯ ನದಿಗೆ ಬಿಟ್ಟದ್ದರೆ ಮೊದಲಿಗೆ ಎಚ್ಚರಿಕೆ ನೀಡಬೇಕು. ಪದೇ ಪದೇ ಇದೇ ತಪ್ಪು ಮಾಡಿದರೆ ಕ್ರಿಮಿನಲ್ ಮೊಕದ್ದಮೆ ದಾಖಲಿಸಬೇಕು ಎಂದು ತಿಳಿಸಿದರು.

**ತ್ಯಾಜ್ಯ ಜಲ ಸಂಸ್ಕರಣಾ**

ಕುಕ್ಕೆ ಸುಬ್ರಹ್ಮಣ್ಯಕ್ಕೆ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ. ಅವರ ಮೇಲೆ ವನ್ಯಜೀವಿ ದಾಳಿ ಮಾಡದಂತೆ ಎಚ್ಚರ ವಹಿಸಲು ಮತ್ತು ಚಿರತೆ ಸಮಸ್ಯೆ ಇರುವ ಕಡೆಗೆ ಹೆಚ್ಚಿನ ಬೋನು ನೀಯೋಜಿಸಲು ಮತ್ತು ಆನೆಗಳು ಬಾರದಂತೆ ಕಂದಕ ಕಾಮಗಾರಿ ಪೂರ್ಣಗೊಳಿಸಲು ಮತ್ತು ಸೌರ ತಂತಿ ಬೇಲಿ ಅಳವಡಿಸಲು ಸೂಚಿಸಿದರು. ಮಾನವನ ಜೀವ ಅತ್ಯಮೂಲ್ಯವಾಗಿದ್ದು ಒಂದೇ ಒಂದು ಪ್ರಾಣಹಾನಿಯೂ ಆಗಬಾರದು.

ಈ ನಿಟ್ಟಿನಲ್ಲಿ ಕ್ರಮ ವಹಿಸಲು ಅರಣ್ಯಾಧಿಕಾರಿಗಳಿಗೆ ತಿಳಿಸಲಾಗಿದೆ. ವನ್ಯಜೀವಿಗಳ ಸಂಚಾರದ ಬಗ್ಗೆ ನಿಗಾ ಇಡಲು ಡ್ರೋನ್ ಸೇರಿದಂತೆ ಅತ್ಯಾಧುನಿಕ ಉಪಕರಣಗಳನ್ನು ಬಳಸಲಾಗುತ್ತಿದೆ. ಕಮಾಂಡ್ ಸೆಂಟರ್ ತೆರೆಯಲಾಗಿದೆ ಎಂದು ತಿಳಿಸಿದರು. ಕುಕ್ಕೆ ಸುಬ್ರಹ್ಮಣ್ಯಕ್ಕೆ ಲಕ್ಷಾಂತರ ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಾರೆ.

ಅವರ ಮೇಲೆ ವನ್ಯಜೀವಿ ದಾಳಿ ಮಾಡದಂತೆ ಎಚ್ಚರ ವಹಿಸಲು ಮತ್ತು ಚಿರತೆ ಸಮಸ್ಯೆ ಇರುವ ಕಡೆಗೆ ಹೆಚ್ಚಿನ ಬೋನು ನೀಯೋಜಿಸಲು ಮತ್ತು ಆನೆಗಳು ಬಾರದಂತೆ ಕಂದಕ ಕಾಮಗಾರಿ ಪೂರ್ಣಗೊಳಿಸಲು ಮತ್ತು ಸೌರ ತಂತಿ ಬೇಲಿ ಅಳವಡಿಸಲು ಸೂಚಿಸಿದರು.

> ತಾವು ದೇವಾಲಯಕ್ಕೆ ಬರುವಾಗ ರಸ್ತೆಯ ಬದಿಯಲ್ಲಿ ಪ್ಲಾಸ್ಟಿಕ್ ಬಾಟಲಿ, ತಟ್ಟೆ ಇತ್ಯಾದಿ ಬಿದ್ದಿರುವುದನ್ನು ನೋಡಿ ಆತಂಕವಾಯಿತು.ಕೂಡಲೇ ಅಧಿಕಾರಿಗಳ ಸಭೆ ನಡೆಸಿ ಚೆಕ್ ಪೋಸ್ಟ್ ಸ್ಥಾಪಿಸಿ 2 ಹಂತದ ತಪಾಸಣೆ ಮಾಡಲು ಸೂಚಿಸಿರುವುದಾಗಿ ಈಶ್ವರ ಖಂಡ್ರೆ ತಿಳಿಸಿದರು.

### ಸುಪ್ರೀಂಕೋರ್ಟ್ ಗೆ ಸಲ್ಲಿಸಿದ ಪ್ರಮಾಣ ಪತ್ರ

ರಾಜ್ಯದಲ್ಲಿ ಡೀಮ್ಡ್ ಅರಣ್ಯಕ್ಕೆ ಸಂಬಂಧಿಸಿದಂತೆ ಸಮಸ್ಯೆ ಇದೆ. ಬಿಜೆಪಿ ಕಾರ್ಯಕಾಲದಲ್ಲಿ 2022ರಲ್ಲಿ ಸುಪ್ರೀಂಕೋರ್ಟ್ ಗೆ ಸಲ್ಲಿಸಿದ ಪ್ರಮಾಣ ಪತ್ರದಲ್ಲಿ 3.33 ಲಕ್ಷ ಹೆಕ್ಟೇರ್ ಭೂಮಿ ಡೀಮ್ಡ್ ಎಂದು ಉಲ್ಲೇಖಿಸಲಾಗಿದೆ. ಆದರೆ ಇದರಲ್ಲೂ ಅಂಗನವಾಡಿ, ಸರ್ಕಾರಿ ಆಸ್ಪತ್ರೆ, ಪಟ್ಟಾ ಭೂಮಿ ಇದ್ದು, ಈ ಸಮಸ್ಯೆ ಪರಿಹರಿಸಲು ಕಂದಾಯ ಇಲಾಖೆಯ ಜೊತೆಯಲ್ಲಿ ಜಂಟಿ ಸರ್ವೆ ನಡೆಸುತ್ತಿರುವುದಾಗಿ ತಿಳಿಸಿದರು.

## ಲಕ್ಷ್ಮಿ ಆನೆ ಸ್ಥಳಾಂತರಕ್ಕೆ ಸ್ಥಳೀಯರಿಂದ ಭಾರೀ ವಿರೋಧ

• **ಉದಯವಾಹಿನಿ ಹಂಪಿ:**



ಉದಯವಾಹಿನಿ ಚಿತ್ರ

ಯುನೆಸ್ಕೋ ವಿಶ್ವಪರಂಪರೆಯ ತಾಣವಾದ ಹಂಪಿಯಲ್ಲಿ ಮಂಗಳವಾರ ಅರಣ್ಯ ಇಲಾಖೆಯು, ಪ್ರಸಿದ್ಧ ವಿರೂಪಾಕ್ಷ ದೇವಾಲಯಕ್ಕೆ ಸೇರಿದ 36 ವರ್ಷದ ಆನೆ ಲಕ್ಷ್ಮಿಯನ್ನು ಸ್ಥಳಾಂತರಿಸಲು ಕ್ರಮ ಕೈಗೊಂಡ ನಂತರ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು, ಇದು ಸ್ಥಳೀಯ ನಿವಾಸಿಗಳು, ಭಕ್ತರು ಮತ್ತು ಪ್ರವಾಸಿ ಮಾರ್ಗದರ್ಶಕರಿಂದ ಭಾವನಾತ್ಮಕ ಪ್ರತಿಭಟನೆಗೆ ಕಾರಣವಾಯಿತು.

500ಕ್ಕೂ ಹೆಚ್ಚು ಸ್ಥಳೀಯರು ದೇವಾಲಯದ ಆವರಣದ ಬಳಿ ಜಮಾಯಿಸಿ ಅರಣ್ಯ ಇಲಾಖೆ ಕ್ರಮವನ್ನು ತೀವ್ರವಾಗಿ ವಿರೋಧಿಸಿದರು. ಹಲವು ವರ್ಷಗಳಿಂದ ಈ ಆನೆ ಹಂಪಿಯ ಸಾಂಸ್ಕೃತಿಕ ಮತ್ತು ಆಧ್ಯಾತ್ಮಿಕ ಗುರುತಿನ ಅವಿಭಾಜ್ಯ ಅಂಗವಾಗಿದೆ ಎಂದು ಹೇಳಿದರು. ಯಾವುದೇ ಸಂದರ್ಭದಲ್ಲೂ ಆನೆಯನ್ನು ಪಾರಂಪರಿಕ ಪಟ್ಟಣದಿಂದ ತೆಗೆದುಕೊಂಡು ಹೋಗಬಾರದು ಎಂದು ಪ್ರತಿಭಟನಾಕಾರರು

## ಕಾಲಿಗೆ ಗುಂಡು ಹಾರಿಸಿದ ಉದ್ಯಮಿಯ ಅಂಗರಕ್ಷಕ


• **ಉದಯವಾಹಿನಿ ಧಾರವಾಡ,:**

ಜಮೀನು ವ್ಯಾಜ್ಯ ವಿಚಾರವಾಗಿ ಎರಡು ಗುಂಪುಗಳ ನಡುವೆ ಗಲಾಟೆ ಉಂಟಾಗಿದ್ದು, ಈ ವೇಳೆ ಹುಬ್ಬಳ್ಳಿಯ ಉದ್ಯಮಿ ಫೆಲೋಮಿನಾ ಅಂಗರಕ್ಷಕರಿಂದ ಯುವಕನ ಕಾಲಿಗೆ ಫೈರಿಂಗ್ ಮಾಡಿರುವಂತಹ ಘಟನೆ ಧಾರವಾಡ ಹೊರವಲಯದ ತ್ರಿಬಲ್ ಐಟಿ ಬಳಿ ನಡೆದಿದೆ. ಅಂಗರಕ್ಷಕರಿಂದ 8 ಸುತ್ತು ಫೈರಿಂಗ್ ಮಾಡಲಾಗಿದ್ದು, 24 ವರ್ಷದ ವಿಠ್ಠಲ್ ವಾಲೀಕಾರ್ ಕಾಲಿಗೆ ಗುಂಡು ತಗುಲಿದೆ.

ಸದ್ಯ ಗಾಯಾಳು ವಿಠ್ಠಲ್?ಧಾರವಾಡದ ಖಾಸಗಿ ಆಸ್ಪತ್ರೆಗೆ ದಾಖಲಾಗಿದ್ದಾರೆ. ವಸತಿ ನಿವೇಶನ ಮಾಡಲು ಸ್ಥಳೀಯರಿಂದ ತೀವ್ರ ವಿರೋಧ ವ್ಯಕ್ತವಾಗಿದೆ. ನಮ್ಮ ಪರ ತೀರ್ಪು ಬಂದಿದೆ ಅಂತಾ ಫಿಲೋಮಿನಾ ವಾದಿಸಿದ್ದಾರೆ. ಈ ವೇಳೆ 2 ಗುಂಪುಗಳ ನಡುವೆ ಗಲಾಟೆಯಾಗಿ ಗುಂಡಿನ ದಾಳಿ ನಡೆದಿದೆ. ಸದ್ಯ ಧಾರವಾಡ ವಿದ್ಯಾಗಿರಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

# ಪಶು ವೈದ್ಯಕೀಯ ವಿವಿಯಲ್ಲಿ 45 ಕೋಟಿ ರೂ. ಹಗರಣ: ಆರು ಮಂದಿ ಬಂಧನ

• **ಉದಯವಾಹಿನಿ ,ಬೀದರ್:**




ಉದಯವಾಹಿನಿ ಚಿತ್ರ



ಉದಯವಾಹಿನಿ ಚಿತ್ರ

ನಗರದ ಕರ್ನಾಟಕ ಪಶು ವೈದ್ಯಕೀಯ, ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಲ್ಲಿ ನಕಲಿ ಬಿಲ್ ಸೃಷ್ಟಿಸಿ 45 ಕೋಟಿ ಹಗರಣ ಮಾಡಿ, ಅಕ್ರಮ ಎಸಗಿರುವ ಆರೋಪದ ಮೇರೆಗೆ ಲೋಕಾಯುಕ್ತ ಪೊಲೀಸರು ಪಶು ವೈದ್ಯಕೀಯ ವಿವಿ ವಿಶ್ರಾಂತ ಕುಲಪತಿ, ನಿವೃತ್ತ ಕಂಟ್ರೋಲರ್ ಸೇರಿದಂತೆ ಆರು ಮಂದಿಯನ್ನು ಬಂಧಿಸಿದ್ದಾರೆ.

ವಿಶ್ರಾಂತ ಕುಲಪತಿ ಎಚ್ ಡಿ ನಾರಾಯಣಸ್ವಾಮಿ, ನಿವೃತ್ತ ಪ್ರಭಾರ ಹಣಕಾಸು ನಿಯಂತ್ರಣಾಧಿಕಾರಿ ಕೆ ಎಲ್ ಸುರೇಶ್, ಎಫ್‌ಡಿಎ ಮೃತ್ಯುಂಜಯ ಹಿರೇಮಠ, ಬೆಂಗಳೂರು ಎಂಟರ್ ಪ್ರೈಸೆಸ್ ಮಾಲೀಕರಾದ ಬೊಪ್ಪಣ್ಣ, ಮಂಜುನಾಥ ಹಾಗೂ ರಾಮಗೊಂಡ ಬಂಧಿತರು. 2017–18ರಲ್ಲಿ 45 ಕೋಟಿಗೂ ಅಧಿಕ ಹಣದ ನಕಲಿ ಬಿಲ್ ಸೃಷ್ಟಿಸಿ ಅಕ್ರಮ ಎಸಗಿರುವ ಆರೋಪವಿದೆ. ಈ ಅವಧಿಯಲ್ಲಿ ನಾರಾಯಣಸ್ವಾಮಿ ಕುಲಪತಿ, ಕೆ ಎಲ್ ಸುರೇಶ್ ಕಂಟ್ರೋಲರ್ ಆಗಿದ್ದರು. ವಿವಿ ಎಫ್‌ಡಿಎ ಮೃತ್ಯುಂಜಯ ಹಿರೇಮಠ ಅವರು ಬೆಂಗಳೂರಿನ ಖಾಸಗಿ ಎಂಟರ್ ಪ್ರೈಸೆಸ್ ಜೊತೆಯಲ್ಲಿ ಸೇರಿಕೊಂಡು ಅಕ್ರಮ ಎಸಗಿರುವ ಆರೋಪವಿರುವುದಾಗಿ ತಿಳಿದುಬಂದಿದೆ.ಪ್ರಕರಣ ಸಂಬಂಧ ನ್ಯಾಯಾಲಯ ವಾರೆಂಟ್ ಜಾರಿಗೊಳಿಸಿತ್ತು. ಇದರ ಬೆನ್ನಲ್ಲೇ ಸಕ್ರಿಯವಾದ ಲೋಕಾಯುಕ್ತ ಪೊಲೀಸರು ಕೆಲವರನ್ನು ಬೀದರ್ ಹಾಗೂ ಕೆಲ ಆರೋಪಿಗಳನ್ನು ಬೆಂಗಳೂರಿನಲ್ಲಿ ಬಂಧಿಸಿ ಬೀದರ್ ನ್ಯಾಯಾಲಯಕ್ಕೆ ಕರೆತಂದಿದ್ದಾರೆ.ಲೋಕಾಯುಕ್ತ ಎಡಿಜಿಪಿ ಮನೀಷ್ ಕರ್ಬಿಕರ್, ಐಜಿಪಿ ಎ ಎಸ್ ಸುಬ್ರಹ್ಮಣ್ಯಶ್ವರರಾವ್, ಎಸ್‌ಪಿಗಳಾದ ಬದ್ರಿನಾಥ, ಸಿದ್ದರಾಜು ಅವರ ಮಾರ್ಗದರ್ಶನದಲ್ಲಿ ಬೀದರ್ ಲೋಕಾಯುಕ್ತ ಡಿವೈಎಸ್‌ಪಿ ಹಣಮಂತರಾಯ, ಸಂತೋಷ ರಾಠೋಡ್ ಸೇರಿದಂತೆ ಇತರೆ ಸಿಬ್ಬಂದಿ ಕಾರ್ಯಾಚರಣೆಯಲ್ಲಿ ಉಪಸ್ಥಿತರಿದ್ದರು.

## ಪೆಟ್ರೋಲ್ ಬಂದ್ ಕೃತಕ ಅಭಾವ ಸೃಷ್ಟಿ

• **ಉದಯವಾಹಿನಿ ,ಬಳ್ಳಾರಿ, :**



ಉದಯವಾಹಿನಿ ಚಿತ್ರ

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಪೆಟ್ರೋಲ್ ಹಾಗೂ ಡೀಸೆಲ್ ಬೆಲೆ ಏರಿಕೆಯಾಗುತ್ತಿರುವ ನಡುವೆಯೇ ಬಳ್ಳಾರಿ ಜಿಲ್ಲೆಯ ಕಂಪ್ಲಿ ಪಟ್ಟಣ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಹಲವು ಪೆಟ್ರೋಲ್ ಬಂಕ್ಗಳು ಅಚಾನಕ್ ಬಂದ್ ಆಗಿರುವುದು ಸಾರ್ವಜನಿಕರಲ್ಲಿ ಆತಂಕ ಹಾಗೂ ಆಕ್ರೋಶಕ್ಕೆ ಕಾರಣವಾಗಿದೆ. ಕಂಪ್ಲಿ ನಗರದ ಬಳ್ಳಾರಿ ರಸ್ತೆಯಲ್ಲಿರುವ ಕೆಲವು ಪ್ರಮುಖ ಪೆಟ್ರೋಲ್ ಬಂಕ್ಗಳು ದಿನಪೂರ್ತಿ ಕಾರ್ಯನಿರ್ವಹಿಸದೇ ಬಂದ್ ಆಗಿದ್ದರಿಂದ ವಾಹನ ಸವಾರರು ಇಂಧನಕ್ಕಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಯಿತು.

ಭಾರತ್ ಪೆಟ್ರೋಲಿಯಂ ಹಾಗೂ ಇಂಡಿಯನ್ ಆಯಿಲ್ ಸಂಸ್ಥೆಗಳ ಬಂಕ್ಗಳು ಬಂದ್ ಆಗಿರುವುದು ಸ್ಥಳೀಯರಲ್ಲಿ ಹಲವು ಅನುಮಾನಗಳಿಗೆ ಕಾರಣವಾಗಿದೆ. ಇನ್ನೂ ತಾಲ್ಲೂಕಿನ ಗುತ್ತಿಗನೂರು ಸಮೀಪದಲ್ಲಿರುವ ಪೆಟ್ರೋಲ್ ಬಂಕ್ ಸಹ ಕಾರ್ಯನಿರ್ವಹಿಸದೇ ಬಂದ್ ಆಗಿದ್ದರಿಂದ ಗ್ರಾಮೀಣ ಭಾಗದ ಜನರು ಕೂಡ ಸಂಕಷ್ಟ ಅನುಭವಿಸಿದರು. ಕೆಲಸದ ನಿಮಿತ್ತ ದೂರ ಪ್ರಯಾಣಕ್ಕೆ ಹೊರಟಿದ್ದ ವಾಹನ ಸವಾರರು ಬಂಕ್ಗಳಿಂದ ಖಾಲಿಹಸ್ತವಾಗಿ ಹಿಂದಿರುಗಬೇಕಾದ ಪರಿಸ್ಥಿತಿ ಎದುರಾಯಿತು. ಕೆಲವರು ಹಲವು ಕಿಲೋಮೀಟರ್ ದೂರದ ಬಂಕ್ಗಳಿಗೆ ತೆರಳಿ ಇಂಧನ ಪಡೆಯಬೇಕಾಯಿತು. ಸ್ಥಳೀಯರ ಆರೋಪದ ಪ್ರಕಾರ, ಕೆಲವು ಬಂಕ್ಗಳಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಸಂಗ್ರಹ ಇದ್ದರೂ ಸಹ ಸಾರ್ವಜನಿಕರಿಗೆ ವಿತರಣೆ ಮಾಡಲು ಮಾಲೀಕರು ಮುಂದಾಗಿಲ್ಲ ಎನ್ನಲಾಗಿದೆ. ತೈಲ ಬೆಲೆ ಮತ್ತಷ್ಟು ಏರಿಕೆಯಾಗುವ ನಿರೀಕ್ಷೆಯಲ್ಲಿ ಹೆಚ್ಚಿನ ಲಾಭ ಗಳಿಸುವ ಉದ್ದೇಶದಿಂದ ಕೆಲವರು ಉದ್ದೇಶಪೂರ್ವಕವಾಗಿ ಕೃತಕ ಅಭಾವ ಸೃಷ್ಟಿಸುತ್ತಿದ್ದಾರೆ ಎಂಬ ಆರೋಪಗಳು ಕೇಳಿಬಂದಿವೆ.

## ಆರ್ಥಿಕತೆಗೆ ಜೀವ ತುಂಬುವ 'ಸಂಜೀವಿನಿ'

• **ಉದಯವಾಹಿನಿ ,ಪುತ್ತೂರು;**

ಒಂದು ಕಾಲದಲ್ಲಿ ನಾಲ್ಕು ಗೋಡೆಗಳ ನಡುವೆ ಆರ್ಥಿಕ ಗಟ್ಟಿತನವಿಲ್ಲದೆ ಬದುಕುತ್ತಿದ್ದ ಮಹಿಳೆಯರು ಇಂದು ಸಾಕಷ್ಟು ಪ್ರಮಾಣದಲ್ಲಿ ಸಬಲೀಕರಣಗೊಂಡಿದ್ದಾರೆ. ಬಹುತೇಕ ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆಯನ್ನು ಬಿಂಬಿಸುತ್ತಿದ್ದಾರೆ. ಸ್ವ ಉದ್ಯೋಗಗಳ ಮೂಲಕ ಗ್ರಾಮೀಣ ಭಾಗದ ಮಹಿಳೆಯರೂ ಇಂದು ಆರ್ಥಿಕ ಭದ್ರತೆಯನ್ನು ಕಂಡುಕೊಂಡಿದ್ದಾರೆ.

ಆರ್ಥಿಕವಾಗಿ ಇನ್ನೂ ಹಿಂದೆ ಉಳಿದಿರುವ ಗ್ರಾಮೀಣ ಭಾಗದ ಮಹಿಳೆಯರು ಕೂಡಾ ತಮ್ಮ ಜೀವನೋಪಾಯ ಕಂಡುಕೊಳ್ಳುವಂತೆ ಮಾಡಲು 'ಸಂಜೀವಿನಿ' ಮುಂದಾಗಿದೆ.

ಈ ನಿಟ್ಟಿನಲ್ಲಿ ತಾಲ್ಲೂಕಿನಲ್ಲಿ ಮೊತ್ತ ಮೊದಲಬಾರಿಗೆ ಜೀವನೋಪಾಯ ಸೇವಾ ಕೇಂದ್ರ ಹಲಸು ಸಂಸ್ಕರಣಾ ಉದ್ಯಮಕ್ಕೆ ಮುನ್ನುಡಿ ಬರೆದಿದೆ. ದೀನದಯಾಳ್ ಅಂತ್ಯೋದಯ ಯೋಜನೆ–ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್ ಭಾರತ ಸರ್ಕಾರದ ಪ್ರಮುಖ ಯೋಜನೆ. ರಾಜ್ಯದಲ್ಲಿ ಇದು ಸಂಜೀವಿನಿ ಹೆಸರಲ್ಲಿ ಕಾರ್ಯಾಚರಿಸುತ್ತಿದೆ. ಸಂಜೀವಿನಿ ಮೂಲಕ ಜೀವನೋಪಾಯ ಸೇವಾ ಕೇಂದ್ರಗಳನ್ನು ಅಸ್ತಿತ್ವಕ್ಕೆ ತರಲಾಗಿದ್ದು, ವಿಶೇಷವಾಗಿ ಮಹಿಳೆಯರ ಆರ್ಥಿಕ ಸ್ಥಿತಿಗೆ 'ಅರ್ಥ ಕಲ್ಪಿಸುವ ನಿಟ್ಟಿನಲ್ಲಿ ಈ ಸೇವಾ ಕೇಂದ್ರದಲ್ಲಿ ವಿವಿಧ ಉದ್ಯಮಗಳನ್ನು ಪ್ರಾರಂಭಿಸುವುದು ಇದರ ಮುಖ್ಯ ಉದ್ದೇಶವಾಗಿದೆ.

## ಪರಿಷತ್ ಸ್ಥಾನಕ್ಕೆ ಬಸವರಾಜ ಬೂದಿಹಾಳ ನೇಮಕಕ್ಕೆ ಒತ್ತಾಯ

• **ಉದಯವಾಹಿನಿ ,ಕಲಬುರಗಿ,**



ಉದಯವಾಹಿನಿ ಚಿತ್ರ

ಕೋಲಿ/ಕಬ್ಬಲಿಗ ಹಾಗೂ ಕಾಂಗ್ರೆಸ್ ಪಕ್ಷದ ಹಿಂದುಳಿದ ವರ್ಗದ ಮುಖಂಡರಾದ ಬಸವರಾಜ ಬೂದಿಹಾಳ ಅವರನ್ನು ಎಂಎಲ್‌ಸಿ ಅಥವಾ ರಾಜ್ಯ ನಿಗಮ ಮಂಡಳಿ ಅಧ್ಯಕ್ಷರನ್ನಾಗಿ ನೇಮಕ ಮಾಡಬೇಕು ಎಂದು ಜೇವರ್ಗಿ ತಾಲ್ಲೂಕ ಕೋಲಿ/ಕಬ್ಬಲಿಗ ಸಮಾಜದ ಗೌರವಾಧ್ಯಕ್ಷರಾದ ಮಲ್ಲೇಶಗೌಡ ರೇವನೂರ, ಅಧ್ಯಕ್ಷ ಮೈಲಾರಿ ಗುಡೂರ, ಮುಖಂಡರಾದ ಸಿದ್ದಣಗೌಡ ಬಿರಾದಾರ, ಉಮಾಕಾಂತ ತಳವಾರ, ಸಂತೋಷ ತಳವಾರ, ಗೊಲ್ಲಾಳಪ್ಪ ನ್ಯಾವನೂರ, ಲಗಮಣ್ಣ ತಳವಾರ, ಚಂದ್ರಶೇಖರ ನಾಟಿಕಾರ, ಮನೋಹರ ಕಾಮನಕೇರಿ ಒತ್ತಾಯಿಸಿದರು. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವರಾಜ ಬೂದಿಹಾಳ ಅವರು 1994 ರಿಂದಲೂ ದಿ.ವಿಠ್ಠಲ ಹೇರೂರ ಅವರ ಬೆಂಬಲಿಗರಾಗಿ ಸಮಾಜದ ಪ್ರತಿಯೊಂದು ಹೋರಾಟದಲ್ಲಿ ಮುಂಚೂಣಿಯಲ್ಲಿದ್ದು, ಸಮಾಜದ ಬಹುದಿನಗಳ ಬೇಡಿಕೆಯಾದ ಎಸ್‌ಟಿ ಸೇರ್ಪಡೆ ಬಗ್ಗೆ ಜಿಲ್ಲಾ ಉಸ್ತುವಾರಿ ಸಚಿವರಿಂದ ಸಿಎಂವರೆಗೆ ಭೇಟಿಯಾಗುತ್ತ ಸಾಮಾಜಿಕ ನ್ಯಾಯಕ್ಕಾಗಿ ಹೋರಾಡಿದ್ದಾರೆ.

ಈ ಹಿಂದೆ ಜೇವರ್ಗಿ ಕ್ಷೇತ್ರದಿಂದ ಒಂದುಬಾರಿ ವಿಧಾನಸಭಾ ಚುನಾವಣೆಗೆ ಸ್ಪರ್ಧಿಸಿದ್ದು, ರಾಜಕೀಯವಾಗಿ, ಸಾಮಾಜಿಕವಾಗಿ ಅತ್ಯಂತ ಕಳಕಳಿಯುಳ್ಳವರಾಗಿದ್ದಾರೆ. ದಿ.ಧರ್ಮಸಿಂಗ್ ಹಾಗೂ ಡಾ.ಮಲ್ಲಿಕಾರ್ಜುನ ಖರ್ಗೆ ಅವರ ಆಪ್ತರಲ್ಲಿ ಒಬ್ಬರಾಗಿದ್ದಾರೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೆಲ್ಲಾ ಪ್ರತಿ ಜಾತಿ, ಸಮಾಜದ ಹಿಂದುಳಿದವರಿಗೆ ಅನೇಕ ರಾಜಕೀಯ ಸ್ಥಾನಮಾನಗಳನ್ನು ನೀಡಿದೆ. ಈ ಬಾರಿ ಸಮಾಜದ ಮುಖಂಡರಾದ ಬಸವರಾಜ ಬೂದಿಹಾಳ ಅವರಿಗೆ ಎಂಎಲ್‌ಸಿ ಅಥವಾ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಬೇಕು ಎಂದು ಅವರು ಒತ್ತಾಯಿಸಿದರು.

# ಕಲಬುರಗಿಯಲ್ಲಿ ಜವಳಿ ಪಾರ್ಕ್ ಯೋಜನೆ: 1,700 ಕೋಟಿ ರೂ.ಹೂಡಿಕೆ

• **ಉದಯವಾಹಿನಿ , ಕಲಬುರಗಿ,**

ಕಲಬುರಗಿ, –ಜಿಲ್ಲೆಯಲ್ಲಿ ಉದ್ದೇಶಿತ ಮೆಗಾ ಜವಳಿ ಪಾರ್ಕ್ ಯೋಜನೆಯು ಅತ್ಯಂತ ವೇಗವಾಗಿ ಪ್ರಗತಿ ಕಾಣುತ್ತಿದ್ದು, ಈಗಾಗಲೇ ಪ್ರಮುಖ ಹಂತದ ಪ್ರಕ್ರಿಯೆಗಳು ಯಶಸ್ವಿಯಾಗಿ ಪೂರ್ಣಗೊಂಡಿದ್ದು, ಜಿಲ್ಲೆಯ ನದಿಸಿನ್ನೂರು ಮತ್ತು ಕಿರಣಗಿ ಗ್ರಾಮಗಳ ವ್ಯಾಪ್ತಿಯಲ್ಲಿ ಒಟ್ಟು 1,000 ಎಕರೆ ಜಮೀನನ್ನು ಈ ಮಹತ್ವಾಕಾಂಕ್ಷಿ ಯೋಜನೆಗಾಗಿ ಗುರುತಿಸಲಾಗಿದೆ .

ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರೂ ಆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ಮತ್ತು ಜೈವಿಕ ತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಪಾರ್ಕ್‌ನ ಉದ್ಘಾಟನೆಗೂ ಮುನ್ನವೇ ಹೂಡಿಕೆದಾರರಿಂದ ಅಭೂತಪೂರ್ವ ಸ್ಪಂದನೆ ವ್ಯಕ್ತವಾಗಿದ್ದು, 8 ಪ್ರಮುಖ ಹೂಡಿಕೆದಾರರಿಂದ ಸುಮಾರು 1,700 ಕೋಟಿ ರೂಪಾಯಿಗಳ ಹೂಡಿಕೆಯ ಪ್ರಸ್ತಾಪಗಳು ಹರಿದುಬಂದಿವೆ ಎಂದು ಸಚಿವರು ಹೇಳಿದ್ದಾರೆ. ಬೆಂಗಳೂರಿನಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ಜವಳಿ ಇಲಾಖೆ ಹಾಗೂ ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಅಧಿಕಾರಿಗಳು, ಹೂಡಿಕೆದಾರರು ಮತ್ತು ವಿಡಿಯೊ ಸಂವಾದದ ಮೂಲಕ ಕಲಬುರಗಿ ಜಿಲ್ಲಾಧಿಕಾರಿಗಳೊಂದಿಗೆ ಸಭೆ ನಡೆಸಿ ಜವಳಿ ಪಾರ್ಕ್ ಪ್ರಗತಿ ಪರಿಶೀಲಿಸಿದರು. ಪಾರ್ಕ್‌ನ ಸಮಗ್ರ ಮಾಸ್ಟರ್ ಪ್ಲಾನ್, ಆರ್ಥಿಕ ಯೋಜನೆ ಹಾಗೂ ವಿವರವಾದ ಯೋಜನಾ ವರದಿ ಸಿದ್ಧಪಡಿಸುವ ಕಾರ್ಯ ಪೂರ್ಣಗೊಂಡಿದೆ. ಯೋಜನೆಯ ಸುಗಮ ನಿರ್ವಹಣೆಗಾಗಿ ಈಗಾಗಲೇ ಮೂರು ಪ್ರಮುಖ ಮಂಡಳಿ ಸಭೆಗಳನ್ನು (14 ಜೂನ್ 2024, 12 ನವೆಂಬರ್ 2024 ಮತ್ತು 4 ನವೆಂಬರ್ 2025) ನಡೆಸಲಾಗಿದೆ ಎಂದು ಹೇಳಿರುವ ಸಚಿವ ಪ್ರಿಯಾಂಕ್ ಖರ್ಗೆ

ಈ ಜವಳಿ ಪಾರ್ಕ್ ಸ್ಥಾಪನೆಯಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸಾವಿರಾರು ಉದ್ಯೋಗಾವಕಾಶಗಳು ಸೃಷ್ಟಿಯಾಗಲಿದ್ದು, ಪ್ರಾದೇಶಿಕ ಆರ್ಥಿಕ ಅಭಿವೃದ್ಧಿಗೆ ಹೊಸ ದಿಕ್ಸೂಚಿ ಸಿಗಲಿದೆ ಎಂದುಸಚಿವ ಪ್ರಿಯಾಂಕ್ ಖರ್ಗೆ ಇಂದಿನ ಸಭೆಯಲ್ಲಿ ಹೇಳಿದರು. ಜವಳಿ ಇಲಾಖೆಯ ಸರ್ಕಾರದ ಕಾರ್ಯದರ್ಶಿ ರೋಹಿಣಿ ಸಿಂಧೂರಿ, ಕರ್ನಾಟಕ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಂಡಳಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಗೋವಿಂದರೆಡ್ಡಿ, ಕಲಬುರಗಿ ಜಿಲ್ಲಾಧಿಕಾರಿ ಮೊಹಮ್ಮದ್ ಇಕ್ರಮುಲ್ಲಾ ಷರೀಫ್ ಹಾಗೂ ಇನ್ನಿತರ ಅಧಿಕಾರಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು,

**1,700 ಕೋಟಿ ರೂಪಾಯಿಗಳ ಹೂಡಿಕೆಯ ಪ್ರಸ್ತಾಪಗಳು**




ಉದಯವಾಹಿನಿ ಚಿತ್ರ

> ಜವಳಿ ಪಾರ್ಕಿನಲ್ಲಿ ಆರಂಭಗೊಳ್ಳಲಿರುವ ಘಟಕಗಳಿಗೆ ಅನುಕೂಲವಾಗುವಂತೆ 25 ಎಕರೆಯಲ್ಲಿ ಸೌರವಿದ್ಯುತ್ ಘಟಕವನ್ನು ಆರಂಭಿಸಲಾಗುತ್ತಿದ್ದು, ಮಾಲಿನ್ಯರಹಿತ ಹಸಿರುಶಕ್ತಿಯನ್ನು ಬಳಸಿದಂತಾಗುವುದಲ್ಲದೆ ಜಗತ್ತಿನ ತಾಪಮಾನ ಏರಿಕೆ ಹಾಗೂ ಹವಾಮಾನ ವೈಪರೀತ್ಯ ತಡೆಯಲು ಕೊಡುಗೆ ನೀಡಿದಂತಾಗುವುದು ಎಂದು ಸಚಿವರು ಸಭೆಗೆ ತಿಳಿಸಿದರು.

### ಅರಣ್ಯ ಇಲಾಖೆಯಿಂದಲೂ ಅಗತ್ಯ ಅನುಮತಿ

ಜವಳಿ ಪಾರ್ಕ್‌ಗೆ ಗುರುತಿಸಲಾಗಿರುವ ಭೂಮಿಯನ್ನು ಈಗಾಗಲೇ ಕೈಗಾರಿಕಾ ಬಳಕೆಗೆ ಪರಿವರ್ತಿಸಲಾಗಿದ್ದು, ಅರಣ್ಯ ಇಲಾಖೆಯಿಂದಲೂ ಅಗತ್ಯ ಅನುಮತಿಗಳನ್ನು ಪಡೆಯಲಾಗಿದೆ. ಇದಲ್ಲದೆ, ಬಹುಮುಖ್ಯವಾಗಿದ್ದ ಪರಿಸರ ಅನುಮತಿಯು ಅಕ್ಟೋಬರ್, 27, 2025 ರಂದು ಲಭ್ಯವಾಗಿದೆ ಎಂಬ ಮಾಹಿತಿಯನ್ನೂ ಸಚಿವರು ನೀಡಿದ್ದಾರೆ.

## ಬೈಕ್'ಗೆ ಗೂಡ್ಸ್ಆಟೋ ಡಿಕ್ಕಿ

• **ಉದಯವಾಹಿನಿ ಬೆಳಗಾವಿ:**

ಗೂಡ್ಸ್ ಆಟೋ ಹಾಗೂ ಬೈಕ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ 6 ತಿಂಗಳ ಮಗು ಸೇರಿ ಒಂದೇ ಕುಟುಂಬದ ಮೂವರು ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆಯೊಂದು ಬೆಳಗಾವಿ ಜಿಲ್ಲೆಯ ರಾಯಬಾಗ ರೈಲು ನಿಲ್ದಾಣದ ಬಳಿ ಮಂಗಳವಾರ ನಡೆದಿದೆ.

ಮೃತರನ್ನು ಮಹಾಂತೇಶ್ ಮಾನೆ, ಅವರ ಪತ್ನಿ ಸಾಕ್ಷಿ ಮಾನೆ ಹಾಗೂ 6 ತಿಂಗಳ ಮಗು ಎಂದು ಗುರುತಿಸಲಾಗಿದೆ.

ಮಹಾಂತೇಶ್ ಮಾನೆ ಕುಟುಂಬದೊಂದಿಗೆ ಬೊಮ್ಮನಾಳ ಗ್ರಾಮದಿಂದ ಬೈಕ್‌ನಲ್ಲಿ ರಾಯಬಾಗ ಪಟ್ಟಣಕ್ಕೆ ಬರುತ್ತಿದ್ದಾಗ ಈ ದುರಂತ ಸಂಭವಿಸಿದೆ.

ಪಟ್ಟಣದ ಹೊರವಲಯದ ರಸ್ತೆಯಲ್ಲಿ ಎದುರಿನಿಂದ ಅತಿ ವೇಗವಾಗಿ ಮತ್ತು ರಾಂಗ್ ಸೈಡ್‌ನಲ್ಲಿ ಬಂದ ಗೂಡ್ಸ್ ಆಟೋ ಚಾಲಕ ಬೈಕ್‌ಗೆ ನೇರವಾಗಿ ಗುದ್ದಿದ್ದಾನೆ. ಡಿಕ್ಕಿಯ ರಭಸಕ್ಕೆ ದಂಪತಿ ಹಾಗೂ ಮಗು ರಸ್ತೆಗೆ ಎಸೆಯಲ್ಪಟ್ಟು ತೀವ್ರ ರಕ್ತಸ್ರಾವದಿಂದ ಕೊನೆಯುಸಿರೆಳೆದಿದ್ದಾರೆ. ಅಪಘಾತ ಸಂಭವಿಸುತ್ತಿದ್ದಂತೆ ಆಟೋ ಚಾಲಕ ವಾಹನವನ್ನು ಬಿಟ್ಟು ಸ್ಥಳದಿಂದ ಕಾಲ್ಕಿತ್ತಿದ್ದಾನೆ. ವಿಷಯ ತಿಳಿಯುತ್ತಿದ್ದಂತೆ ರಾಯಬಾಗ ಠಾಣೆಯ ಪೊಲೀಸರು ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿದ್ದಾರೆ.

## ಚಾಲಕನ ನಿಯಂತ್ರಣ ತಪ್ಪಿ ಟಿಟಿ ಪಲ್ಟಿ

• **ಉದಯವಾಹಿನಿ ಚಿಕ್ಕಮಗಳೂರು:**

ರಸ್ತೆಯ ಇಳಿಜಾರಿನಲ್ಲಿ ಪ್ರಯಾಣಿಕನ ಪಾದರಕ್ಷೆ ಟಿಟಿ ವಾಹನದ ಚಾಲಕನ ಬಳಿ ಬಂದಿದ್ದು, ಚಾಲಕ ಪಾದರಕ್ಷೆಯನ್ನ ತೆಗೆಯಲು ಹೋಗಿ ಚಾಲಕನ ನಿಯಂತ್ರಣ ತಪ್ಪಿ ಟಿಟಿ ಕಂದಕಕ್ಕೆ ಇಳಿದಿರುವ ಘಟನೆ ಚಿಕ್ಕಮಗಳೂರು ತಾಲ್ಲೂಕಿನ ಸೀತಾಳಯ್ಯನಗಿರಿ ಬಳಿ ನಡೆದಿದೆ.

ಬೆಂಗಳೂರಿನಿಂದ 13 ಜನ ಟಿಟಿ ವಾಹನ ಮಾಡಿಕೊಂಡು ಮುಳ್ಳಯ್ಯನಗಿರಿಗೆ ಪ್ರವಾಸಕ್ಕೆ ಬಂದಿದ್ದರು. ಸಂಜೆ ಪ್ರವಾಸ ಮುಗಿಸಿಕೊಂಡು ಹೋಗುವಾಗ ಇಳಿಜಾರಿನಲ್ಲಿ ಹಿಂದೆ ಕೂತಿದ್ದ ಪ್ರಯಾಣಿಕನ ಪಾದರಕ್ಷೆ ಚಾಲಕನ ಕಾಲಿನ ಬಳಿ ಬಂದಿತ್ತು. ಪಾದರಕ್ಷೆ ಎಕ್ಸಲೇಟರ್ ಹಾಗೂ ಬ್ರೇಕ್ ಮಧ್ಯೆ ಸಿಲುಕಬಹುದು ಎಂದು ಅದನ್ನ ತೆಗೆಯಲು ಹೋದಾಗ ಗಾಡಿ ನ್ಯೂಟ್ರಲ್ ಗೇರಿಗೆ ಬಿದ್ದು ಗಾಡಿ ಚಾಲಕನ ನಿಯಂತ್ರಣ ತಪ್ಪಿ ಕಂದಕಕ್ಕೆ ಉರುಳಿ ಬಿದ್ದಿದೆ.

ಅದೃಷ್ಟವಶಾತ್ 13 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಟಿಟಿ ಕಂದಕಕ್ಕೆ ಇಳಿದ ಪರಿಣಾಮ ಗಾಡಿಯ ಮುಂಭಾಗ ಸಣ್ಣ–ಪುಟ್ಟ ಡ್ಯಾಮೇಜ್ ಆಗಿದ್ದು, ಪ್ರಯಾಣಿಕರು ಸೇಫ್ ಆಗಿದ್ದಾರೆ. ಸ್ಥಳಕ್ಕೆ ಗ್ರಾಮಾಂತರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿ ಕ್ರೇನ್ ಮೂಲಕ ಟಿಟಿ ಗಾಡಿಯನ್ನ ಕಂದಕದಿಂದ ಮೇಲಕ್ಕೆ ಎತ್ತಿದ್ದಾರೆ.

ಗ್ರಾಮಾಂತರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಟಿಟಿ ಕೆಳಗೆ ಬೀಳುತ್ತಿದ್ದಂತೆ ಸ್ಥಳೀಯ ಪ್ರವಾಸಿ ಮಿತ್ರರ ತಂಡ ಸ್ಥಳಕ್ಕೆ ಭೇಟಿ ನೀಡಿ ಟಿಟಿಯಲ್ಲಿದ್ದವರನ್ನ ರಕ್ಷಿಸಿದ್ದಾರೆ.

## ಮುಸ್ಲಿಂ ಸಂಘಟನೆಯಿಂದ ಪ್ರತಿಭಟನೆ

• **ಉದಯವಾಹಿನಿ ಧಾರವಾಡ, :**

ಗೋವನ್ನು ರಾಷ್ಟ್ರೀಯ ಪ್ರಾಣಿಯನ್ನಾಗಿ ಘೋಷಿಸುವಂತೆ ಆಗ್ರಹಿಸಿ ಉತ್ತರ ಕರ್ನಾಟಕ ಅಂಜುಮನ್ ಎ ಇಸ್ಲಾಮ್ ಸಂಘಟನೆ ಪ್ರತಿಭಟನೆ ನಡೆಸಿದೆ. ಧಾರವಾಡ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರೊಟೆಸ್ಟ್ ನಡೆಸಿರುವ ಕಾರ್ಯಕರ್ತರು, ಗೋ ಹತ್ಯೆ ತಡೆಯುವ ಜೊತೆಗೆ ಗೋವನ್ನು ರಾಷ್ಟ್ರೀಯ ಪ್ರಾಣಿಯನ್ನಾಗಿಸುವಂತೆ ಆಗ್ರಹಿಸಿದ್ದಾರೆ. ಈ ಸಂಬಂಧ ಧಾರವಾಡ ಡಿಸಿ ಮೂಲಕ ರಾಜ್ಯ ಸರ್ಕಾರಕ್ಕೆ ಮನವಿ ನೀಡಿದ್ದು, ಹಿಂದೂಪರ ಸಂಘಟನೆಗಳು ಕೂಡ ಹೋರಾಟದಲ್ಲಿ ಭಾಗಿಯಾಗುವಂತೆ ಮನವಿ ಮಾಡಲಾಗಿದೆ.

## ಧರಣಿಗೆ ಸೋಮಶೇಖರ ರೆಡ್ಡಿ ಬೆಂಬಲ

• **ಉದಯವಾಹಿನಿ ಬಳ್ಳಾರಿ, :**

ನಗರದ ಬಾಪೂಜಿ ನಗರ ಪ್ರದೇಶದಲ್ಲಿ ರಸ್ತೆ ಅಗಲೀಕರಣ ಕಾಮಗಾರಿಯಿಂದ ಮನೆ ಕಳೆದುಕೊಂಡ ಸಂತ್ರಸ್ತ ಕುಟುಂಬಗಳ ಹೋರಾಟಕ್ಕೆ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ ಬೆಂಬಲ ಸೂಚಿಸಿದರು.ವಾರ್ಡ್ ನಂ. 7 ಮತ್ತು 8ಕ್ಕೆ ಸಂಪರ್ಕ ಹೊಂದಿರುವ ರಸ್ತೆ ಅಗಲೀಕರಣ ಕಾಮಗಾರಿಯ ವೇಳೆ ಕಳೆದ ವರ್ಷ ಇಪ್ಪತ್ತಕ್ಕೂ ಹೆಚ್ಚು ಕುಟುಂಬಗಳ ಮನೆಗಳನ್ನು ತೆರವುಗೊಳಿಸಲಾಗಿತ್ತು. ಆಗ ಸಂತ್ರಸ್ತರಿಗೆ ಪರ್ಯಾಯ ನಿವೇಶನ ಹಾಗೂ ವಸತಿ ವ್ಯವಸ್ಥೆ ಕಲ್ಪಿಸುವ ಭರವಸೆ ನೀಡಲಾಗಿತ್ತು ಎಂದು ಕುಟುಂಬಗಳು ಆರೋಪಿಸಿವೆ ಆದರೆ ವರ್ಷ ಕಳೆದರೂ ಯಾವುದೇ ಕ್ರಮ ಕೈಗೊಳ್ಳದ ಹಿನ್ನೆಲೆಯಲ್ಲಿ ಸಂತ್ರಸ್ತರು ಧರಣಿ ಸತ್ಯಾಗ್ರಹ ಆರಂಭಿಸಿದ್ದಾರೆ. ಇಂದು ಧರಣಿ ಸ್ಥಳಕ್ಕೆ ಭೇಟಿ ನೀಡಿದ ಮಾಜಿ ಶಾಸಕ ಗಾಲಿ ಸೋಮಶೇಖರ ರೆಡ್ಡಿ, ಸಂತ್ರಸ್ತ ಕುಟುಂಬಗಳ ಅಹವಾಲು ಆಲಿಸಿ ಅವರಿಗೆ ಬೆಂಬಲ ವ್ಯಕ್ತಪಡಿಸಿದರು. ರಸ್ತೆ ಅಗಲೀಕರಣದ ವೇಳೆ ಮನೆ ಕಳೆದುಕೊಂಡವರಿಗೆ ಪರ್ಯಾಯವಾಗಿ ಮನೆ ಹಾಗೂ ನಿವೇಶನ ನೀಡುವುದು ಜನಪ್ರತಿನಿಧಿಗಳು ನೀಡಿದ ಭರವಸೆಗಳನ್ನು ಈಗ ಆಡಳಿತ ನಡೆಸುತ್ತಿರುವವರು ಈಡೇರಿಸಬೇಕು. ಇಲ್ಲವಾದರೆ ಜನರಿಗೆ ಮೋಸ ಮಾಡಿದಂತಾಗುತ್ತದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು.

## ಪ್ರವಾಸೋದ್ಯಮದ ಅಭಿವೃದ್ಧಿಗೆ ಹೆಚ್ಚಿನ ಅನುದಾನ: ಶಾಸಕ

• **ಉದಯವಾಹಿನಿ ದಾಂಡೇಲಿ:**

ಮಾನವನಾಗಿ ಹುಟ್ಟಿದ ಮೇಲೆ ಮಾನವನಾಗಿ ಬಾಳಬೇಕು. ಸಮಾಜಮುಖಿ ಕೆಲಸಗಳಿಗೆ ಹಣ ಉಪಯೋಗ ಮಾಡಬೇಕು. ಕ್ಷೇತ್ರದಲ್ಲಿ ಪ್ರವಾಸೋದ್ಯಮದ ಅಭಿವೃದ್ಧಿಗೆ ಹೆಚ್ಚಿನ ಅನುದಾನ ತಂದಿದ್ದೇನೆ. ಇದರಿಂದಾಗಿ ತಾಲ್ಲೂಕಿನ ಆರ್ಥಿಕ ಸ್ಥಿತಿ ಸುಧಾರಣೆಯಾಗಿದೆ ಎಂದು ಶಾಸಕ ಆರ್.ವಿ ದೇಶಪಾಂಡೆ ಹೇಳಿದರು. ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಮೂಲಸೌಕರ್ಯ ಅಭಿವೃದ್ಧಿ ಯೋಜನೆ ಅನುದಾನ ಅಡಿಯಲ್ಲಿ 16 ಕೋಟಿ ವಿವಿಧ ಕಾಮಗಾರಿಗಳಿಗೆ ದಾಂಡೇಲಿ ನಗರಸಭೆಆವರಣದಲ್ಲಿ ಶಿಲಾನ್ಯಾಸ ನೆರವೇರಿಸಿ ಮಾತನಾಡಿದರು.ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು.

ಜನರಿಗೆ ಅನುಕೂಲವಾಗುವಂತೆ ದೀರ್ಘ ಕಾಲ ಬಾಳಿಕೆ ಬರುವಂತೆ ಗುತ್ತಿಗೆದಾರರು ಕೆಲಸದ ಬಗ್ಗೆ ಎಚ್ಚರ ವಹಿಸಿ ಈ ವಿಷಯದಲ್ಲಿ ರಾಜಿ ಮಾಡಿಕೊಳ್ಳಬಾರದು. ಕಾಮಗಾರಿಗಳನ್ನು ಸಮಯಕ್ಕೆ ಮುಗಿಸಿ, ಕಳಪೆ ಆಗದಂತೆ ಎಚ್ಚರ ವಹಿಸುವುದು ಮುಖ್ಯ, ಅಭಿವೃದ್ಧಿ ಪರ ನನ್ನ ಚಿಂತನೆ ಇದ್ದೇ ಇರುತ್ತದೆ. ಚಾಲನೆ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು. ತಹಶೀಲ್ದಾರ್ ಶೈಲೇಶ ಪರಮಾನಂದ ನಗರಸಭೆ ಕಚೇರಿ ವ್ಯವಸ್ಥಾಪಕ ಪರಶುರಾಮ ಸಿಂಧೆ ವಂದಿಸಿದರು.